ಸಂಪುಟ: 21, ಸಂಚಿಕೆ: 225, ಪುಟಗಳು: 8, ಶುಕ್ರವಾರ, 24 ಮೇ 2024 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

### ಸುಭಾಷಿತ

ಅದೃಷ್ಟ ಎಂದರೆ ಅವಕಾಶವನ್ನು ಪಡೆಯುವವನು, ಬುದ್ಧಿವಂತ ಎಂದರೆ ಅವಕಾಶವನ್ನು ಸೃಷ್ಟಿಸಿಕೊಳ್ಳುವವನು.

। ಸ್ವಾಮಿ ವಿವೇಕಾನಂದ

### ಪಂಚಾಂಗ

(ಶುಕ್ರವಾರ 24, ಮೇ-2024)

- ಸಂವತ್ಸರ: ಕ್ರೋಧಿ ನಾಮ, ಋತು: ವಸಂತ
- ಅಯನ: ಉತ್ತರಾಯಣ, ಮಾಸ: ವೈಶಾಖ
- ಪಕ್ಷ: ಕೃಷ್ಣ, ತಿಥಿ: ಪಾಡ್ಯ
- ನಕ್ಷತ್ರ: ಅನೂರಾಧ
- ರಾಹುಕಾಲ: 10:40 ? 12:16
- ಗುಳಿಕಕಾಲ: 07:28 ? 09:04
- ಯಮಗಂಡಕಾಲ: 03:28 ? 5:04

## ಸಂಕ್ಷಿಪ್ತ ಸುದ್ದಿ

### ಕಾರು ಪಲ್ಟಿ: ಮಗು ಸೇರಿ ನಾಲ್ವರ ಬಲಿ



**ಹಾವೇರಿ:** ದೇವರ ದರ್ಶನಕ್ಕೆಂದು ತಿರುಪತಿಗೆ ಹೋಗುತ್ತಿದ್ದ ಕಾರು ಏಕಾಏಕಿ ನಸುಕಿನಜಾವ ಪಲ್ಟಿಯಾಗಿ ನಾಲ್ವರು ಸ್ಥಳದಲ್ಲೇ ಸಾವನ್ನಪ್ಪಿದ್ದು , 6 ಮಂದಿ ಗಂಭೀರವಾಗಿ ಗಾಯಗೊಂಡಿರುವ ಘಟನೆ ಹಾವೇರಿ ಜಿಲ್ಲೆ ರಾಣೆಬೆನ್ನೂರು ತಾಲೂಕಿನ ಹಲಗೇರಿ ಬೈಪಾಸ್ ಬಳಿ ನಡೆದಿದೆ.

ದೇವರ ದರ್ಶನಕ್ಕೆಂದು ತಿರುಪತಿಗೆ ತೆರಳುತ್ತಿದ್ದ ನಗರದ ಸಮಗಂಡಿ ಮತ್ತು ಬಾರ್ಕಿ ಎಂಬ ಎರಡು ಕುಟುಂಬಗಳು ಹೋಗುತ್ತಿದ್ದ ವೇಳೆ ರಾಣೆಬೆನ್ನೂರಿನ ರಾಷ್ಟ್ರೀಯ ಹೆದ್ದಾರಿ-4ರ ಹಲಗೇರಿ ಬ್ರಿಡ್ಜ್ ಬಳಿ ಅಪಘಾತ ಸಂಭವಿಸಿದೆ. ಚಾಲಕನ ನಿಯಂತ್ರಣ ತಪ್ಪಿದ್ದೇ ಅಪಘಾತಕ್ಕೆ ಕಾರಣ ಎಂದು ಹೇಳಲಾಗಿದೆ. ಪುಟ 2

### ವಕೀಲೆ ಚೈತ್ರಾ ಗೌಡ ಅನುಮಾನಾಸ್ಪದ ಸಾವು

**ಬೆಂಗಳೂರು:** ಇತ್ತೀಚೆಗಷ್ಟೇ ಅನುಮಾನಾಸ್ಪದ ಸಾವಿಗೀಡಾಗಿದ್ದ ಕೆಎಎಸ್ ಅಧಿಕಾರಿ ಪತ್ನಿಯೂ ಆಗಿರುವ ಹೈಕೋರ್ಟ್ ವಕೀಲರಾದ ಚೈತ್ರಾ ಗೌಡ ಅವರದ್ದು ಕೊಲೆಯಲ್ಲ, ಆತ್ಮಹತ್ಯೆ ಎಂದು ಪೊಲೀಸರ ತನಿಖೆಯಲ್ಲಿ ಬೆಳಕಿಗೆ ಬಂದಿದೆ. ಪ್ರಕರಣಕ್ಕೆ ಪುಷ್ಠಿಕೊಡುವಂತೆ ಡೆತ್ ನೋಟ್ ಸಹ ಪತ್ತೆಯಾಗಿದೆ ಎಂದು ಪೊಲೀಸ್ ಅಧಿಕಾರಿಗಳು ಮೂಲಗಳು ತಿಳಿಸಿವೆ.



ಇದೇ ತಿಂಗಳ ಮೇ 11ರಂದು ವಕೀಲೆ ಚೈತ್ರಾ ಗೌಡ ಸಂಜಯನಗರದ ಅಣ್ಣಯ್ಯಪ್ಪ ಲೇಔಟ್‌ನಲ್ಲಿರುವ ತಮ್ಮ ನಿವಾಸದಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದರು. ಆದ್ರೆ, ಚೈತ್ರಾ ಕುಟುಂಬಸ್ಥರು ಕೊಲೆ ಎಂದು ಆರೋಪಿಸಿ ಪೊಲೀಸರಿಗೆ ದೂರು ನೀಡಿದ್ದರು. ದೂರಿನ ಅನ್ವಯ ಕೆಎಎಸ್ ಅಧಿಕಾರಿ ಶಿವಕುಮಾರ್‌ನನ್ನು ಪೊಲೀಸರು ವಿಚಾರಣೆ ನಡೆಸಿದ್ದರು. ಪುಟ 2

---

### ನಾಯಿಯಂತೆ ಕಾಣಲು 12 ಲಕ್ಷ ರೂ. ಖರ್ಚು ಮಾಡಿದ್ದ ವ್ಯಕ್ತಿ

## ಈಗ ಪಾಂಡ ಆಗುವ ಆಸೆಯಂತೆ!

**ಜಪಾನ್:** ನಾಯಿಯಂತೆ ಕಾಣಲು ಬರೋಬ್ಬರಿ 12 ಲಕ್ಷ ರೂ. ಖರ್ಚು ಮಾಡಿದ್ದ ಜಪಾನ್ ವ್ಯಕ್ತಿಗೆ ಈಗ ಪಾಂಡ ಅಥವಾ ಬೆಕ್ಕಾಗುವ ಆಸೆಯಂತೆ. ಸಾಕು ಪ್ರಾಣಿಗಳೆಂದರೆ ಯಾರಿಗೆ ಇಷ್ಟವಿಲ್ಲ ಹೇಳಿ, ಮನುಷ್ಯರಿಗಿಂತಲೂ ಪ್ರಾಣಿಗಳನ್ನು ಚೆನ್ನಾಗಿಯೇ ನೋಡಿಕೊಳ್ಳುತ್ತಾರೆ, ತಮ್ಮ ಮುದ್ದು ಪ್ರಾಣಿಗಳಿಗಾಗಿ ಜನ ಏನೆಲ್ಲಾ ಮಾಡುತ್ತಾರೆ ಎಂದು ನಾವು ಸಾಕಷ್ಟು ನಿದರ್ಶನಗಳನ್ನು ನೋಡಿದ್ದೇವೆ. ಅವುಗಳ ಆಹಾರ ನಿರ್ವಹಣೆಗಾಗಿಯೇ ಜನ ಲಕ್ಷಾಂತರ ರೂ ವ್ಯಯಿಸುವ ಸಾಕಷ್ಟು ಉದಾಹರಣೆಗಳು ನಮ್ಮ ಮುಂದಿದೆ.

ಆದರೆ ಈ ವ್ಯಕ್ತಿ ಖುದ್ದಾಗಿ ನಾಯಿಯಂತೆ ಕಾಣಲು 12 ಲಕ್ಷ ರೂ. ವ್ಯಯಿಸಿದ್ದರು. ಟೊಕೊ ಎಂಬಾತನ ಈ ನಾಯಿ ಕಾಸ್ಟ್ಯೂಮ್ ಇದೀಗ ಸಾಮಾಜಿಕ ಜಾಲತಾಣಗಳಲ್ಲಿ ಭಾರಿ ವೈರಲ್ ಆಗಿತ್ತು.

ಟೊಕೊ ಯಾವಾಗಲೂ ಒಂದೇ ರೀತಿಯ ಬಟ್ಟೆಗಳನ್ನು ಧರಿಸುತ್ತಾರೆ. ಈ ಬಟ್ಟೆಗಳಲ್ಲಿ ಈ ಮನುಷ್ಯ ಸೇಮ್ ನಾಯಿಯಂತೆ ಕಾಣುತ್ತಾರೆ.



ಇವರನ್ನು ನೋಡಿದರೆ ನಾಯಿಯಲ್ಲ ಮನುಷ್ಯ ಎಂದು ಯಾರೂ ನಂಬಲು ಸಾಧ್ಯವಾಗುವುದಿಲ್ಲ. ಅಷ್ಟರ ಮಟ್ಟಿಗೆ ಈ ನಾಯಿ ಕಾಸ್ಟ್ಯೂಮ್ ನೈಜವಾಗಿದೆ.

ಟೊಕೊ ಪ್ರಕಾರ, ಅವರು ಬಾಲ್ಯದಿಂದಲೂ ಪ್ರಾಣಿಗಳಂತೆ ಬದುಕಲು ಬಯಸಿದ್ದರು. ಇವರಿಗೆ ನಾಯಿಗಳ ಮೇಲೆ ವಿಶೇಷ ಪ್ರೀತಿ ಇತ್ತು. ಪುಟ 2

## ಬೆಂಗಳೂರಿನಲ್ಲಿ ಡೆಂಗ್ಯೂ ಪ್ರಕರಣ ಶೇ.40 ರಷ್ಟು ಏರಿಕೆ

**ಬೆಂಗಳೂರು:** ಕಳೆದೊಂದು ವಾರದಿಂದ ಬೆಂಗಳೂರಿನಲ್ಲಿ ವಾತಾವರಣ ಬದಲಾಗಿದ್ದು ಬಿಟ್ಟು ಬಿಟ್ಟು ಮಳೆ ಸುರಿಯುತ್ತಿದೆ. ತಂಪಾದ ವಾತವರಣದಿಂದ ಜನರು ಖುಷಿಯಗಿದ್ದಾರೆ. ಆದರೆ ಮಳೆಯಿಂದ ನಗರದಲ್ಲಿ ಡೆಂಗ್ಯೂ/ಡೆಂಘಿ ಪ್ರಕರಣಗಳಲ್ಲಿ ವಿಪರೀತ ಏರಿಕೆ ಕಂಡುಬಂದಿರುವುದು ಆತಂಕಕ್ಕೆ ಕಾರಣವಾಗಿದೆ. ಸದ್ಯ ರಾಜಧಾನಿಯಲ್ಲಿ ಶೇ 40 ರಷ್ಟು ಡೆಂಘಿ ಪ್ರಕರಣಗಳಲ್ಲಿ ಏರಿಕೆ ಕಂಡುಬಂದಿದೆ. ಇದರ ಜೊತೆಗೆ ಇತರ ಜ್ವರದ ಪ್ರಕರಣಗಳು ಕೂಡಾ ಹೆಚ್ಚಾಗಿದ್ದು, ಆರೋಗ್ಯ ಇಲಾಖೆಯ ಚಿಂತೆಗೆ ಕಾರಣವಾಗಿದೆ.

ಈ ವರ್ಷ ಜನರು ಅತಿಯಾಗಿ ಎಳೆನೀರು ಸೇವಸಿ ಚಿಪ್ಪುಗಳನ್ನು ಎಲ್ಲೆಂದರಲ್ಲಿ ಬಿಸಾಡಿದ್ದಾರೆ. ಇದರಲ್ಲಿ ನೀರು ನಿಂತು ಅತಿಯಾಗಿ ಸೊಳ್ಳೆಗಳ ಉತ್ಪತ್ತಿಯಾಗುತ್ತಿದೆ. ಇದು ಈಗ ಆರೋಗ್ಯ ಇಲಾಖೆಯ ತಲೆ ಬಿಸಿಗೆ ಕಾರಣವಾಗಿದೆ.

ಎಲ್ಲೆಂದರಲ್ಲಿ ಬಿಸಾಡಿರುವ ಎಳೆನೀರು ಚಿಪ್ಪುಗಳಲ್ಲಿ ಅತಿಯಾಗಿ ಸೊಳ್ಳೆಗಳ ಉತ್ಪತ್ತಿಯಾಗಿದೆ. ಇದರಿಂದಲೇ




ಡೆಂಘಿ ಸೇರಿದ್ದಂತೆ ನಾನಾ ಖಾಯಿಲೆಗಳು ಏರಿಕೆಯಾಗುತ್ತಿವೆ ಎಂಬುದು ಆರೋಗ್ಯ ಇಲಾಖೆಯ ಅಭಿಪ್ರಾಯ. ಎಳೆನೀರು ಕುಡಿದು ಬಿಸಾಡಿರುವ ಚಿಪ್ಪುಗಳನ್ನು ವಿಲೇವಾರಿ ಮಾಡುವುದೇ ಆರೋಗ್ಯ ಇಲಾಖೆಗೆ ದೊಡ್ಡ ಸವಾಲಾಗಿ ಪರಿಣಮಿಸಿದೆ. ಈ ಬಗ್ಗೆ ಬಿಬಿಎಂಪಿಗೂ ಸೂಚನೆ ನೀಡಲಾಗಿದೆ ಎಂದು ಆರೋಗ್ಯ ಇಲಾಖೆ ಆಯುಕ್ತ ರಂದೀಪ್ ತಿಳಿಸಿದ್ದಾರೆ. ಪುಟ 2

---

### ಸಂತ್ರಸ್ತೆಯರು ದೂರು ನೀಡಲು ಎಸ್‌ಐಟಿ ಸಹಾಯವಾಣಿ

# ಬಂತು 30ಕ್ಕೂ ಹೆಚ್ಚು ಕರೆ

**ಹಾಸನ:** ಹಾಸನ ಜೆಡಿಎಸ್ ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧದ ಅಶ್ಲೀಲ ವಿಡಿಯೋ ಮತ್ತು ಲೈಂಗಿಕ ದೌರ್ಜನ್ಯ ಆರೋಪ ಪ್ರಕರಣ ಬಗೆದಷ್ಟೂ ಹೊರಬರುತ್ತಿದೆ. ಪ್ರಕರಣ ಸಂಬಂಧ ಸಂತ್ರಸ್ತೆಯರು ದೂರು ನೀಡಲು ಎಸ್‌ಐಟಿ ಆರಂಭಿಸಿದ್ದ ಸಹಾಯವಾಣಿಗೆ ಈವರೆಗೆ 30ಕ್ಕೂ ಹೆಚ್ಚು ಕರೆಗಳು ಬಂದಿವೆ ಎಂಬುದು ತಿಳಿದುಬಂದಿದೆ. ದೌರ್ಜನ್ಯ ಸಂಬಂಧ 30 ಕರೆ ಬಂದಿದೆ ಎಂದು ಎಸ್ ಐಟಿ ಮಾಹಿತಿ ನೀಡಿದೆ.

ಆದರೆ ಇದುವರೆಗೂ ಸಂತ್ರಸ್ತ ಮಹಿಳೆಯರು ದೂರು ನೀಡಿಲ್ಲ. ಹೀಗಾಗಿ ಹೆಲ್ಪ್‌ಲೈನ್ ಸಂಪರ್ಕಿಸಿ ಮಾಹಿತಿ ನೀಡುವಂತೆ ಮತ್ತೊಮ್ಮೆ ಎಸ್ ಐಟಿ ಮನವಿ ಮಾಡಿದೆ. 6360938947 ಸಹಾಯವಾಣಿ ಸಂಖ್ಯೆಗೆ ಸಂಪರ್ಕಿಸಿ ದೂರು ನೀಡಲು ಎಸ್ ಐಟಿ ಮನವಿ ಮಾಡಿದೆ. ದೂರು ನೀಡಿದರೆ ಮಾಹಿತಿ ಸಂಗ್ರಹಿಸಲು ಸಿದ್ದರಿದ್ದೇವೆ. ಗುರುತು, ಮಾಹಿತಿಯನ್ನು ಗೌಪ್ಯವಾಗಿ ಇಡಲಾಗುವುದು ಎಂದು ಎಸ್ ಐಟಿ ಭರವಸೆ ನೀಡಿದೆ.

ನೇರವಾಗಿ ಅಧಿಕಾರಿಗಳನ್ನೂ ಸಂಪರ್ಕಿಸಿ ದೂರು ನೀಡಹುದು ಎಂದು ಎಸ್‌ಐಟಿ ಹೇಳಿದೆ. ಈಗಾಗಲೇ ಪ್ರಜ್ವಲ್ ರೇವಣ್ಣ ವಿರುದ್ಧ ಮೂರು ಪ್ರಕರಣಗಳು ದಾಖಲಾಗಿವೆ. ಹೆಲ್ಪ್ ಲೈನ್ ಮೂಲಕ ದಾಖಲಾಗುವ ಹೇಳಿಕೆಗಳನ್ನೂ ಎಸ್ ಐಟಿ ಪರಿಗಣಿಸುತ್ತಿದೆ.



### ಭವಾನಿ ಕಾರು ಚಾಲಕ ಅಜಿತ್‌ಗೆ ಮೂರನೇ ಬಾರಿ ನೋಟಿಸ್

ಜೆಡಿಎಸ್ ಶಾಸಕ ಹೆಚ್ ಡಿ ರೇವಣ್ಣ ವಿರುದ್ಧದ ಮಹಿಳೆ ಕಿಡ್ನ್ಯಾಪ್ ಪ್ರಕರಣಕ್ಕೆ ಸಂಬಂಧಿಸಿದಂತೆ ಅವರ ಪತ್ನಿ ಭವಾನಿಯವರ ಕಾರು ಚಾಲಕ ಅಜಿತ್‌ಗೆ ಎಸ್‌ಐಟಿ 3ನೇ ಬಾರಿ ನೋಟಿಸ್ ನೀಡಿದೆ. ಈಗಾಗಲೇ ನೀಡಿರುವ 2 ನೋಟಿಸ್ ಗೆ ಅಜಿತ್ ಕಡೆಯಿಂದ ಯಾವುದೇ ಪ್ರತಿಕ್ರಿಯೆ ಬಂದಿಲ್ಲ. ಪುಟ 2

### ವಿಕಸಿತ ಭಾರತದ ಗುರಿಗೆ ದೈವ ಪ್ರೇರಣೆ

## ದೈವವೇ ನನಗೆ ಶಕ್ತಿ ತುಂಬುತ್ತಿದೆ

**ನವದೆಹಲಿ:** ಯಾವುದೋ ಮಹತ್ತರ ಕಾರ್ಯಕ್ಕಾಗಿ ಆ ದೇವರೇ ನನ್ನನ್ನು ಕಳುಹಿಸಿದ್ದಾನೆ. ದೇವರು ನನ್ನ ಕೈಹಿಡಿದು ನಡೆಸುತ್ತಿದ್ದಾನೆ ಎನಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಭಾರತವು ಮುಂದುವರಿದ ದೇಶವನ್ನಾಗಿ ಮಾಡಲು 2047ರವರೆಗೂ ತಾನು 24 ಗಂಟೆ ಕೆಲಸ ಮಾಡಬೇಕು. ಅದಕ್ಕಾಗಿ ಆ ದೇವರೇ ತನಗೆ ಚೈತನ್ಯ ನೀಡುತ್ತಿದ್ದಾನೆ. 2047ರೊಳಗೆ ವಿಕಸಿತ ದೇಶವನ್ನಾಗಿಸುವ ಗುರಿ ಈಡೇರುತ್ತದೆ ಎನ್ನುವ ವಿಶ್ವಾಸ ತನಗಿದೆ. ಈ ಗುರಿ ಸಾಧನೆಯಾಗುವವರೆಗೂ ಆ ದೇವರು ವಾಪಸ್ ಕರೆಸಿಕೊಳ್ಳುವುದಿಲ್ಲ ಎಂದು ಅವರು ಹೇಳಿದ್ದಾರೆ. ಇಂಡಿಯಾ ಟಿವಿ ವಾಹಿನಿ ಆಯೋಜಿಸಿದ ಕಾರ್ಯಕ್ರಮವೊಂದರಲ್ಲಿ ಅವರು ಮಾತನಾಡುತ್ತಿದ್ದರು.



ಭಾರತದ ಜಿಡಿಪಿ 2047ರೊಳಗೆ 35 ಟ್ರಿಲಿಯನ್ ಡಾಲರ್ ಮಟ್ಟ ಮುಟ್ಟಬೇಕೆಂದೂ ಗುರಿ ಇಟ್ಟಿದೆ. ಭಾರತ ವಿಕಸಿತ ಅಥವಾ ಮುಂದುವರಿದ ದೇಶವಾಗಬೇಕಾದರೆ ಅಷ್ಟು ಜಿಡಿಪಿ ಸಾಧನೆ ಅವಶ್ಯ. ಹಾಗೂ ತಲಾದಾಯ ಹೆಚ್ಚಳವೂ ಬಹಳ ಮುಖ್ಯ. ಭಾರತ ಈ ಗುರಿ ಸಾಧಿಸಬೇಕಾದರೆ ವರ್ಷಕ್ಕೆ ಶೇ. 9ರ ದರದಲ್ಲಿ ಬೆಳವಣಿಗೆ ಹೊಂದಬೇಕೆಂದು ಹಲವು ಆರ್ಥಿಕ ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

**ಪಾಕಿಸ್ತಾನದ ತಾಕತ್ತು ಏನೆಂದು ಲಾಹೋರ್‌ಗೆ ಹೋಗಿ ತಿಳಿದುಕೊಂಡೆ:** ಪಾಕಿಸ್ತಾನದ ಬಳಿ ಅಣು ಬಾಂಬ್ ಇರುವುದರಿಂದ ಅದಕ್ಕೆ ಗೌರವ ಕೊಡಬೇಕು ಎಂದು ಕಾಂಗ್ರೆಸ್ ನ ಹಿರಿಯ ಮುಖಂಡ ಮಣಿಶಂಕರ್ ಅಯ್ಯರ್ ನೀಡಿದ ಹೇಳಿಕೆಗೆ ಪ್ರಧಾನಿಗಳು ವ್ಯಂಗ್ಯವಾಗಿ ತಿರುಗೇಟು ಕೊಟ್ಟಿದ್ದಾರೆ. ತಾನು ಖುದ್ದಾಗಿ ಲಾಹೋರ್‌ಗೆ ಹೋಗಿ ಅದರ ತಾಕತ್ತು ಏನೆಂದು ತಿಳಿದುಕೊಂಡು ಬಂದಿದ್ದೇನೆ ಎಂದು ನರೇಂದ್ರ ಮೋದಿ ಲೇವಡಿ ಮಾಡಿದ್ದಾರೆ. ನರೇಂದ್ರ ಮೋದಿ ಪ್ರಧಾನಿಯಾಗಿ ಒಂದು ವರ್ಷದಲ್ಲಿ, ಅಂದರೆ 2015ರಲ್ಲಿ ದಿಢೀರನೇ ಲಾಹೋರ್‌ಗೆ ಹೋಗಿ ಅಂದಿನ ಪಾಕ್ ಪ್ರಧಾನಿ ನವಾಜ್ ಷರೀಫ್ ಅವರನ್ನು ಭೇಟಿ ಮಾಡಿ ಬಂದಿದ್ದರು. ಪುಟ 2

---

### ಗಾಳಿಯಲ್ಲೇ ಕೆಟ್ಟು ನಿಂತ ಹೆಲಿಕಾಪ್ಟರ್ , ತುರ್ತು ಭೂಸ್ಪರ್ಶ

## ತಪ್ಪಿದ ಅನಾಹುತ

**ಕೇದಾರನಾಥ:** ಕೇದಾರನಾಥ ಬಳಿ ಹೆಲಿಕಾಪ್ಟರ್ ಒಂದು ಗಾಳಿಯಲ್ಲೇ ಕಟ್ಟು ನಿಂತಿದ್ದು, ತುರ್ತು ಭೂಸ್ಪರ್ಶ ಮಾಡಲಾಗಿದ್ದು, ಭಾರಿ ಅನಾಹುತ ತಪ್ಪಿದೆ. ಚಾರ್ ಧಾಮ್ ಯಾತ್ರೆ ಮುಂದುವರೆದಿದೆ. ಇಲ್ಲಿಯವರೆಗೆ ಲಕ್ಷಾಂತರ ಭಕ್ತರು ಭೇಟಿ ನೀಡುತ್ತಿದ್ದಾರೆ. ಕೇದಾರನಾಥ ಧಾಮಕ್ಕೆ ಜನರನ್ನು ಕರೆದೊಯ್ಯುತ್ತಿದ್ದ ಹೆಲಿಕಾಪ್ಟರ್‌ನಲ್ಲಿ ತಾಂತ್ರಿಕ ದೋಷ ಕಂಡು ಬಂದ ಹಿನ್ನೆಲೆಯಲ್ಲಿ ತುರ್ತು ಲ್ಯಾಂಡಿಂಗ್ ಮಾಡಲಾಯಿತು. ಆದರೆ, ಯಾವುದೇ ಪ್ರಾಣಹಾನಿ ಅಥವಾ ಆಸ್ತಿ-ಪಾಸ್ತಿ ನಷ್ಟವಾಗಿಲ್ಲ ಎಂಬುದು ಸಮಾಧಾನದ ಸಂಗತಿ. ಹೆಲಿಕಾಪ್ಟರ್ ನಲ್ಲಿ 6 ಮಂದಿ ಪ್ರಯಾಣಿಕರಿದ್ದರು. ಪುಟ 2



### ಆ ಮನೆಯಲ್ಲಿ ನನ್ನ ಮಾನಭಂಗವಾಗಿದೆ, ಚಾರಿತ್ರ್ಯವಧೆ ನಡೆಸಿದ್ದಾರೆ

## ಪಾಲಿಗ್ರಾಫ್ ಪರೀಕ್ಷೆಗೆ ಸಿದ್ಧ

**ನವದೆಹಲಿ:** ಆಮ್ ಆದ್ಮಿ ಪಕ್ಷದ ರಾಜ್ಯಸಭಾ ಸಂಸದೆ ಸ್ವಾತಿ ಮಲಿವಾಲ್‌ಅವರು ಅರವಿಂದ್ ಕೇಜ್ರಿವಾಲ್‌ಅವರ ನಿವಾಸದಲ್ಲಿ ಅವರ ಆಪ್ತ ಕಾಯದರ್ಶಿ ವಿಭವ್ ಕುಮಾರ್ ತಮ್ಮ ಮೇಲೆ ನಡೆಸಿದ ಹಲ್ಲೆ ಕುರಿತು ಮಾಧ್ಯಮದ ಮುಂದೆ ಮಾತನಾಡಿದ್ದಾರೆ. ಆ ಮನೆಯಲ್ಲಿ ನನ್ನ ಮಾನಭಂಗ ನಡೆದಿದೆ, ಚಾರಿತ್ರ್ಯ ವಧೆಯಾಗಿದೆ, ಎಫ್‌ಐಆರ್‌ನಲ್ಲಿ ತಾನು ಹೇಳಿರುವುದು ನಿಜ ಎಂದು ಸ್ವಾತಿ ಮಲಿವಾಲ್ ಹೇಳಿದ್ದಾರೆ. ನಾರ್ಕೋ ಪರೀಕ್ಷೆ ಮತ್ತು ಪಾಲಿಗ್ರಾಫ್‌ಗೆ ಒಳಗಾಗಲು ಸಿದ್ಧ ಎಂದು ಅವರು ಹೇಳಿದ್ದಾರೆ.

ರಾಜ್ಯಸಭಾ ಸದಸ್ಯ ಸ್ಥಾನಕ್ಕೆ ರಾಜೀನಾಮೆ ನೀಡುವುದಿಲ್ಲ ಎಂದು ಸ್ವಾತಿ ಮಲಿವಾಲ್ ಸ್ಪಷ್ಟಪಡಿಸಿದ್ದಾರೆ. ಅವರಿಗೆ ನನ್ನ ರಾಜ್ಯಸಭಾ ಸ್ಥಾನ ಬೇಕಿದ್ದರೆ ಪ್ರೀತಿಯಿಂದ ಕೇಳಿದ್ದರೆ ನನ್ನ ಪ್ರಾಣವನ್ನು ಬೇಕಿದ್ದರೂ ಬಿಡುತ್ತಿದ್ದೆ, ಸಂಸದೆ ಎಂಬುದು ಸಣ್ಣ ವಿಷಯ, ಆದರೆ ಈಗ ನನ್ನ ಮೇಲೆ ಹಲ್ಲೆ ನಡೆದಿದೆ, ಪ್ರಪಂಚದ ಯಾವೊಂದು ಶಕ್ತಿ ಬಂದು ಹೇಳಿದರೂ ನಾನು ರಾಜೀನಾಮೆ ನೀಡುವ ಮಾತೇ ಇಲ್ಲ ಎಂದಿದ್ದಾರೆ.



ನನ್ನನ್ನು ಟ್ರೋಲ್ ಮಾಡಲಾಗುತ್ತಿದೆ, ನಾನು ಒತ್ತಡಕ್ಕೆ ಮಣಿದು ಈ ಪ್ರಕರಣವನ್ನು ಇಲ್ಲಿಗೆ ಬಿಡುತ್ತೇನೆ ಎಂದುಕೊಂಡಿದ್ದಾರೆ, ಆದರೆ ನಾನು ಎಫ್ ಐಆರ್ ನಲ್ಲಿ ಹೇಳಿರುವುದೆಲ್ಲವೂ ನಿಜ, ನಾನು ಪಾಲಿಗ್ರಾಫ್ ಹಾಗೂ ನಾರ್ಕೋ ಪರೀಕ್ಷೆ ಸಿದ್ಧನಿದ್ದೇನೆ, ನಾನು ಹೋರಾಡುತ್ತೇನೆ ಎಂದರು. ಪುಟ 2

---

### ಕಸ ವಿಲೇವಾರಿಗೆ ಜೂನ್ 1ರಿಂದಲೇ ಹೊಸ ಯೋಜನೆ

## ಪ್ರತ್ಯೇಕ ಕಂಪನಿಯನ್ನೇ ಸ್ಥಾಪನೆ ಮಾಡಿದ ಸರ್ಕಾರ

**ಬೆಂಗಳೂರು:** ಕಸ ವಿಲೇವಾರಿಗೆ ಹೊಸ ಯೋಜನೆ ಜಾರಿಗೊಳಿಸಲು ರಾಜ್ಯ ಸರ್ಕಾರ ನಿರ್ಧರಿಸಿದ್ದು, ಅದಕ್ಕೆಂದೇ ಹೊಸ ಕಂಪನಿಯೊಂದನ್ನು ಸ್ಥಾಪನೆ ಮಾಡಿ ಆದೇಶ ಹೊರಡಿಸಿದೆ. ಜೂನ್ 1 ರಿಂದಲೇ ಹೊಸ ಯೋಜನೆ ಜಾರಿಗೆ ಬರಲಿದೆ. ನಗರದಲ್ಲಿ ಕಸದ ಸಮಸ್ಯೆ ಬಗೆಹರಿಸುವ ನಿಟ್ಟಿನಲ್ಲಿ ಕಸ ವಿಲೇವಾರಿಗೆಂದೇ 'ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ಕಂಪನಿ ನಿಯಮಿತ ಸ್ಥಾಪನೆ ಮಾಡಿ ಸರ್ಕಾರ ಆದೇಶಿಸಿದೆ. ರಾಜ್ಯ ಸರ್ಕಾರ ಹಾಗೂ ಬಿಬಿಎಂಪಿ ಜಂಟಿಯಾಗಿ ಈ ಕಂಪನಿ ಸ್ಥಾಪನೆ ಮಾಡಿವೆ. ಇನ್ನು ಮುಂದೆ ನಗರದಲ್ಲಿ ಕಸದ ಸಮಸ್ಯೆ ಕಂಡುಬಂದರೆ ಈ ಕಂಪನಿಯೇ ನಿರ್ವಹಣೆ ಮಾಡಲಿದೆ.

**ಕಂಪನಿಯ ಕೆಲಸವೇನು?:** ಕಸ ಸಂಗ್ರಹಣೆ, ಸಾಗಾಣಿಕೆ ಹಾಗೂ ವಿಲೇವಾರಿ ಕಾರ್ಯವನ್ನು ಜೂನ್ 1 ರಿಂದ ಕಂಪನಿಯೇ ನಿರ್ವಹಣೆ ಮಾಡಲಿದೆ. ಮನೆ ಮನೆಯಿಂದ ಆಟೋದಲ್ಲಿ ಕಸ ಸಂಗ್ರಹಣೆ ಮಾಡುವುದು, ಸಂಗ್ರಹ ಮಾಡಿದ ಕಸವನ್ನು ಟಿಪ್ಪರ್ ಲಾರಿಗಳ ಮೂಲಕ ಕಸ ಸಂಸ್ಕರಣಾ ಘಟಕ ಅಥವಾ ಕ್ವಾರಿಗಳಿಗೆ ಸಾಗಿಸುವುದು ಕಂಪನಿಯ ಕೆಲಸವಾಗಿರಲಿದೆ.



ಬಿಬಿಎಂಪಿ ಅಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಆಟೋ, ಟಿಪ್ಪರ್, ಕಾಂಪ್ಯಾಕ್ಟರ್, ಚಾಲಕರು, ಸಹಾಯಕರು ಇನ್ನು ಮುಂದೆ ಕಂಪನಿ ವ್ಯಾಪ್ತಿಗೆ ಬರಲಿದ್ದಾರೆ. ಘನತ್ಯಾಜ್ಯ ವಿಭಾಗದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿಗಳು, ವಾರ್ಡ್ ಮಟ್ಟದ ಇಂಜಿನಿಯರ್‌ಗಳು, ಸಿಬ್ಬಂದಿ ಹಾಗೂ ಮಾರ್ಷಲ್‌ಗಳು ಕಂಪನಿ ಅಧೀನಕ್ಕೆ ಒಳಪಡಲಿದ್ದಾರೆ. ಪುಟ 2

### ಬೆಳಗಾವಿ ಗುಂಪು ಘರ್ಷಣೆ: ಕಲ್ಲು ತೂರಾಟ, ತಲ್ವಾರ್ ಪ್ರದರ್ಶಿಸಿದವರ ವಿರುದ್ಧ ಎಫ್‌ಐಆರ್

## 10 ಮಂದಿ ಬಂಧನ

**ಬೆಳಗಾವಿ:** ಬೆಳಗಾವಿ ನಗರದ ಅಳ್ವಾನ್ ಗಲ್ಲಿಯಲ್ಲಿ ನಡೆದ ಗುಂಪು ಘರ್ಷಣೆ ಸಂಬಂಧ ಶಹಾಪುರ ಠಾಣೆಯಲ್ಲಿ 2 ಪ್ರತ್ಯೇಕ ಪ್ರಕರಣ ದಾಖಲಾಗಿದೆ. ಮುಸ್ಲಿಮ್ ಮತ್ತು ಹಿಂದೂ ಯುವಕರ ಮೇಲೆ ಕೇಸ್ ದಾಖಲಿಸಲಾಗಿದೆ. ತಲ್ವಾರ್ ಪ್ರದರ್ಶನ, ಕಲ್ಲು ತೂರಾಟ ಸಂಬಂಧ ಐಪಿಸಿ ಸೆಕ್ಷನ್ 143, 147, 148, 323, 324, 307, 354, 504, 506, 153೦, 149 ರ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. 13 ಹಿಂದೂ ಯುವಕರ ಮೇಲೂ ಐಪಿಸಿ ಸೆಕ್ಷನ್ 143, 147, 148, 323, 324, 307, 354, 504, 506, 153೦ ಹಾಗೂ 149ರಡಿ ಪ್ರಕರಣ ದಾಖಲಿಸಲಾಗಿದೆ.

ಈ ಮಧ್ಯೆ, ಎರಡೂ ಗುಂಪುಗಳ ತಲಾ ಐವರನ್ನು ಪೊಲೀಸರು ಬಂಧಿಸಿದ್ದಾರೆ. ತಲ್ವಾರ್ ಎಸೆದ ಆರೋಪ ಎದುರಿಸುತ್ತಿರುವ ಅಬ್ದುಲ್ ಎಂಬಾತನನ್ನೂ ಬಂಧಿಸಲಾಗಿದೆ.

ಬೆಳಗಾವಿಯ ಅಳ್ವಾನ್‌ನ ಆದರ್ಶ ಮರಾಠ ವಿದ್ಯಾಮಂದಿರ ಶಾಲೆ ಗ್ರೌಂಡ್ ನಲ್ಲಿ



ಗುರುವಾರ ಸಂಜೆ 4.30ಕ್ಕೆ ಅಪ್ರಾಪ್ತರು ಕ್ರಿಕೆಟ್ ಆಟ ಆಡಿದ್ದರು. ನಂತರ ಗೆದ್ದ ತಂಡದ ಮೇಲೆ ಮತ್ತೊಂದು ತಂಡದಿಂದ ಹಲ್ಲೆ ನಡೆದಿತ್ತು. ಘರ್ಷಣೆ ಮುಂದುವರಿದು ಸಂಜೆ 6 ಗಂಟೆಗೆ ಒಂದು ಯುವಕರ ಗುಂಪು ಕಲ್ಲು ತೂರಾಟ ಮಾಡಿತ್ತು. ಹಿಂದೂ ಮನೆಗಳ ಮೇಲೆ ಕಲ್ಲು ತೂರಾಟ ಮಾಡಲಾಗಿತ್ತು. ಆ ಸಂದರ್ಭದಲ್ಲಿ ಕಲ್ಲು ತೂರದಂತೆ ಅಳ್ವಾನ್ ಗಲ್ಲಿ ನಿವಾಸಿಗಳು ಎಚ್ಚರಿಕೆ ನೀಡಿದ್ದರು. ಪುಟ 2

### ರಾಯಚೂರು ಜಿಲ್ಲೆಯಲ್ಲಿ ಕಳಪೆ ಬೀಜಗಳ ಹಾವಳಿ

## ರೈತರ ಪ್ರತಿಭಟನೆ

**ರಾಯಚೂರು:** ಬಿಸಿಲುನಾಡು ರಾಯಚೂರಿನಲ್ಲಿ ಕಳಪೆ ಬೀಜಗಳ ಹಾವಳಿ ಶುರುವಾಗಿದೆ. ಕಳಪೆ ಬೀಜಗಳನ್ನ ಕಡಿಮೆ ಹಣದಲ್ಲಿ ಮಾರಾಟ ಮಾಡಲಾಗುತ್ತಿರುವ ಹಿನ್ನಲೆ ಅನಕ್ಷರಸ್ಥ ರೈತರು ಮೋಸ ಹೋಗುತ್ತಿದ್ದಾರೆ. ಹೀಗಾಗಿ ಅಕ್ರಮ ತಡೆಯಲು ಹೋರಾಟ ನಡೆಸಲಾಗುತ್ತಿದೆ. ಜಿಲ್ಲೆಯಲ್ಲಿ ಕಳಪೆ ಬೀಜಗಳ ಹಾವಳಿ ಶುರುವಾಗಿದೆಯಂತೆ ಆಕ್ರೋಶ ವ್ಯಕ್ತಪಡಿಸಿ ರೈತರು ನ್ಯಾಯಕ್ಕಾಗಿ ಹೋರಾಟ ನಡೆಸಿದ್ದಾರೆ.

ರೈತರು ರಾಯಚೂರು ನಗರದಲ್ಲಿರುವ ಜಿಲ್ಲಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ಮಾಡಿದ್ದಾರೆ. ಕಳಪೆ ಬೀಜಗಳಿಂದಾಗುತ್ತಿರುವ ಸಮಸ್ಯೆಗಳ ಬಗ್ಗೆ ಅಧಿಕಾರಿಗಳಿಗೆ ತಿಳಿಸಿದ್ದಾರೆ. ಅನಕ್ಷರಸ್ಥ ರೈತರು 10, 20 ಕಡಿಮೆ ದರ ಅಂತ ಅಧಿಕೃತನೋ ಅನಧಿಕೃತನೋ ಅಂತ ಗೊತ್ತಾಗದೇ ಬೀಜಗಳನ್ನ ಖರೀದಿಸಿ ಬಿಡುತ್ತಾರೆ.



# ಎನ್‌ಡಿಎ ಅಭ್ಯರ್ಥಿ ವಿವೇಕಾನಂದ ಗೆಲ್ಲಿಸಿ: ಅನ್ನದಾನಿ



**ಮಂಡ್ಯ:** ಜಿಲ್ಲೆಯಾದ್ಯಂತ ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣಾ ಪ್ರಚಾರದಲ್ಲಿ ಭಾಗವಹಿಸಿದ್ದೇವೆ, ಅಭ್ಯರ್ಥಿ ಪರವಾಗಿ ಮತ ಪ್ರಚಾರ ಆರಂಭಿಸಿದ್ದೇವೆ, ಮಿಮ್ಸ್‌ನಲ್ಲಿನ ಪ್ರಾಧ್ಯಾಪಕರು ಹಾಗೂ ಸಹಾಯಕ ಪ್ರಾಧ್ಯಾಪಕರು ಸೇರಿದಂತೆ ಎಲ್ಲರೂ ಮೈತ್ರಿ ಅಭ್ಯರ್ಥಿ ವಿವೇಕಾನಂದ ಅವರನ್ನು ಗೆಲ್ಲಿಸಿಕೊಡಬೇಕು ಎಂದು ಮಾಜಿ ಶಾಸಕ ಜೆಡಿಎಸ್ ಮುಖಂಡ ಕೆ.ಅನ್ನದಾನಿ ಮನವಿ ಮಾಡಿದರು.

ನಗರದ ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ವಿಧಾನ ಪರಿಷತ್ ದಕ್ಷಿಣ ಶಿಕ್ಷಕರ ಕ್ಷೇತ್ರದ ಮೈತ್ರಿ ಅಭ್ಯರ್ಥಿ ಕೆ.ವಿವೇಕಾನಂದ ಅವರ ಪರವಾಗಿ ಪ್ರಾಧ್ಯಾಪಕರಲ್ಲಿ ಗುರುವಾರ ಮತ ಯಾಚನೆ ಮಾಡಿದರು.

ವಿವೇಕಾನಂದ ಅವರು ಸಮಾಜ ಸೇವಾ ಕ್ಷೇತ್ರದಲ್ಲಿ ತೊಡಗಿಕೊಂಡು ಸೇವೆಯನ್ನು ಮುಂದುವರಿಸಿದ್ದಾರೆ, ಅವರನ್ನು ಗೆಲ್ಲಿಸಿಕೊಂಡು ಬಂದರೆ ಶಿಕ್ಷಕರ ಸಮಸ್ಯೆಯು ಬಗೆಹರಿಯಲಿದೆ, ಹಾಗಾಗಿ ಎನ್‌ಡಿಎ ಅಭ್ಯರ್ಥಿಯನ್ನು ಗೆಲ್ಲಿಸಿಕೊಡುವ ಭರವಸೆಯನ್ನು ಶಿಕ್ಷಕರು ಮತ್ತು ಪ್ರಾಧ್ಯಾಪಕರು ನೀಡಿರುವುದರಿಂದ ನಮಗೆ ಗೆಲುವು ನಿಶ್ಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಮೊದಲ ಪ್ರಾಶಸ್ತ್ಯ ಮತವನ್ನು ನಮ್ಮ ಎನ್‌ಡಿಎ ಅಭ್ಯರ್ಥಿಗೆ ನೀಡಬೇಕು. ಜಿಲ್ಲೆಯಲ್ಲಿ ಅತಿ ಹೆಚ್ಚು ಮತಗಳನ್ನು ನೀಡಲು ಎನ್‌ಡಿಎ ಅಭ್ಯರ್ಥಿಗೆ ಹೆಚ್ಚು ಮತಗಳನ್ನು ಕೊಡಿಸಲು ಶ್ರಮ ವಹಿಸುತ್ತೇವೆ, ಈ ಬಾರಿ ಶಿಕ್ಷಕರು ಬದಲಾವಣೆ ಬಯಸಿದ್ದಾರೆ, ಅದೇರೀತಿ ಶಿಕ್ಷಕ ಬಾಂಧವರು ಬದಲಾವಣೆಗಾಗಿ ಹಾಗೂ ವಿವೇಕಾನಂದ ಅವರಿಗೆ ನಿಮ್ಮ ಸೇವೆ ಮಾಡಲು ಅವಕಾಶ ಮಾಡಿಕೊಡಬೇಕು ಎಂದು ಮನವಿ ಮಾಡಿದರು.

ದಕ್ಷಿಣ ಕ್ಷೇತ್ರಗಳಾದ ಮಂಡ್ಯ, ಚಾಮರಾಜನಗರ, ಮೈಸೂರು, ಹಾಸನದ ಮತದಾರರು ಒಲವು ತೋರಿರುವುದು ಸಂತೋಷಕರ ವಿಷಯವಾಗಿದ್ದು, ಈ ಜಿಲ್ಲೆಯ ಎಲ್ಲ ಮತದಾರರಲ್ಲಿಯೂ ನಾವು ಮನವಿ ಮಾಡಿಕೊಳ್ಳುವುದೇನೆಂದರೆ ಜೂನ್ 3 ರಂದು ನಡೆಯುವ ಚುನಾವಣೆಯಲ್ಲಿ ಕ್ರಮ ಸಂಖ್ಯೆ 2 ರ ಅಭ್ಯರ್ಥಿಗೆ ಮತ ನೀಡುವ ಮೂಲಕ ಗೆಲುವು ಕೊಡಿಸಬೇಕು ಎಂದರು.

ಅಭ್ಯರ್ಥಿ ಕೆ.ವಿವೇಕಾನಂದ ಮಾತನಾಡಿ, ಮಂಡ್ಯ ಮೆಡಿಕಲ್ ಕಾಲೇಜಿನಲ್ಲಿ ಮತ ಯಾಚನೆ ಮಾಡುತ್ತಿದ್ದೇನೆ, ಜಿಲ್ಲೆಯಲ್ಲಿ ಹೋದಲ್ಲೆಲ್ಲಾ ಉತ್ತಮ ಪ್ರತಿಕ್ರಿಯೆ ದೊರೆಯುತ್ತಿದೆ, ಅವರ ಸೇವೆಗೆ ಸಿದ್ಧನಾಗಿರುವ ನನಗೆ ಆಶೀರ್ವಾದ ಮಾಡಬೇಕು. ಮಳವಳ್ಳಿ, ಮದ್ದೂರು, ಕೆ.ಆರ್.ಪೇಟೆ, ಪಾಂಡವಪುರ ಸೇರಿದಂತೆ ಶಿಕ್ಷಕರುಗಳನ್ನು ಭೇಟಿ ಮಾಡಿ ಮತಯಾಚನೆ ಮಾಡುತ್ತಿದ್ದೇನೆ, ಮತದಾರರು ತೋರಿಸುತ್ತಿರುವ ಪ್ರೀತಿಗೆ ನಾನು ಅಭಾರಿಯಾಗಿದ್ದೇನೆ, ಮತದಾರರು ನನಗೆ ಮತ ನೀಡಿ ಜಯತಂದುಕೊಡಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಮುಖಂಡರಾದ ಕೆ.ಎಲ್.ರಮೇಶ್, ಚಂದ್ರಪ್ಪ ಕಚ್ಚೀಗೆರೆ ಸೇರಿದಂತೆ ಇತರರು ಭಾಗವಹಿಸಿದ್ದರು.

### ಜಿಲ್ಲಾ ಮಟ್ಟದ ಅಧಿಕಾರಿಗಳ ಜೊತೆ ವಿಡಿಯೋ ಮೂಲಕ ಸಂವಾದ

# ಅಭಿವೃದ್ಧಿ ಕಾರ್ಯಗಳತ್ತ ಗಮನಹರಿಸಿ: ಸಿಎಂ

**ಮಡಿಕೇರಿ:** ರಾಜ್ಯಾದ್ಯಂತ ಪೂರ್ವ ಮುಂಗಾರು ಉತ್ತಮವಾಗಿದ್ದು, ಕೃಷಿ ಚಟುವಟಿಕೆಗಳು ಆರಂಭವಾಗಿವೆ. ಆ ನಿಟ್ಟಿನಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಪೂರೈಕೆಯಲ್ಲಿ ಯಾವುದೇ ರೀತಿಯ ಸಮಸ್ಯೆ ಉಂಟಾಗದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಗಮನಹರಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಾಕೀತು ಮಾಡಿದ್ದಾರೆ.

ಬರ ನಿರ್ವಹಣೆ ಮತ್ತು ಮುಂಗಾರು ಪೂರ್ವ ಸಿದ್ಧತೆ ಕುರಿತು ವಿಡಿಯೋ ಸಂವಾದ ಮೂಲಕ ಜಿಲ್ಲಾ ಮಟ್ಟದ ಅಧಿಕಾರಿಗಳ ಜೊತೆ ಗುರುವಾರ ನಡೆದ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿದರು.

ರಾಜ್ಯಾದ್ಯಂತ ಈಗಾಗಲೇ ಪೂರ್ವ ಮುಂಗಾರು ಉತ್ತಮವಾಗಿ ಆಗುತ್ತಿರುವ ಹಿನ್ನೆಲೆ ಹಲವು ಕಡೆಗಳಲ್ಲಿ ಬಿತ್ತನೆ ಕಾರ್ಯ ಆರಂಭವಾಗಿದೆ. ಆದ್ದರಿಂದ ಸಮರ್ಪಕವಾಗಿ ಬಿತ್ತನೆ ಬೀಜ ವಿತರಿಸುವುದು ಹಾಗೂ ರಸಗೊಬ್ಬರ ಪೂರೈಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ರಾಜ್ಯಾದ್ಯಂತ ಉತ್ತಮವಾಗಿ ಮಳೆಯಾಗುತ್ತಿದ್ದರೂ ಸಹ, ಕೆಲವು ಕಡೆಗಳಲ್ಲಿ ಕುಡಿಯುವ ನೀರು ಸಮಸ್ಯೆ ಇದ್ದು, ಕುಡಿಯುವ ನೀರು ಸರಿಯಾಗಿ ಸರಬರಾಜು ಮಾಡಬೇಕು. ಜೊತೆಗೆ ಕುಡಿಯುವ ನೀರನ್ನು ಪ್ರತೀನಿತ್ಯ ಪರೀಕ್ಷಿಸಬೇಕು ಎಂದು ಮುಖ್ಯಮಂತ್ರಿ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಬಿತ್ತನೆ ಬೀಜ ಹಾಗೂ ರಸಗೊಬ್ಬರ ಕೊರತೆ ಇದೆ ಕೇಳಿ ಬರಬಾರದು. ಬೇಡಿಕೆಗೆ ಅನುಗುಣವಾಗಿ ದಾಸ್ತಾನು ಮಾಡಿಕೊಳ್ಳಬೇಕು ಎಂದು ಮುಖ್ಯಮಂತ್ರಿ ಹೇಳಿದರು.

ಲೋಕಸಭಾ ಚುನಾವಣೆ ಹಿನ್ನೆಲೆ ಸುಮಾರು ಮೂರು ತಿಂಗಳ ಕಾಲ ಸುದೀರ್ಘ ಮಾದರಿ ನೀತಿ ಸಂಹಿತೆಯಿಂದಾಗಿ ಅಭಿವೃದ್ಧಿ ಕಾರ್ಯಗಳು ಮಂದಗತಿಯಲ್ಲಿ ಸಾಗಿದೆ. ಆದ್ದರಿಂದ ಚುನಾವಣಾ ಆಯೋಗವು ಕೆಲವು ವಿನಾಯಿತಿಯನ್ನು ನೀಡಿದ್ದು, ಮುಂದಿನ ದಿನಗಳಲ್ಲಿ ಅಭಿವೃದ್ಧಿ ಕಾರ್ಯದತ್ತ ಹೆಚ್ಚಿನ ಗಮನಹರಿಸುವಂತೆ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೂಚಿಸಿದರು.

ತುರ್ತು ಕೆಲಸಗಳಿಗೆ ಹೆಚ್ಚಿನ ಗಮನ ನೀಡಬೇಕು. ಎಲ್ಲಾ ಹಂತದ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು. ಅಭಿವೃದ್ಧಿ ಕೆಲಸಗಳಿಗೆ ಸಂಬಂಧಿಸಿದಂತೆ 12 ತಿಂಗಳಲ್ಲಿ ಮಾಡಬೇಕಿರುವ ಕಾರ್ಯಗಳನ್ನು ಹತ್ತು ತಿಂಗಳಲ್ಲಿ ನಿರ್ವಹಿಸಬೇಕಿದೆ. ಆ ನಿಟ್ಟಿನಲ್ಲಿ ಅಧಿಕಾರಿಗಳು ಯೋಚಿಸಿ ಅಭಿವೃದ್ಧಿಯತ್ತ ಹೆಜ್ಜೆಯಿಡಬೇಕು ಎಂದರು.



ಅಭಿವೃದ್ಧಿ ಕಾರ್ಯಗಳಿಗೆ ಸಂಬಂಧಿಸಿದಂತೆ ಟೆಂಡರ್ ಆಹ್ವಾನಿಸಲು ಯಾವುದೇ ರೀತಿಯ ಮಾದರಿ ನೀತಿ ಸಂಹಿತೆ ಅಡ್ಡಿ ಬರುವುದಿಲ್ಲ. ಚುನಾವಣಾ ಮಾದರಿ ನೀತಿ ಸಂಹಿತೆ ನೆಪ ಹೇಳಿಕೊಂಡು ಅಭಿವೃದ್ಧಿ ಕಾರ್ಯಗಳಿಗೆ ವಿಳಂಬ ಧೋರಣೆ ಅನುಸರಿಸಿದರೆ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಮೈಸೂರು ತಾಲ್ಲೂಕಿನ ಕೆ.ಸಾಲುಂಡಿ ಗ್ರಾಮದಲ್ಲಿ ಕಲುಷಿತ ನೀರು ಕುಡಿದು ಕಾಲರಾ ರೋಗದಿಂದ ಒಬ್ಬ ಯುವಕ ಮೃತಪಟ್ಟಿದ್ದಾನೆ. ಎಲ್ಲಾ ಹಂತದ ಅಧಿಕಾರಿಗಳು ಬದ್ಧತೆಯಿಂದ ಕಾರ್ಯನಿರ್ವಹಿಸಿದರೆ ಇಂತಹ ಪ್ರಕರಣಗಳು ಕಂಡು ಬರುವುದಿಲ್ಲ. ಆದರೆ ಅಧಿಕಾರಿಗಳ ನಿರ್ಲಕ್ಷ್ಯದಿಂದ ಇಂತಹ ತಪ್ಪುಗಳು ನಡೆದಿದ್ದು, ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಎಚ್ಚರಿಸಿದರು.

ಆಯಾಯ ಜಿಲ್ಲೆಗಳಲ್ಲಿ ಸಾಂಕ್ರಾಮಿಕ ರೋಗಗಳು ಕಾಣಿಸಿಕೊಂಡರೆ ಹಿರಿಯ ಅಧಿಕಾರಿಗಳನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು. ಮುಂದೆ ಈ ರೀತಿ ಆಗದಂತೆ ಎಚ್ಚರ ವಹಿಸಬೇಕು. ಎಲ್ಲಾ ಹಂತದ ಅಧಿಕಾರಿಗಳು, ಎಂಜಿನಿಯರ್‌ಗಳು ಗ್ರಾಮಗಳಿಗೆ ತೆರಳಿ ಸಾರ್ವಜನಿಕರ ಕುಂದುಕೊರತೆ ಆಲಿಸಬೇಕು, ಸಮಸ್ಯೆಗಳನ್ನು ಪರಿಹರಿಸಲು ಮುಂದಾಗಬೇಕು, ಅದನ್ನು ಬಿಟ್ಟು ಕಾಲಾಹರಣ ಮಾಡುವುದು ಸರಿಯೇ ಎಂದು ಮುಖ್ಯಮಂತ್ರಿ ಅವರು ಪ್ರಶ್ನಿಸಿದರು.

ರೈತರಿಗೆ ಸಕಾಲದಲ್ಲಿ ಬ್ಯಾಂಕ್‌ಗಳ ಮೂಲಕ ಸಾಲ ದೊರೆಯಬೇಕು. ಜಾನುವಾರುಗಳಿಗೆ ಮೇವು ಪೂರೈಕೆಯಲ್ಲಿ ಕೊರತೆಯಾಗದಂತೆ ಗಮನಹರಿಸಬೇಕು ಎಂದು ಮುಖ್ಯಮಂತ್ರಿ ಅವರು ತಾಕೀತು ಮಾಡಿದರು.

ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ ಶುದ್ಧ ಕುಡಿಯುವ ನೀರನ್ನು ಪೂರೈಕೆ ಮಾಡದಿದ್ದರೆ ಆಡಳಿತ ವ್ಯವಸ್ಥೆಗೆ ಏನೆನ್ನಬೇಕು ಎಂದು ಖಾರವಾಗಿ ನುಡಿದರು.

ಶುದ್ಧ ಕುಡಿಯುವ ನೀರು ಪೂರೈಕೆ, ಕೃಷಿಕರಿಗೆ ಬಿತ್ತನೆ ಬೀಜ, ರಸಗೊಬ್ಬರ ಪೂರೈಸಬೇಕು. ಹೀಗೆ ಕೃಷಿ ಚಟುವಟಿಕೆ ಸಂಬಂಧಿಸಿದಂತೆ ಹೆಚ್ಚಿನ ಗಮನಹರಿಸಬೇಕು ಎಂದು ಉಪ ಮುಖ್ಯಮಂತ್ರಿ ಅವರು ನಿರ್ದೇಶನ ನೀಡಿದರು.

> **ಕೆ.ಸಾಲುಂಡಿ ಗ್ರಾಮದಲ್ಲಿ ಕಲುಷಿತ ನೀರು ಕುಡಿದು ಕಾಲರಾ ರೋಗದಿಂದ ಒಬ್ಬ ಯುವಕ ಮೃತಪಟ್ಟಿದ್ದಾನೆ. ಎಲ್ಲಾ ಹಂತದ ಅಧಿಕಾರಿಗಳು ಬದ್ಧತೆಯಿಂದ ಕಾರ್ಯನಿರ್ವಹಿಸಿದರೆ ಇಂತಹ ಪ್ರಕರಣಗಳು ಕಂಡು ಬರುವುದಿಲ್ಲ. ಆದರೆ ಅಧಿಕಾರಿಗಳ ನಿರ್ಲಕ್ಷ್ಯದಿಂದ ಇಂತಹ ತಪ್ಪುಗಳು ನಡೆದಿದ್ದು, ಕಠಿಣ ಕ್ರಮ ಕೈಗೊಳ್ಳಲಾಗುವುದು.**
>
> **ಸಿದ್ದರಾಮಯ್ಯ** ಮುಖ್ಯಮಂತ್ರಿ

ಕಂದಾಯ ಸಚಿವರಾದ ಕೃಷ್ಣ ಬೈರೇಗೌಡ ಮಾತನಾಡಿ, ಬಾಕಿ ಇರುವ ಬರ ಪರಿಹಾರವನ್ನು ಕೂಡಲೇ ಬಿಡುಗಡೆ ಮಾಡಬೇಕು. ಜೀವನೋಪಾಯ ಭತ್ಯೆ ನೀಡಬೇಕು. ರಾಜ್ಯಾದ್ಯಂತ ಉತ್ತಮ ಮಳೆಯಾಗುತ್ತಿರುವ ಹಿನ್ನೆಲೆ ಕೃಷಿ ಚಟುವಟಿಕೆಗಳು ಗರಿಗೆದರಿದ್ದು, ಅಭಿವೃದ್ಧಿ ಕೆಲಸದಲ್ಲಿ ವೇಗ ಹೆಚ್ಚಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಕೃಷಿ ಸಚಿವ ಎನ್.ಚೆಲುವರಾಯ ಸ್ವಾಮಿ ಮಾತನಾಡಿ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಪೂರೈಕೆಯಲ್ಲಿ ರೈತರಿಗೆ ಯಾವುದೇ ರೀತಿಯ ಗೊಂದಲಕ್ಕೆ ಅವಕಾಶ ಮಾಡಬಾರದು ಎಂದು ಸೂಚಿಸಿದರು.

ಕಾನೂನು ಸಚಿವರಾದ ಎಚ್.ಕೆ.ಪಾಟೀಲ್, ಆಹಾರ ಸಚಿವ ಕೆ.ಎಚ್.ಮುನಿಯಪ್ಪ, ನಗರಾಭಿವೃದ್ಧಿ ಸಚಿವಬೈರತಿ ಸುರೇಶ್, ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರಾದ ಪ್ರಿಯಾಂಕ್ ಖರ್ಗೆ, ಹಿಂದುಳಿದ ವರ್ಗಗಳ ಸಚಿವರಾದ ಶಿವರಾಜ್ ತಂಗಡಗಿ, ಪೌರಾಡಳಿತ ಸಚಿವರಾದ ರಹೀಂ ಖಾನ್, ತೋಟಗಾರಿಕೆ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ, ಕಾರ್ಮಿಕ ಸಚಿವರಾದ ಸಂತೋಷ್ ಲಾಡ್, ಸರ್ಕಾರದ ಮುಖ್ಯ ಕಾರ್ಯದರ್ಶಿ ರಜನೀಶ್ ಗೋಯಲ್, ಮುಖ್ಯಮಂತ್ರಿ ಅವರ ಅಪರ ಮುಖ್ಯಕಾರ್ಯದರ್ಶಿ ಎಲ್.ಕೆ.ಅತಿಕ್ ಇತರರು ಇದ್ದರು.

ಬರ ನಿರ್ವಹಣೆ ಹಾಗೂ ಮುಂಗಾರು ಸಂಬಂಧ ಪೂರ್ವ ಸಿದ್ಧತೆ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿವಿಧ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಜಿ.ಪಂ.ಸಿಇಒ ಅವರಿಂದ ವಿಡಿಯೋ ಸಂವಾದ ಮೂಲಕ ಮಾಹಿತಿ ಪಡೆದರು.

ಕೊಡಗು ಜಿಲ್ಲೆಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿ ವೆಂಕಟ್ ರಾಜಾ ಮಾಹಿತಿ ನೀಡಿದರು. ಜಿ.ಪಂ.ಸಿಇಒ ವರ್ಣಿತ್ ನೇಗಿ, ಜಿಲ್ಲಾ ಮಟ್ಟದ ಅಧಿಕಾರಿಗಳು ಇದ್ದರು.

## ಬೈಕ್-ಕಾರು ಡಿಕ್ಕಿ: ಸವಾರ ಸಾವು

**ಗುಂಡ್ಲುಪೇಟೆ:** ಬೈಕ್ ಮತ್ತು ಕಾರಿನ ನಡುವೆ ಅಪಘಾತ ಸಂಭವಿಸಿ ಬೈಕ್ ಸವಾರ ಸಾವನ್ನಪ್ಪಿರುವ ಘಟನೆ ತಾಲೂಕಿನ ಊಟಿ-ಮೈಸೂರು ರಾಷ್ಟ್ರೀಯ ಹೆದ್ದಾರಿ 209 ಗರಗನಹಳ್ಳಿ ಗೇಟ್ ಬಳಿ ನಡೆದಿದೆ. ಆಲತ್ತೂರು ಕಡೆಯಿಂದ ಗುಂಡ್ಲುಪೇಟೆ ಕಡೆಗೆ ಬೈಕ್‌ನಲ್ಲಿ ಬರುತ್ತಿದ್ದ ವೇಳೆ ಮೈಸೂರು ಕಡೆಯಿಂದ



ವೇಗವಾಗಿ ಬಂದ ಕಾರು ಬೈಕ್‌ಗೆ ಗುದ್ದಿದ ಪರಿಣಾಮ ಸವಾರನ ತಲೆ ಹಾಗೂ ಕೈ ಕಾಲಿಗೆ ತೀವ್ರತರವಾದ ಗಾಯಗಳಾಗಿದೆ ಎಂದು ತಿಳಿದುಬಂದಿದೆ. ಮಾಹಿತಿ ಅರಿತ ಬೇಗೂರು ಠಾಣೆ ಪೊಲೀಸರು ಕೂಡಲೇ ಆಗಮಿಸಿ 108 ಆಂಬುಲೆನ್ಸ್ ನಲ್ಲಿ ಗಾಯಾಳುಗಳನ್ನು ಬೇಗೂರು ಸಾರ್ವಜನಿಕ ಆಸ್ಪತ್ರೆಗೆ ರವಾನಿಸಿ ಪ್ರಥಮ ಚಿಕಿತ್ಸೆ ನೀಡಿ ನಂತರ ಹೆಚ್ಚಿನ ಚಿಕಿತ್ಸೆಗೆ ಮೈಸೂರಿಗೆ ರವಾನಿಸಲಾಗಿತ್ತು. ಆದರೆ ಚಿಕಿತ್ಸೆ ಫಲಿಸದೆ ಬೈಕ್ ಸವಾರ ಮಲ್ಲೇಶ್ ಮೃತಪಟ್ಟಿದ್ದಾರೆ. ಘಟನೆಯಿಂದ ಬೈಕ್ ಸಂಪೂರ್ಣ ನಜ್ಜುಗುಜ್ಜಾಗಿದ್ದು, ಕಾರಿನ ಮುಂಭಾಗ ಜಖಂಗೊಂಡಿದೆ. ಬೇಗೂರು ಪೊಲೀಸರು ಎರಡು ವಾಹನಗಳನ್ನು ವಶಕ್ಕೆ ಪಡೆದು ಠಾಣೆಯಲ್ಲಿ ಪ್ರಕರಣ ದಾಖಲು ಮಾಡಿಕೊಂಡಿದ್ದಾರೆ.

# ಬಂಡಿಪುರದಲ್ಲಿ ಆನೆಗಳ ಗಣತಿ ಆರಂಭ

**ಗುಂಡ್ಲುಪೇಟೆ:** ಬಂಡಿಪುರ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಗುರುವಾರದಿಂದ ಆನೆ ಗಣತಿ ಆರಂಭವಾಯಿತು.

ಬಂಡೀಪುರ ಸಂರಕ್ಷಿತ ಪ್ರದೇಶದ 13 ವಲಯಗಳಲ್ಲಿ ಆನೆ ಗಣತಿ ನಡೆಯಲಿದೆ. ಬಂಡಿಪುರ ಹುಲಿ ಸಂರಕ್ಷಿತ ಪ್ರದೇಶದಲ್ಲಿ 114 ಬೀಟ್ ಗಳಿದ್ದು ಪ್ರತಿ ಬೀಟ್ ನಲ್ಲಿ ಎರಡು ಮಂದಿ ಇರಲಿದ್ದು ಓರ್ವ ಹೋಂ ಗಾರ್ಡ್, ವಾಚರ್, ಬಂದೂಕು ದಾರಿ ಇರಲಿದ್ದಾರೆ. ಈ ಮೂವರು ಆನೆ ಗಣತಿ ಸರ್ವೇಯಲ್ಲಿ ಕಡ್ಡಾಯವಾಗಿ ಇರುವಂತೆ ಅರಣ್ಯ ಸಂರಕ್ಷಣಾಧಿಕಾರಿ ಎಸ್. ಪ್ರಭಾಕರನ್ ತಿಳಿಸಿದ್ದಾರೆ.

ಅರಣ್ಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಬೆಳಗ್ಗೆ 6 ರಿಂದ ಸಂಜೆ 6 ರ ತನಕ ಕಾಡಿನಲ್ಲಿ ನಡೆದುಕೊಂಡು ನೇರವಾಗಿ ಕಾಣುವ ಆನೆಗಳ ಗಣತಿ ಮಾಡಲಿದ್ದಾರೆ. 250ಕ್ಕೂ ಹೆಚ್ಚು ಅರಣ್ಯ ಸಿಬ್ಬಂದಿ ಆನೆ ಗಣತಿಯಲ್ಲಿ ಭಾಗವಹಿಸಲಿದ್ದು ವಲಯ ಅರಣ್ಯ ಅಧಿಕಾರಿಗಳು ಸಹಾಯಕ ಅರಣ್ಯಾಧಿಕಾರಿಗಳು ಆನೆ ಗಣತಿ ನಡೆಯುವ ಮೂರು ದಿನಗಳಲ್ಲಿ ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದಾರೆ. ಗುರವಾರದಿಂದ ಪ್ರಾರಂಭವಾಗಿದ್ದು, ಇನ್ನು ಮೂರು ದಿನಗಳ ತನಕ ಆನೆ ಗಣತಿ ನಡೆಯಲಿದೆ.



## ವಿದ್ಯಾರ್ಥಿನಿಲಯಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಚಾಮರಾಜನಗರ:** ಯಳಂದೂರು ತಾಲೂಕು ಸಮಾಜ ಕಲ್ಯಾಣ ಇಲಾಖೆಯ ಡಾ. ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳ 2024-25ನೇ ಸಾಲಿನ ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಯಳಂದೂರು ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಿಗೆ 6 ರಿಂದ 10ನೇ ತರಗತಿವರೆಗೆ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶವಿದ್ದು ಅರ್ಹ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ವಿದ್ಯಾರ್ಥಿನಿಲಯಗಳಿಗೆ ಸಮಾಜ ಕಲ್ಯಾಣ ಇಲಾಖೆಯ ವೆಬ್‌ಸೈಟ್ https://sw.kar.nic.in ನಲ್ಲಿ ಪೂರಕ ದಾಖಲಾತಿಗಳೊಡನೆ (ಸ್ಯಾಟ್ಸ್ ನಂ, ಆಧಾರ್ ನಂಬರ್, ಅಂಕಪಟ್ಟಿ, ಜಾತಿ ದೃಢೀಕರಣ ಪತ್ರ, ಆದಾಯ ದೃಢೀಕರಣ ಪತ್ರ) ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ವಿದ್ಯಾರ್ಥಿನಿಲಯದಲ್ಲಿ ಉತ್ತಮ ಗುಣಮಟ್ಟದ ಊಟ, ತಿಂಡಿ ಸೌಲಭ್ಯ, ಶುಚಿ ಸಂಭ್ರಮ ಕಿಟ್, ಶೂ ಮತ್ತು ಸಾಕ್ಸ್ ಹಾಗೂ ಸಮವಸ್ತ್ರ, ಪ್ರತಿ ಮೂರು ತಿಂಗಳಿಗೊಮ್ಮೆ ಆರೋಗ್ಯ ತಪಾಸಣೆ, ಇತರೆ ಸೌಲಭ್ಯಗಳು ಇರುತ್ತವೆ. ಹೆಚ್ಚಿನ ವಿವರಗಳಿಗೆ ಹಾಗೂ ಪ್ರವೇಶಕ್ಕೆ ಇಚ್ಛಿಸುವ ವಿದ್ಯಾರ್ಥಿನಿಲಯಗಳ ಮೇಲ್ವಿಚಾರಕರನ್ನು ಸಂಪರ್ಕಿಸಬಹುದು. ಯಳಂದೂರು ಪಟ್ಟಣ, ಹೊನ್ನೂರು, ಮಾಂಬಳ್ಳಿ, ಗೌಡಹಳ್ಳಿಯ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ ಹಾಗೂ ಯಳಂದೂರು ಪಟ್ಟಣದ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶವಕಾಶವಿದೆ. ಹೆಚ್ಚಿನ ಮಾಹಿತಿಗಾಗಿ ಯಳಂದೂರು ತಾಲೂಕು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು (ಮೊ.ಸಂ 9480843093) ಸಂಪರ್ಕಿಸುವಂತೆ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ಹುದ್ದೆಗಳಿಗೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಗೌರಿಬಿದನೂರು ತಾಲ್ಲೂಕಿನ ಮರಳೂರು ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಯಲ್ಲಿ ಖಾಲಿ ಇರುವ ಶಿಕ್ಷಕರ ಮತ್ತು ಬೋಧಕೇತರ ಹುದ್ದೆಗಳಿಗೆ ಗೌರವಧನ ಆಧಾರದಲ್ಲಿ ಭರ್ತಿ ಮಾಡಲು ಅರ್ಜಿ ಆಹ್ವಾನಿಸಲಾಗಿದೆ. ಕನ್ನಡ ಭಾಷಾ ಶಿಕ್ಷಕ ಹುದ್ದೆಗೆ (ಐಚ್ಛಿಕ ಕನ್ನಡ) ಬಿ.ಎ.ಬಿ.ಇ.ಡಿ., ಹಿಂದಿ ಭಾಷಾ ಶಿಕ್ಷಕ ಹುದ್ದೆಗೆ (ಹಿಂದಿ ಐಚ್ಛಿಕ) ಬಿ.ಎ ಅಥವಾ ತತ್ಸಮಾನ ಬಿ.ಇ.ಡಿ., ವಿಜ್ಞಾನ ವಿಷಯ ಶಿಕ್ಷಕ ಹುದ್ದೆಗೆ (ಸಿ.ಬಿ.ಝಡ್) ಬಿ.ಎಸ್ಸಿ ಬಿ.ಎಡ್., ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗೆ ಪದವಿ ಬಿ.ಪಿ.ಎಡ್., ಶುಶ್ರೂಷಕರ ಹುದ್ದೆಗೆ ಜಿ.ಎನ್.ಎಂ ಅಥವಾ ಬಿ.ಎಸ್ಸಿ ನರ್ಸಿಂಗ್, ಪ್ರಥಮ ದರ್ಜೆ ಸಹಾಯಕರು ಕಂ ಕಂಪ್ಯೂಟರ್ ಆಪರೇಟರ್ ಹುದ್ದೆಗೆ ಯಾವುದೇ ಪದವಿ ಮತ್ತು ಕರ್ನಾಟಕ ಸರ್ಕಾರದಿಂದ ಮಾನ್ಯತೆ ಪಡೆದ ಸಂಸ್ಥೆಗಳಿಂದ ಅಥವಾ ಸಂಘದಿಂದ ಪಡೆದ ಕಾರ್ಯಾನುಭವವುಳ್ಳ ಒಂದು ವರ್ಷದ ಕಂಪ್ಯೂಟರ್ ಕೋರ್ಸ್ ಪ್ರಮಾಣ ಪತ್ರ ಹೊಂದಿರಬೇಕು. ಶಿಕ್ಷಕರ ಹುದ್ದೆಗೆ ಟಿ.ಇ.ಟಿ, ಸ್ನಾತಕೋತ್ತರ ಪದವಿ ಹಾಗೂ ಅನುಭವುಳ್ಳ ಶಿಕ್ಷಕರಿಗೆ ಆದ್ಯತೆ ನೀಡಲಾಗುವುದು. ಅರ್ಜಿ ಸಲ್ಲಿಸಲು ಮೇ 31 ರಂದು ಕೊನೆಯ ದಿನಾಂಕವಾಗಿದೆ. ಅರ್ಹ ಹಾಗೂ ಆಸಕ್ತರು, ಗೌರಿಬಿದನೂರು ತಾಲ್ಲೂಕಿನ ಮರಳೂರು ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗೆ ಅಥವಾ ಪ್ರಾಂಶುಪಾಲರ ಮೊ: 9343883501 ಗೆ ಸಂಪರ್ಕಿಸಬಹುದೆಂದು ವಸತಿ ಶಾಲೆಯ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯುವಕನ ಪತ್ತೆಗೆ ಸಹಕರಿಸಲು ಮನವಿ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ತಾಲ್ಲೂಕಿನ ಮುದ್ದೇನಹಳ್ಳಿ ಗ್ರಾಮದ ಸತ್ಯ ಸಾಯಿ ಆಸ್ಪತ್ರೆಯಲ್ಲಿ ಟ್ರೈನಿ ಸ್ಟಾಫ್ ನರ್ಸ್ ಕೆಲಸ ಮಾಡುತ್ತಿದ್ದ ಬೆಳಗಾವಿ ಜಿಲ್ಲೆಯ ರಾಮದುರ್ಗಾ ಟೌನ್, ಬಾನಕರ್ ಪೇಟ್ ನಿವಾಸಿ ವಿನಯ್ ಚಿನ್ನಪ್ಪ ಲ್ಯಾಬಿ ಎಂಬುವವರು ಕಾಣೆಯಾಗಿರುವ ಬಗ್ಗೆ ದೂರು ದಾಖಲಾಗಿದ್ದು, ಇವರ ಪತ್ತೆಗೆ ಸಹಕರಿಸುವಂತೆ ಮನವಿ ಮಾಡಲಾಗಿದೆ. ವಿನಯ್ ಚಿನ್ನಪ್ಪ ಲ್ಯಾಬಿ ಮುದ್ದೇನಹಳ್ಳಿ ಗ್ರಾಮದ ವಿಟಿಯು ಕಾಲೇಜಿನ ಬಾಯ್ಸ್ ಹಾಸ್ಟೆಲ್ ನಲ್ಲಿದ್ದು ಮೇ 15 ರಂದು ಅಲ್ಲಿಂದ ಹೊರಟು ಕಾಣೆಯಾಗಿರುವ ಬಗ್ಗೆ ದೂರು ದಾಖಲಾಗಿದೆ. 23 ವರ್ಷ ವಯಸ್ಸಿನ ವಿನಯ್ ಚಿನ್ನಪ್ಪ ಲ್ಯಾಬಿ, ಗೋದಿ ಮೈ ಬಣ್ಣ, ಸಾದರಣ ಮೈ ಕಟ್ಟು, ಕೋಲು ಮುಖ ಹೊಂದಿದ್ದು, 160 ಸೆ.ಮೀ ಎತ್ತರವಿರುತ್ತಾರೆ. ತಲೆಯಲ್ಲಿ 2 ಇಂಚು ಕಪ್ಪು ಕೂದಲು ಇದ್ದು, ಕಪ್ಪು ಬಣ್ಣದ ಪ್ಯಾಂಟ್, ಗ್ರೇ ಬಣ್ಣದ ಫುಲ್ ಶರ್ಟ್ ಧರಿಸಿದ್ದು, ಕನ್ನಡ ಮಾತನಾಡುತ್ತಾರೆ. ಈ ವ್ಯಕ್ತಿಯ ಬಗ್ಗೆ ಮಾಹಿತಿ ತಿಳಿದುಬಂದಲ್ಲಿ ಚಿಕ್ಕಬಳ್ಳಾಪುರ ಪೊಲೀಸ್ ನಿಯಂತ್ರಣ ಕೊಠಡಿ ದೂ.ಸಂ: 08156-275511, 08156-272423, 08156-274000 ಗೆ ಸಂಪರ್ಕಿಸಿ ತಿಳಿಸುವಂತೆ ನಂದಿ ಗಿರಿಧಾಮ ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಎನ್. ನರಸಿಂಹಮೂರ್ತಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತೋಟಗಾರಿಕೆ ತರಬೇತಿಗೆ ಅರ್ಜಿ

**ರಾಮನಗರ:** ತೋಟಗಾರಿಕೆ ಇಲಾಖೆ ವತಿಯಿಂದ ರೈತ ಮಕ್ಕಳಿಗೆ 2024ರ ಜುಲೈ 1 ರಿಂದ 2025ರ ಮಾರ್ಚ್ 31 ರ ವರೆಗೆ 9 ತಿಂಗಳ ತೋಟಗಾರಿಕೆ ತರಬೇತಿಯನ್ನು ಬೆಂಗಳೂರಿನ ಲಾಲ್‌ಬಾಗ್ ನಲ್ಲಿ ಹಮ್ಮಿಕೊಳ್ಳಲಾಗಿದೆ. ಈ ತರಬೇತಿಗೆ ರಾಮನಗರ ಜಿಲ್ಲೆಯ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅಭ್ಯರ್ಥಿಯ ತಂದೆ, ತಾಯಿ ಅಥವಾ ಪೋಷಕರು ಕಡ್ಡಾಯವಾಗಿ ಜಮೀನು ಹೊಂದಿರಬೇಕು ಹಾಗೂ ಸ್ವಂತ ಸಾಗುವಳಿ ಮಾಡುತ್ತಿರಬೇಕು. ಈ ಬಗ್ಗೆ ಪಹಣಿ ನೀಡಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಕನಿಷ್ಠ 18 ವರ್ಷ ಮತ್ತು ಗರಿಷ್ಠ 33 ವರ್ಷ ಹಾಗೂ ಇತರರಿಗೆ ಕನಿಷ್ಠ 18 ರಿಂದ 30 ವರ್ಷ ಹಾಗೂ ಮಾಜಿ ಸೈನಿಕರಿಗೆ 33 ರಿಂದ ಗರಿಷ್ಠ 65 ವರ್ಷವಾಗಿರಬೇಕು. ಭರ್ತಿ ಮಾಡಿದ ಅರ್ಜಿಯನ್ನು ಜೂನ್ 3ರ ಸಂಜೆ 5.30 ರೊಳಗೆ ರಾಮನಗರದ ತೋಟಗಾರಿಕೆ ಉಪನಿರ್ದೇಶಕರ ಕಚೇರಿ, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ ಅಥವಾ ರಾಮನಗರದ ವಂದಾರಗುಪ್ಪೆಯ ಕೆಂಗಲ್ ದೇವಸ್ಥಾನದ ಎದುರು ಇರುವ ತೋಟಗಾರಿಕೆ ಕ್ಷೇತ್ರ, ಕಚೇರಿಗೆ ಸಲ್ಲಿಸಬೇಕು. ಅಭ್ಯರ್ಥಿಗಳಿಗೆ ಜೂನ್ 6 ರಂದು ಸಂದರ್ಶನ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗೆ ತೋಟಗಾರಿಕೆ ಉಪನಿರ್ದೇಶಕರು (ಜಿ.ಪಂ) ರಾಮನಗರ ದೂರವಾಣಿ ಸಂಖ್ಯೆ:080-27274766 ಗೆ ಸಂಪರ್ಕಿಸುವಂತೆ ತೋಟಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಂಡ್ಯ ತಹಶೀಲ್ದಾರ್, ತಾಪಂ ಕಚೇರಿಗಳಲ್ಲಿ ಪರಿಶೀಲನೆ

**ಮಂಡ್ಯ:** ತಾಲ್ಲೂಕು ಕಚೇರಿಯಲ್ಲಿ ಸಾರ್ವಜನಿಕರೊಂದಿಗೆ ಚರ್ಚಿಸಿ ಕುಂದುಕೊರತೆಗಳ ಬಗ್ಗೆ ಚರ್ಚಿಸಿ, ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದರು.

ತಾಲ್ಲೂಕು ಕಚೇರಿಯಲ್ಲಿ. ಕಳೆದ ಒಂದು ವಾರದಿಂದ ರೈತರಿಗೆ ಸಂಬಂಧಪಟ್ಟಂತೆ ಆಧಾರ್ ಸೀಡಿಂಗ್ ನಡೆಯುತ್ತಿದೆ ಕೆಲಸಗಳನ್ನು ಪರಿಶೀಲಿಸಿದರು. ಮಳೆ ಹೆಚ್ಚಿನ ಪ್ರಮಾಣದಲ್ಲಿ ಬಂದಿರುವ ಹಿನ್ನೆಲೆಯಲ್ಲಿ ಯಾವುದಾದರೂ ಮನೆ ಹಾನಿ ಅಥವಾ ಬೆಳೆಗಳು ಹಾನಿಯ ಬಗ್ಗೆ ವರದಿ ಸಿದ್ಧ ಪಡಿಸುತ್ತಿರುವ ಬಗ್ಗೆ ಅಧಿಕಾರಿಗಳು ಹಾಗೂ ಸಿಬ್ಬಂದಿಗಳೊಂದಿಗೆ ಚರ್ಚಿಸಿದರು. ಕಂದಾಯ ಗ್ರಾಮಗಳಿಗೆ ಹಕ್ಕು ಪತ್ರ ನೀಡುವ ಬಾಕಿ ಇರುವ ಪ್ರಕರಣಗಳು, ರಸ್ತೆ ಉತ್ತುವರಿ, 1ಮತ್ತ5 ತಿದ್ದುಪಡಿ, ಪಡಿತರ ಚೀಟಿ ಕುರಿತು ದೂರು ಬರಿತ್ತಿದ್ದು, ಪರಿಶೀಲನೆ ನಡೆಸಿದರು ಮಂಡ್ಯ ತಾಲ್ಲೂಕಿನಲ್ಲಿ 410 ಹಕ್ಕು ಪತ್ರಗಳಿಗೆ ಡೇಟಾ ಎಂಟ್ರಿ ನಡೆಯುತ್ತಿದೆ. ಅವುಗಳನ್ನು ಸಹ ಪರಿಶೀಲಿಸಿದರು.

ರೈತರು ತಮ್ಮ ಪಹಣಿಗಳಿಗೆ ದಾಖಲೆಗಳಿಗೆ ಕಡ್ಡಾಯವಾಗಿ ಆಧಾರ್ ಸೀಡಿಂಗ್ ಆಗಬೇಕು ಎಂದು ಸರ್ಕಾರ ಆದೇಶ ಹೊರಡಿಸಿದೆ. ಅದರಂತೆ ಮಂಡ್ಯ ಜಿಲ್ಲೆಯಲ್ಲಿ ಕೂಡ ಈಗಾಗಲೇ 21 ಲಕ್ಷ ರೈತರ ಪೈಕಿ ಸುಮಾರು 1 ಲಕ್ಷದ 10 ಸಾವಿರ ಆಧಾರ್ ಸೀಡಿಂಗ್ ನ್ನು ಕಳೆದ ಒಂದು ವಾರದಿಂದ ಮಾಡಲಾಗಿದೆ. ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿಗಳು, ಸರ್ಕಾರದ ಆದೇಶದಂತೆ ಖಾತೆದಾರ ರೈತರ ಆಧಾರ್ ಸೀಡಿಂಗ್ ಯೋಜನೆಯಡಿ ಜಿಲ್ಲೆಯ 21 ಲಕ್ಷ ಖಾತೆದಾರ ರೈತರ ಪೈಕಿ ಈಗಾಗಲೇ 1.10 ಲಕ್ಷ ರೈತರ ಆಧಾರ್ ಲಿಂಕ್ ಮುಗಿಸಲಾಗಿದ್ದು ಜೂನ್ ಅಂತ್ಯದೊಳಗೆ ಆಧಾರ್ ಸೀಡಿಂಗ್ ಯೋಜನೆ ಪೂರ್ಣಗೊಳಿಸಲಾಗುವುದೆಂದರು. ಉಪವಿಭಾಗಾಧಿಕಾರಿ ಮಹೇಶ್, ತಹಶೀಲ್ದಾರ್ ಶಿವಕುಮಾರ್ ಬಿರಾದಾರ್, ಎಡಿಎಲ್'ಆರ್ ಮಮತಾ, ಭೂಮಿ ಶಾಖೆ ಸಲಹೆಗಾರ ಲೋಹಿತ್, ಗ್ರಾಮ ಲೆಕ್ಕಾಧಿಕಾರಿ ತೇಜಸ್ ಗೌಡ ಇತರರು ಉಪಸ್ಥಿತರಿದ್ದರು.

# ಅಧಿಕಾರಿಗಳ ನಿರ್ಲಕ್ಷ್ಯ: ತಾ.ಪಂ ಅನುದಾನ ವಾಪಸ್!

**ಯಳಂದೂರು:** ಯಳಂದೂರು ತಾಲೂಕು ಪಂಚಾಯಿತಿಗೆ ಬಂದಿದ್ದ ವಿಶೇಷ ಅನುದಾನ ಅಧಿಕಾರಿಗಳ ನಿರ್ಲಕ್ಷ್ಯದಿಂದ ಬಳಕೆಯಾಗದೆ 89 ಲಕ್ಷ ರೂ. ಸರ್ಕಾರಕ್ಕೆ ವಾಪಸ್ಸಾಗಿದ್ದು ಅಭಿವೃದ್ಧಿ ಕಾಮಗಾರಿಗಳಿಗೆ ತೊಡಕಾಗಿ ಪರಿಣಮಿಸಿದೆ.

ಗ್ಯಾರಂಟಿ ಯೋಜನೆಗಳಿಗೆ ಹೆಚ್ಚಿನ ಅನುದಾನ ಬಳಕೆಯಾಗುತ್ತಿದ್ದು ಅಭಿವೃದ್ಧಿ ಕಾಮಗಾರಿಗಳಿಗೆ ಮೂಲ ಸೌಲಭ್ಯಕ್ಕೆ ಅನುದಾನವನ್ನು ನೀಡುತ್ತಿಲ್ಲ ಎಂಬ ಆರೋಪದ ನಡುವೆಯೂ ತಾಲೂಕಿಗೆ ಹೆಚ್ಚುವರಿ ಅನುದಾನ ಲಭಿಸಿತ್ತು. ಹೆಚ್ಚುವರಿಯಾಗಿ ತಾಲೂಕಿಗೆ ಒಟ್ಟು 1.12 ಕೋಟಿ ರೂ. ಹಣ ಬಿಡುಗಡೆಯಾಗಿತ್ತು, ಅದರಲ್ಲಿ ಒಟ್ಟು 35 ಕಾಮಗಾರಿಗಳಿಗೆ ಕ್ರಿಯಾ ಯೋಜನೆ ಮಾಡಲಾಗಿತ್ತು. ಆದರೆ ಅಧಿಕಾರಿಗಳು ಕಾಮಗಾರಿಯನ್ನು ಮಾಡದೇ ಕೇವಲ 33 ಲಕ್ಷ ರೂ.ಗಳ ಅನುದಾನವನ್ನು ಬಳಕೆ ಮಾಡಿ ಉಳಿದ 89 ಲಕ್ಷ ರೂ. ಬಳಸದೇ ಇರುವುದರಿಂದ ಈ ಹಣ ಸರ್ಕಾರಕ್ಕೆ ವಾಪಸ್ಸಾಗಿದೆ.

ಅಧಿಕಾರಿಯ ನಿರ್ಲಕ್ಷ್ಯದಿಂದ ಅನುದಾನ ವ್ಯರ್ಥ: ತಾಲೂಕಿನ ಶಾಲಾ ಕಟ್ಟಡಗಳ ದುರಸ್ತಿ, ಕೌಂಪೌಂಡ್, ಶೌಚಗೃಹ, ರಸ್ತೆ, ಚರಂಡಿ, ಗ್ರಂಥಾಲಯ ಅಭಿವೃದ್ಧಿ, ಅಂಗನವಾಡಿ ಕೇಂದ್ರಗಳ ಅಭಿವೃದ್ಧಿ, ಕೆರೆ ಅಭಿವೃದ್ಧಿ, ತಡೆಗೋಡೆ ಸೇರಿದಂತೆ ಇತರೆ ಯೋಜನೆಗಳ ಬಗ್ಗೆ ಕಳೆದ ಮಾ. 3 ರಂದು ತಾಲೂಕು ಆಡಳಿತಾಧಿಕಾರಿ ಅಧ್ಯಕ್ಷತೆಯಲ್ಲಿ ನಡೆದ ತುರ್ತು ಸಭೆಯಲ್ಲಿ ಈ ಅನುದಾನವನ್ನು ಅದಷ್ಟು ಬೇಗ ಮಾಡಿ ಮುಗಿಸಬೇಕೆಂದು ತಿರ್ಮಾನ ಮಾಡಲಾಗಿತ್ತು.

ಈ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಪಂಚಾಯಿತಿ ಎಇಇ ಹಾಗೂ ಜೆಇ ಅಧಿಕಾರಿಗಳು 1.12 ಕೋಟಿ ರೂ.ನ 35 ಕಾಮಗಾರಿಗಳನ್ನು ತಮಗೆ ಆಪ್ತರಾದ 3 ಜನ ಗುತ್ತಿಗೆದಾರರಿಗೆ ಪೂರ್ತಿ ಕೆಲಸವನ್ನು ಮಾಡುವಂತೆ ತುಂಡು ಗುತ್ತಿಗೆ ನೀಡಿ ಕೈ ತೊಳೆದುಕೊಂಡಿದ್ದರು. ಆದರೆ ಈ ಗುತ್ತಿಗೆದಾರರು ಕೇವಲ 6 ಕಾಮಗಾರಿಗಳನ್ನು ಪೂರ್ಣ ಮಾಡಿ ಇದಕ್ಕೆ ಕೇವಲ 33 ಲಕ್ಷ ರೂ. ಖರ್ಚು ಮಾಡಿ ಉಳಿದ ಕಾಮಗಾರಿಗಳನ್ನು ಮಾಡದೇ ಬಿಟ್ಟ ಪರಿಣಾಮ ಸರ್ಕಾರದ ಅನುದಾನವು ಸಮರ್ಪಕವಾಗಿ ಬಳಕೆಯಾಗದೆ ವಾಪಸ್ಸಾಗಿದೆ ಎಂಬುದು ಸಾರ್ವಜನಿಕರ ದೂರಾಗಿದೆ.




**ಈ ಬಗ್ಗೆ ಕ್ರಮವಹಿಸದ ಅಧಿಕಾರಿಗಳು :** ಇದಕ್ಕೆ ಕಾರಣರಾದ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ವಹಿಸಬೇಕು ತಾಲೂಕು ಪಂಚಾಯಿತಿ ಆಡಳಿತಾಧಿಕಾರಿ ಹಾಗೂ ಮೇಲಾಧಿಕಾರಿಗಳು ಈ ರೀತಿಯ ತುಂಡು ಗುತ್ತಿಗೆಯನ್ನು ಎಲ್ಲಾ ಗುತ್ತಿಗೆದಾರರಿಗೂ ಹಂಚಿಕೆ ಮಾಡದೆ ತಮಗೆ ಬೇಕಾದ 3 ಗುತ್ತಿಗೆದಾರರಿಗೆ ಕೆಲಸವನ್ನು ಹಂಚಿಕೆ ಮಾಡಿರುವುದು ಎಷ್ಟರ ಮಟ್ಟಕ್ಕೆ ಸರಿ, ಈ ಬಗ್ಗೆ ಯಾವುದೇ ರೀತಿಯ ತನಿಖೆ ಮಾಡದೆ ಜಿಲ್ಲಾ ಪಂಚಾಯಿತಿ ಸಿಇಒ ಹಾಗೂ ಪಂಚಾಯತ್ ರಾಜ್ ಇಲಾಖೆ ಅಧಿಕಾರಿಗಳು ಮೌನ ವಹಿಸಿರುವುದು ಹಲವು ಅನುಮಾನಗಳಿಗೆ ಎಡೆ ಮಾಡಿಕೊಡುತ್ತಿದೆ ಎಂಬುದು ಸಾರ್ವಜನಿಕರ ದೂರಾಗಿದೆ.

> **“ತಾಲೂಕಿನಲ್ಲಿ ಹೆಚ್ಚುವರಿ ಅನುದಾನ ಬಂದಿತ್ತು. ಆದರೆ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಸಮರ್ಪಕವಾಗಿ ಕೆಲಸವನ್ನು ನಿರ್ವಹಿಸದ ಪರಿಣಾಮ ಅನುದಾನವು ಸರ್ಕಾರಕ್ಕೆ ವಾಪಸ್ ಹೋಗಿದೆ. ಈ ಕಾಮಗಾರಿಯಲ್ಲಿ ನಡೆದಿರುವ ಕೆಲಸಗಳು ಗುಣಮಟ್ಟದಿಂದ ಕೂಡಿಲ್ಲ, ಈ ಬಗ್ಗೆ ಸಂಬಂದಪಟ್ಟ ಮೇಲಧಿಕಾರಿಗಳು ಸೂಕ್ತ ತನಿಖೆ ಮಾಡಿ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮವಹಿಸಬೇಕು ಎಂದು ಮೇಲಧಿಕಾರಿಗಳಿಗೆ ದೂರು ನೀಡಲಾಗಿದೆ.**
>
> **ಪುಟ್ಟರಾಜು** ಕೊಮಾರನಪುರ

> **“ತಾಲೂಕಿನ ಪಂಚಾಯಿತಿ ಅನುದಾನವು ಕೆಲಸ ಮಾಡದೇ ಇರುವ ಪರಿಣಾಮ ವಾಪಸ್ಸಾಗಿದೆ. ಈ ಬಗ್ಗೆ ಸಂಬಂಧಪಟ್ಟ ಮೇಲಾಧಿಕಾರಿಗಳಿಗೆ ವರದಿಯನ್ನು ಸಲ್ಲಿಸಿದ್ದು, ಈ ವಿಷಯ ಗಮನಕ್ಕೆ ತಂದು ಮುಂದಿನ ಕ್ರಮ ವಹಿಸಲಾಗಿದೆ.**
>
> **ಉಮೇಶ್** ಇಒ. ತಾ.ಪಂ. ಯಳಂದೂರು.

## ತೋಟಗಾರಿಕೆ ತರಬೇತಿಗೆ ಅರ್ಜಿ

**ಚಿಕ್ಕಬಳ್ಳಾಪುರ:** 2024-25ನೇ ಸಾಲಿನಲ್ಲಿ ಜಿಲ್ಲೆಯ ತೋಟಗಾರಿಕೆ ಇಲಾಖೆ ವತಿಯಿಂದ ಬೆಂಗಳೂರಿನ ಲಾಲ್ ಬಾಗ್ ನಲ್ಲಿರುವ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ ರೈತರ ಮಕ್ಕಳಿಗೆ ತೋಟಗಾರಿಕೆ ತರಬೇತಿ ನೀಡಲಿದ್ದು, ಅರ್ಜಿ ಆಹ್ವಾನಿಸಲಾಗಿದೆ. ಜುಲೈ 1 ರಿಂದ 2025ರ ಮಾರ್ಚ್ 31 ರವರೆಗೆ ತರಬೇತಿ ನೀಡಲಾಗುತ್ತದೆ. ಅರ್ಜಿಗಳನ್ನು ತೋಟಗಾರಿಕೆ ಉಪನಿರ್ದೇಶಕರು, ಆಯಾ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿಲ್ಲಾ ಪಂಚಾಯತ್), ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ರಾಜ್ಯ ವಲಯ) ಇವರ ಕಚೇರಿಯಿಂದ ಪಡೆದುಕೊಳ್ಳಬಹುದು ಅಥವಾ ಇಲಾಖೆ ವೆಬ್ ಸೈಟ್ https://horticulturedir.karnataka.gov.in ನಲ್ಲಿ ಡೌನ್ ಲೋಡ್ ಮಾಡಿಕೊಳ್ಳಬಹುದು. ಸಾಮಾನ್ಯ ಅಭ್ಯರ್ಥಿಗಳಿಗೆ 30 ರೂ. ಮತ್ತು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ ಅರ್ಜಿ ಶುಲ್ಕವಾಗಿ 15 ರೂ ಮೌಲ್ಯದ ಇಂಡಿಯನ್ ಪೋಸ್ಟಲ್ ಆರ್ಡರ್ (ಐಪಿಒ) ಅಥವಾ ಡಿಮ್ಯಾಂಡ್ ಡ್ರಾಫ್ಟ್ (ಡಿಡಿ) ಇಲ್ಲವೇ ಎ-2 ಪೇಮೆಂಟ್ ಚಲನ್ ಅನ್ನು ತೋಟಗಾರಿಕೆ ಉಪ ನಿರ್ದೇಶಕರು (ಜಿಲ್ಲಾ ಪಂಚಾಯತ್) ಚಿಕ್ಕಬಳ್ಳಾಪುರ ರವರ ಹೆಸರಿನಲ್ಲಿ ಪಡೆದು ಅರ್ಜಿಯ ಜೊತೆ ಲಗತ್ತಿಸಬೇಕು. ಭರ್ತಿ ಮಾಡಿದ ಅರ್ಜಿಗಳನ್ನು ಜೂನ್ 3ರ ಸಂಜೆ 5:30 ರೊಳಗೆ ಸಲ್ಲಿಸತಕ್ಕದ್ದು. ಅರ್ಹ ಅಭ್ಯರ್ಥಿಗಳಿಗೆ ಜೂನ್ 6 ರಂದು ತೋಟಗಾರಿಕೆ ಉಪನಿರ್ದೇಶಕರು (ಜಿಲ್ಲಾ ಪಂಚಾಯತ್) ಕಚೇರಿಯಲ್ಲಿ ಸಂದರ್ಶನ ನಡೆಸಲಾಗುವುದು. ಹೆಚ್ಚಿನ ವಿವರಗಳನ್ನು ತೋಟಗಾರಿಕೆ ಉಪನಿರ್ದೇಶಕರು (ಜಿಲ್ಲಾ ಪಂಚಾಯತ್) ಪಿ.ಆರ್.ಎಸ್ ತೋಟಗಾರಿಕೆ ಕ್ಷೇತ್ರ, ನಂದಿ ಕ್ರಾಸ್ ಚಿಕ್ಕಬಳ್ಳಾಪುರ ಅಥವಾ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ (ಜಿಲ್ಲಾ ಪಂಚಾಯತ್) ಕಚೇರಿಗೆ ಭೇಟಿ ನೀಡಿ ಪಡೆದುಕೊಳ್ಳಬಹುದೆಂದು ತೋಟಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗೊಟ್ಟಿಗೆ ಹಳ್ಳಿಯಲ್ಲಿ ಜಂಗಲ್ ಟ್ರೈಲ್ ರೆಸಾರ್ಟ್‌ಗೆ ಬೀಗ

**ರಾಮನಗರ:** ರಾಮನಗರ ಜಿಲ್ಲೆಯ ಕನಕಪುರ ತಾಲ್ಲೂಕಿನ ಹಾರೋಹಳ್ಳಿಯ ಗೊಟ್ಟಿಗೆ ಹಳ್ಳಿಯ ಜಂಗಲ್ ಟ್ರೈಲ್ ರೆಸಾರ್ಟ್ ಮಾಲೀಕರು ಜಿಲ್ಲಾ ಪ್ರವಾಸೋದ್ಯಮ ಇಲಾಖೆ ಅಥವಾ ಬೆಂಗಳೂರಿನ ಕೇಂದ್ರ ಕಚೇರಿಯ ಪ್ರವಾಸೋದ್ಯಮ ಇಲಾಖೆಯಲ್ಲಿ ರೆಸಾರ್ಟ್ ನಡೆಸುತ್ತಿರುವ ಬಗ್ಗೆ ಯಾವುದೇ ಅನುಮತಿ ಪಡೆದಿರುವುದಿಲ್ಲ ಹಾಗೂ ರೆಸಾರ್ಟ್ ನಡೆಸುತ್ತಿರುವ ಕುರಿತು ಯಾವುದೇ ಕಚೇರಿಯಲ್ಲಿಯೂ ಸಹ ಅನುಮತಿ ಪಡೆಯದೇ ಅನಧಿಕೃತವಾಗಿ ಜಂಗಲ್ ಟ್ರೈಲ್ ರೆಸಾರ್ಟ್ ನಡೆಸುತ್ತಿರುವುದು ಕಂಡುಬಂದಿರುತ್ತದೆ. ಆದ್ದರಿಂದ ಜಿಲ್ಲಾಧಿಕಾರಿಗಳ ಆದೇಶದಂತೆ ಜಂಗಲ್ ಟ್ರೈಲ್ ರೆಸಾರ್ಟ್‌ಗೆ ರಾಮನಗರ ಜಿಲ್ಲಾ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರು ಇಂದು ಭೇಟಿ ನೀಡಿ ರೆಸಾರ್ಟ್‌ನ ಮಾಲೀಕರಿಗೆ ನೋಟೀಸ್ ನೀಡಿ, ರೆಸಾರ್ಟ್‌ಗೆ ಬೀಗ ಮುದ್ರಿಸಿ ಮುಚ್ಚಿಸಲಾಗಿರುತ್ತದೆ ಎಂದು ರಾಮನಗರ ಜಿಲ್ಲಾ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರವೇಶಕ್ಕೆ ಅರ್ಜಿ

**ಮೈಸೂರು:** 2024 ನೇ ಸಾಲಿಗೆ ಮೈಸೂರಿನ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಎಸ್.ಎಸ್.ಎಲ್.ಸಿ ಪಾಸಾದ ಅಭ್ಯರ್ಥಿಗಳ ಸಿಟಿಎಸ್ ವಿಭಾಗದಲ್ಲಿ ಮೆರಿಟ್ ಕಮ್ ರಿಸರ್ವೇಶನ್ ಆಧಾರಿತ ಪ್ರವೇಶಗಳಿಗಾಗಿ ಆನ್ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಫಿಟ್ಟರ್ ವೃತ್ತಿಗೆ 20 ಸ್ಥಾನಗಳು, ಟರ್ನರ್ ವೃತ್ತಿಗೆ 20, ಕೊಪ (ಅಡಿಕೊ) ವೃತ್ತಿಗೆ 24 ಹಾಗೂ ಸ್ಟೆನೋಗ್ರಫಿ ವೃತ್ತಿಗೆ 24 ಸ್ಥಾನಗಳಿದ್ದು, ಎನ್‌ಸಿವಿಟಿ ಸಂಯೋಜನೆಯನ್ನು ಹೊಂದಿದೆ. ಸಾಮಾನ್ಯ ಅಭ್ಯರ್ಥಿಗಳಿಗೆ ಕನಿಷ್ಠ ವಯೋಮಿತಿ 14 ವರ್ಷ ಆಗಿದ್ದು, ಆಸಕ್ತ ಅಭ್ಯರ್ಥಿಗಳು ಆನ್ಲೈನ್ ಮೂಲಕ www.cite.Karnataka.gov.in ವೆಬ್‌ಸೈಟ್‌ನಲ್ಲಿ ಜೂ.3 ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ಪ್ರಾಚಾರ್ಯರನ್ನು ಭೇಟಿ ಮಾಡಬಹುದು ಅಥವಾ ದೂ. ಸಂ: 0821- 2950951 ಅಥವಾ 9980289219 ಅನ್ನು ಸಂಪರ್ಕಿಸಬಹುದು ಎಂದು ಮೈಸೂರಿನ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ.

## ಇಂದು ಯಕ್ಷಗಾನ ಪ್ರದರ್ಶನ

**ತಿಪಟೂರು:** ಕಸಬಾ ಹೋಬಳಿಯ ಬಿದರೆಗುಡಿಯ ನಾಡದೇವತೆ ಬಿದರಮ್ಮ ಜಾತ್ರಾ ಮಹೋತ್ಸವದ ಅಂಗವಾಗಿ ಮತ್ತಿಹಳ್ಳಿ ಗ್ರಾಮದಲ್ಲಿ ಶ್ರೀ ಬಿದರಾಂಬ ಕೃಪಾಪೋಷಿತ ಮೂಡಲಪಾಯ ಯಕ್ಷಗಾನ ಮಂಡಳಿ ವತಿಯಿಂದ ಭಾಗವತ್ ಶಿಕ್ಷಕ ಮಂಜುನಾಥ್ ನೇತೃತ್ವದಲ್ಲಿ, ಪ್ರೇಕ್ಷಾ ಶಾಮಿಯಾನ ಸಿದ್ದಪ್ಪ ಸಹಯೋಗದಲ್ಲಿ ಅಂಬಿಕಾನಿಲಯ ಅಥವಾ ರಕ್ತ ಬೀಜಾಸುರನ ವಧೆ ಎಂಬ ಯಕ್ಷಗಾನ ಪ್ರಸಂಗವನ್ನು ಮೇ 24 ಮೇ ಶುಕ್ರವಾರ ರಾತ್ರಿ 9.30 ಕ್ಕೆ ಮೃದಂಗ ನಾಗರಾಜು, ಮುಖವೀಣೆ ಬಸವರಾಜು, ಹಿನ್ನೆಲೆಗಾಯನ ಗ್ರಂಥಪಾಲಕರುಲೋಕೇಶ್, ಸಿದ್ದೇಗೌಡ, ರಾಮಕೃಷ್ಣ ಸಹಯೋಗದಲ್ಲಿ ನಡೆಯಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಾಸ್ಟೆಲ್ ಪ್ರವೇಶಾತಿಗೆ ಅರ್ಜಿ

**ಮೈಸೂರು:** 2024-25 ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ 1 ರಿಂದ 5 ನೇ ತರಗತಿಯ ಡಾ.ಬಿ.ಆರ್. ಅಂಬೇಡ್ಕರ್ ವಸತಿಶಾಲೆ, 5 ರಿಂದ 10ನೇ ತರಗತಿಯ ಡಾ.ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯ ಹಾಗೂ ಡಾ.ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಪ್ರವೇಶಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ವರ್ಗ ಹಾಗೂ ಇತರೆ ವರ್ಗದ ವಿದ್ಯಾರ್ಥಿಗಳು ಇಲಾಖೆಯ ವೆಬ್ಸೈಟ್‌ನಲ್ಲಿ ಆನ್ಲೈನ್ ಮೂಲಕ ಮೇ.31 ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲ್ಲೂಕಿನ ಸಹಾಯಕ ನಿರ್ದೇಶಕರ ಕಛೇರಿಯನ್ನು ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ರೋಗಿಗಳಿಗೆ ಹಣ್ಣು ವಿತರಣೆ

ಶ್ರೀರಂಗಪಟ್ಟಣ ಕ್ಷೇತ್ರದ ಶಾಸಕ ಹಾಗೂ ಚೆಸ್ಕಾಂ ಅಧ್ಯಕ್ಷ ಎ. ಬಿ ರಮೇಶ್ ಬಾಬು ಬಂಡಿಸಿದ್ದೇಗೌಡ ಹುಟ್ಟು ಹಬ್ಬದ ಅಂಗವಾಗಿ ರಮೇಶ್ ಬಾಬು ಬಂಡಿ ಸಿದ್ದೇಗೌಡ ಅಭಿಮಾನಿಗಳಿಂದ ವಿದ್ಯಾನಗರದ ಗಣಪತಿ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿ ನಂತರ ಜಿಲ್ಲಾ ಆಸ್ಪತ್ರೆ ಒಳರೋಗಿಗಳಿಗೆ ಹಣ್ಣುಗಳನ್ನು ವಿತರಿಸಿದರು. ಜಿಲ್ಲಾ ಪಂಚಾಯತಿ ಮಾಜಿ ಸದಸ್ಯ ಮಂಜುನಾಥ್, ಗುತ್ತಿಗೆದಾರ ಸೂನಗಹಳ್ಳಿ ಸುರೇಶ್, ಕುರುಬರ ಸಂಘದ ಮಾಜಿ ಅಧ್ಯಕ್ಷ ನಾಗರಾಜು ,ಎಪಿಎಂಸಿ ಮಾಜಿ ಅಧ್ಯಕ್ಷ ಮಧು, ಸಂತೆ ಕಸಲಗೆರೆ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಎಸ್ ಎಂ ರುದ್ರಪ್ಪ, ಮುಖಂಡರಾದ ಪ್ರಫುಲ್ಲ, ಪ್ರಕಾಶ್ ,ಸಂಪಳ್ಳಿ ದೇವರಾಜು, ಕಾಳಯ್ಯ ಪಾಲ್ಗೊಂಡಿದ್ದರು.

## ಕಾಯಕ, ದಾಸೋಹ ತತ್ವವನ್ನು ಅನುಷ್ಠಾನಗೊಳಿಸಿದ ಬಸವಣ್ಣ

**ವಿಜಯಪುರ:** ಇಂದಿಗೆ ಅವಶ್ಯಕವಾಗಿರುವ ಹಾಗೂ ಘೋಷಣೆಗಳಾಗಿರುವ ಉದ್ಯೋಗ ಹಾಗೂ ಹಸಿವು ಮುಕ್ತ ಭಾರತವನ್ನು 12ನೆಯ ಶತಮಾನದಲ್ಲಿಯೇ ಅಂದಿನ ಪ್ರಧಾನ ಮಂತ್ರಿಗಳಾದ ಬಸವಣ್ಣನವರು ಎಲ್ಲರಿಗೂ ಕಾಯಕ ನೀಡುವ ಮೂಲಕ ಹಾಗೂ ಅದರಿಂದ ಬರುವ ಉತ್ಪಾದನೆಯಿಂದ ದಾಸೋಹ ವ್ಯವಸ್ಥೆಯನ್ನು ರೂಡಿಸಿದ್ದರೆಂದು ಶ್ರೀ ಕೃಷ್ಣ ಯತೀಂದ್ರ ಸತ್ಸಂಗ ಸೇವಾ ಟ್ರಸ್ಟ್ ಅಧ್ಯಕ್ಷರಾದ ಜೆಎಸ್ ರಾಮಚಂದ್ರಪ್ಪ ತಿಳಿಸಿದರು. ಇಲ್ಲಿನ ಶ್ರೀ ಚನ್ನಕೇಶವ ಸ್ವಾಮಿ ದೇವಾಲಯದ ಆವರಣದಲ್ಲಿ ಶ್ರೀ ಕೃಷ್ಣ ಯತೀಂದ್ರ, ಸತ್ಸಂಗ ಸೇವಾ ಟ್ರಸ್ಟ್ ಆಶ್ರಯದಲ್ಲಿ ಏರ್ಪಡಿಸಲಾಗಿದ್ದ ಶ್ರೀ ಕೈವಾರ ಯೋಗೀನಾರಾಯಣ ಯತೀಂದ್ರರ ಹಾಗೂ ಕನಕ ಪುರಂದರ ಗೀತಾ ತತ್ವ ಅಮೃತ ರಸದಾರೆಯ 227 ಕಾರ್ಯಕ್ರಮ ಹಾಗೂ ಶ್ರೀ ಕೃಷ್ಣ ಮಾಸಿಕ ದ್ವಾದಶಿ ವಿಚಾರಧಾರೆ ಗೋಷ್ಠಿಯ 178ನೆಯ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು.

ಭಗವಂತನ ಚಿಂತನೆ ಯಾವ ಪುಣ್ಯ ಸ್ಥಳದಲ್ಲಿರುತ್ತದೆಯೋ ಅಲ್ಲಿ ಭಗವಂತನ ಪ್ರೇರಣೆ ಇರುತ್ತದೆ ಇಂತಹ ಸತ್ಸಂಗದಲ್ಲಿ ಭಾಗವಹಿಸಿ ನಮ್ಮ ಜ್ಞಾನವನ್ನು ಹೆಚ್ಚಿಸಿಕೊಳ್ಳಬೇಕೆಂದು ಎಂದು ಧಾರ್ಮಿಕ ಚಿಂತಕರಾದ ಶಿವಕುಮಾರ್ ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಶ್ರೀ ಪತಂಜಲಿ ಯೋಗ ಶಿಕ್ಷಣ ಶಿಕ್ಷಕರಾದ ಮಂಜುನಾಥ್, ಬೇಸಿಸ್ ವಿದ್ಯಾಸಂಸ್ಥೆ ಮಾಜಿ ಅಧ್ಯಕ್ಷರಾದ ಎಸ್ .ವಿ.ರವಿಚಂದ್ರ, ಶ್ರೀನಿವಾಸ್,ಯಶಸ್ವಿನಿ, ದೀಪಕ್ ಚಂದ್ರ, ರಮೇಶ್ ಸ್ವಾಮಿ ಉಪಸ್ಥಿತರಿದ್ದರು. ಈ ಸಂಧರ್ಭದಲ್ಲಿ ಹಲವಾರು ಧಾರ್ಮಿಕ ಚಿಂತಕರುಗಳನ್ನು ಸನ್ಮಾನಿಸಲಾಯಿತು. ವಾದ್ಯಗೋಷ್ಠಿಯನ್ನು ಕೀಬೋರ್ಡ್ ಎಂ.ವಿ.ನಾಯ್ಡು, ತಬಲ ಎಂ.ಅನಿಲ್ ಕುಮಾರ್ ಮತ್ತು ಕೀರ್ತನಗಾರರಾಗಿ ರಾಧಾಮಣಿ ನರಸಿಂಹಪ್ಪ ಜಾನಪದ ಗಾಯಕರು, ಹಾಗೂ ಗಂಗಭವಾನಿ ಕಲಾ ಬಳಗ ಮೇಲೂರಿನ ರಾಮಾಂಜಿನಪ್ಪ ಸುಶ್ರಾವ್ಯವಾಗಿ ಹಾಡಿದರು. ಸೇವಾಕರ್ತರು ಮೇಲೂರು ಭಕ್ತ ವೃಂದದವರಾಗಿದ್ದು, ಕಾರ್ಯಕ್ರಮವನ್ನು ಸಂಚಾಲಕರಾದ ವಿ.ಎನ್. ವೆಂಕಟೇಶ್ ಮತ್ತು ಪದಾಧಿಕಾರಿಗಳು ಅಚ್ಚುಕಟ್ಟಾಗಿ ನಡೆಸಿಕೊಟ್ಟರು.



# ಡೊನೇಷನ್ ಹಾವಳಿ ತಡೆಗಟ್ಟಿ

## ಎಸ್‌ಎಫ್‌ಐ ಜಿಲ್ಲಾ ಸಮಿತಿಯಿಂದ ತಹಸೀಲ್ದಾರ್ ನಾಗವೇಣಿಗೆ ಮನವಿ

**ಕೋಲಾರ:** ಜಿಲ್ಲೆಯಾದ್ಯಂತ ಖಾಸಗಿ ಶಾಲೆಗಳಲ್ಲಿ ಡೊನೇಷನ್ ಹಾವಳಿ ತಡೆಗಟ್ಟಿ, ಸರ್ಕಾರದ ನಿಯಮಗಳನ್ನು ಉಲ್ಲಂಘನೆ ಮಾಡಿದ ಶಾಲೆಗಳ ಮಾನ್ಯತೆ ರದ್ದುಮಾಡುವ ಜೊತೆಗೆ ಅಧಿಕೃತ ಶಾಲೆಗಳ ಪಟ್ಟಿಯನ್ನು ಕೂಡಲೇ ಬಿಡುಗಡೆ ಮಾಡಬೇಕು ಎಂದು ಅಗ್ರಹಿಸಿ ಎಸ್‌ಎಫ್‌ಐ ಜಿಲ್ಲಾ ಸಮಿತಿಯಿಂದ ತಹಶಿಲ್ದಾರ್ ನಾಗವೇಣಿ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ ನೀಡಿ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಎಸ್‌ಎಫ್‌ಐ ಜಿಲ್ಲಾ ಅಧ್ಯಕ್ಷ ಅಂಬ್ಲಿಕಲ್ ಶಿವಪ್ಪ ಮಾತನಾಡಿ ರಾಜ್ಯದಲ್ಲಿ ಬಹುತೇಕ ಖಾಸಗಿ ಶಾಲೆಗಳು 2024-25ನೇ, ಸಾಲಿನಲ್ಲಿ ಪ್ರವೇಶ ಶುಲ್ಕ, ಬಟ್ಟೆ, ಶೂ-ಸಾಕ್ಸ್, ಟೈ, ಬೆಲ್ಟ್, ಸೇರಿದಂತೆ ಭೋದನಾ ಶುಲ್ಕವನ್ನು ಹೆಚ್ಚಳ ಮಾಡಿ ಡೊನೇಷನ್ ಹೆಸರಿನಲ್ಲಿ ಹಣ ವಸೂಲಿ ಮಾಡಲು ಮುಂದಾಗಿದ್ದಾರೆ ಇದನ್ನು ಕರ್ನಾಟಕ ರಾಜ್ಯಾದ್ಯಂತ ಭಾರತ ವಿದ್ಯಾರ್ಥಿ ಫೆಡರೇಷನ್ ತೀವ್ರವಾಗಿ ಖಂಡಿಸುತ್ತದೆ ಸರಕಾರ ಇದ್ದು ಕಣ್ಣು ಕುರುಡರ ರೀತಿಯಲ್ಲಿ ವರ್ತಿಸುತ್ತಾ ಇದ್ದು ಇದಕ್ಕೆ ಪೋಷಕರು ಬೆಲೆ ಕಟ್ಟಬೇಕಾಗಿದೆ ಎಂದರು.

ರಾಜ್ಯದಲ್ಲಿ ಇರುವ ಬಹುತೇಕ ಎಲ್ಲಾ ಖಾಸಗಿ ಶಾಲೆಗಳು ಈಗಾಗಲೇ ಬೇಬಿ ಕ್ಲಾಸಿನಿಂದ ಎಲ್ಲಾ ತರಗತಿಯ ಪ್ರವೇಶಯನ್ನು ಪ್ರಾರಂಭಿಸಿ ವಿದ್ಯಾರ್ಥಿಗಳು ಪಾಲಕರಿಂದ ಡೊನೇಷನ್ ವಸೂಲಿಗೆ ಮುಂದಾಗಿವೆ. ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳಲ್ಲಿ ಸರ್ಕಾರದ ನಿಯಮ ಮೀರಿ ಹಣ ವಸೂಲಿಗೆ ಮುಂದಾದರು ರಾಜ್ಯದಲ್ಲಿನ ಶಿಕ್ಷಣ ಇಲಾಖೆಯ ಆಯುಕ್ತರು, ಅಪರ ಆಯುಕ್ತರು, ವಿವಿಧ ಜಿಲ್ಲೆಯ ಉಪನಿರ್ದೇಶಕರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮೌನವಾಗಿದ್ದಾರೆ ಸರ್ಕಾರ ಇನ್ನು ಈ ವರ್ಷದ ಶೈಕ್ಷಣಿಕ ಪ್ರವೇಶಾತಿಯನ್ನು ಪ್ರಾರಂಭ ಮಾಡದಿದ್ದರೂ ಖಾಸಗಿ ಶಾಲೆಗಳು ಈಗಾಗಲೇ ಪ್ರವೇಶಾತಿ, ವಿವಿಧ ಶುಲ್ಕಗಳ ಹೆಸರಿನಲ್ಲಿ ಹಗಲು ದರೋಡೆ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.



ಸರ್ಕಾರದ 1983 ಶಿಕ್ಷಣ ಕಾಯ್ದೆಯನ್ನು ಉಲ್ಲಂಘನೆ ಮಾಡಿ ರಾಜ್ಯದ ಬಹುತೇಕ ಶಾಲೆಗಳಲ್ಲಿ ಬಟ್ಟೆ, ಶೂ ಸಾಕ್ಸ್, ನೋಟ್ ಬುಕ್ಸ್‌ಗಳನ್ನು, ಶಾಲೆಗಳಲ್ಲಿ ಮಾರಾಟ ಮಾಡುತ್ತಿರುವುದು ಕಾನೂನುಬಾಹಿರ ಹಾಗೂ ಶಿಕ್ಷಣ ಇಲಾಖೆಯ 1983 ಕಾಯ್ದೆಯನ್ನು ಸಂಪೂರ್ಣವಾಗಿ ಉಲ್ಲಂಘನೆ ಮಾಡಿರುವ ಶಾಲೆಗಳ ಮೇಲೆ ಕಠಿಣ ಕಾನೂನು ಕ್ರಮ ಜರುಗಿಸಬೇಕು ಕೇವಲ ಬೋಧನ ಶುಲ್ಕ ಮಾತ್ರ ತೆಗೆದುಕೊಳ್ಳಲು ಆದೇಶ ಮಾಡಿ ಯಾವುದೇ ಕಾರಣಕ್ಕೂ ಆನ್ಲೈನ್ ಶಿಕ್ಷಣ ನೀಡುವುದು ಸರಿಯಾದ ಕ್ರಮವಲ್ಲ. 1983ರ ಶಿಕ್ಷಣ ಕಾಯಿದೆ ಪ್ರಕಾರ ಎಲ್ಲಾ ಖಾಸಗಿ ಶಾಲೆಗಳು ಪ್ರವೇಶಾತಿಗೆ ಖಾಲಿ ಇರುವ ಸೀಟುಗಳನ್ನು ತಮ್ಮ ಶಾಲೆಯ ನೋಟಿಸ್ ಬೋರ್ಡ್ಗೆ ಹಾಕಬೇಕು, ಮತ್ತು ರೋಸ್ಟರ್ ನಿಯಮ ಜಾರಿ ಮಾಡಿ, ಶುಲ್ಕವನ್ನು ನಿಗದಿಗೊಳಿಸಿ ಶಾಲೆಯ ಮುಂಭಾಗದಲ್ಲಿ ಹಾಕಬೇಕೆಂದು ನಿಯಮ ಇದ್ದರು ರಾಜ್ಯದಲ್ಲಿ ಯಾವ ಶಾಲೆಗಳು ಸಹ ಜಾರಿಮಾಡಿರುವುದಿಲ್ಲ ಎಂದು ಆರೋಪಿಸಿದರು

ಇದಕ್ಕೆ ಸಂಬಂಧಿಸಿದಂತೆ ಅನೇಕ ಬಾರಿ ವಿವಿಧ ಜಿಲ್ಲೆಗಳಲ್ಲಿ ಸಂಬಂಧಪಟ್ಟ ಸ್ಥಳೀಯ ಡಿ.ಡಿ.ಪಿ.ಐ, ಹಾಗೂ ಬಿ.ಇ.ಒ ರವರಿಗೆ ಎಸ್‌ಎಫ್‌ಐ ಸಂಘಟನೆಯ ಕಾರ್ಯಕರ್ತರು ಮನವಿ ಮಾಡಿದರು ಕ್ರಮ ಜರುಗಿಸಲು ಮುಂದಾಗಿಲ್ಲ ಸರ್ಕಾರದ ಅಧಿಕೃತ ಶಾಲೆಗಳ ಪಟ್ಟಿ ಬಿಡುಗಡೆ ಮಾಡಲು ಹಿಂದೇಟು ಹಾಕುವುದು ಯಾಕೆ ಖಾಸಗಿ ಶಾಲೆಗಳ ಜೊತೆ ನಿಮ್ಮ ಇಲಾಖೆಯ ಅಧಿಕಾರಿಗಳು ಹೊಂದಾಣಿಕೆ ಮಾಡಿಕೊಂಡಿದ್ದಾರೆ ಎಂಬ ಅನುಮಾನ ಬರುತ್ತದೆ ಕೂಡಲೇ ಅಂತಹ ಶಾಲೆಗಳ ಮೇಲೆ ಕಾನೂನು ಕ್ರಮ ಜರುಗಿಸಿ. ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ರೇಗುಲೇಟಿಂಗ್ ಪ್ರಾಧಿಕಾರ ರಚಿಸಿ, ಶಾಲೆಗಳ ಮೇಲೆ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು ಈ ಸಂದರ್ಭದಲ್ಲಿ ಎಸ್‌ಎಫ್‌ಐ ಮುಖಂಡರಾದ ಶಶಿಕುಮಾರ್, ಪ್ರವೀಣ್, ದೇವರಾಜ್, ಮಹೇಶ್, ಹರಿಪ್ರಸಾದ್ ಇದ್ದರು.

## ಮತ ಎಣಿಕೆ ಕಾರ್ಯಕ್ಕೆ ಸಕಲ ಸಿದ್ಧತೆ

**ರಾಮನಗರ:** ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಚುನಾವಣೆ-2024ರ ಮತ ಏಣಿಕೆಗೆ ಸಂಬಂಧಿಸಿದಂತೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಮನಗರ ಇಲ್ಲಿ ಮತ ಎಣಿಕೆ ಕಾರ್ಯ ನಡೆಯಲಿದ್ದು, ಮತ ಎಣಿಕೆ ಕಾರ್ಯವನ್ನು ಯಾವುದೇ ಲೋಪದೋಷಗಳಿಗೆ ಅವಕಾಶ ನೀಡದಂತೆ ಕ್ರಮವಹಿಸಲು ಅಪರ ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾ ಚುನಾವಣಾಧಿಕಾರಿಗಳಾದ ಶಿವಾನಂದ ಮೂರ್ತಿ ಅವರು ತಿಳಿಸಿದರು. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಮತ ಏಣಿಕೆ ಕಾರ್ಯದ ಪೂರ್ವ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜೂನ್ 4 ರಂದು ನಡೆಯುವ ಮತ ಎಣಿಕೆ ಕಾರ್ಯ ನಿಮಿತ್ತ ಯಾವುದೇ ವ್ಯಕ್ತಿ/ ರಾಜಕೀಯ ಪಕ್ಷದ ಪ್ರತಿನಿಧಿಗಳು ಮತ್ತು ಏಜೆಂಟರ್‌ಗಳು ಮತ ಎಣಿಕೆ ಕೇಂದ್ರದ ಮುಖ್ಯದ್ವಾರದಿಂದ ಮೊಬೈಲ್ ಫೋನ್ ತರುವುದನ್ನು/ಬಳಸುವುದನ್ನು ನಿಷೇಧಿಸಿದೆ. ಮತ ಏಣಿಕೆ ಕೇಂದ್ರದಲ್ಲಿ ವಿದ್ಯುತ್ ವ್ಯತ್ಯಯವಾಗದಂತೆ ಕ್ರಮವಹಿಸಬೇಕು ಎಂದು ತಿಳಿಸಿದರು. ಸಿಸಿ ಟಿವಿ ಅಳವಡಿಕೆ, ಅಗ್ನಿಶಾಮಕ ದಳ, ವಿವಿಧ ರಾಜಕೀಯ ಪಕ್ಷಗಳ ಏಜೆಂಟರುಗಳಿಗೆ ಮತ್ತು ಮತ ಏಣಿಕೆ ಕಾರ್ಯಕ್ಕೆ ನಿಯೋಜನೆಗೊಂಡಿರುವ ಅಧಿಕಾರಿ ಹಾಗೂ ಸಿಬ್ಬಂದಿಗಳಿಗೆ ಗುರುತಿನ ಚೀಟಿಯನ್ನು ವಿತರಿಸುವುದು, ಮತ ಎಣಿಕೆ ಕಾರ್ಯಕ್ಕೆ ಅವಶ್ಯಕವಿರುವ ಡಾಟಾ ಎಂಟ್ರಿ ಆಪರೇಟರ್‌ಗಳನ್ನು ನಿಯೋಜಿಸುವಂತೆ, ಆರೋಗ್ಯ ಇಲಾಖೆಯವರು ನುರಿತ ವೈದ್ಯರ ತಂಡ, ಎರಡು ಆಂಬುಲೆನ್ಸ್ ಹಾಗೂ ಅಗತ್ಯ ಸಿಬ್ಬಂದಿಗಳನ್ನು ನಿಯೋಜಿಸುವಂತೆ ಹಾಗೂ ಚುನಾವಣಾ ಸಿಬ್ಬಂದಿಗಳಿಗೆ ಉಪಹಾರ, ಊಟ ಹಾಗೂ ನೀರಿನ ವ್ಯವಸ್ಥೆ ಮಾಡುವಂತೆ ತಿಳಿಸಿದರು. ಸಭೆಯಲ್ಲಿ ಡಿಡಿಎಲ್‌ಆರ್ ಹನುಮೇಗೌಡ, ತೋಟಗಾರಿಕೆ ಇಲಾಖೆಯ ಉಪನಿರ್ದೇಶಕರಾದ ರಾಜು ಹಾಗೂ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.



## 6ನೇ ತರಗತಿ ಪ್ರವೇಶಕ್ಕೆ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಂದ ಅರ್ಜಿ

**ಚಿಕ್ಕಬಳ್ಳಾಪುರ:** 2024-2025 ನೇ ಸಾಲಿನಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಪ್ರತಿಷ್ಠಿತ ಶಾಲೆಗಳಿಗೆ 6 ನೇ ತರಗತಿಗೆ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳ ಪ್ರವೇಶಕ್ಕಾಗಿ ಅರ್ಜಿ ಅರ್ಜಿ ಸಲ್ಲಿಸುವ ಅವಧಿಯನ್ನು ಮೇ 24 ರವರೆಗೆ ವಿಸ್ತರಿಸಲಾಗಿದೆ. ಅರ್ಜಿಯನ್ನು ಸಮಾಜ ಕಲ್ಯಾಣ ಇಲಾಖೆ, ಉಪನಿರ್ದೇಶಕರ ಕಚೇರಿ ಅಥವಾ ಆಯಾ ತಾಲ್ಲೂಕಿನ ಸಮಾಜ ಕಲ್ಯಾಣ ಇಲಾಖೆಯ ಕಚೇರಿಗಳಲ್ಲಿ ಪಡೆದು ಸಲ್ಲಿಸಬೇಕು. ವಿದ್ಯಾರ್ಥಿಗಳು ಪರಿಶಿಷ್ಟ ಜಾತಿಗೆ ಸೇರಿದವರಾಗಿರಬೇಕು. ಕಡ್ಡಾಯವಾಗಿ ಆಧಾರ್ ಕಾರ್ಡ್ ಹೊಂದಿರತಕ್ಕದ್ದು. 5 ನೇ ತರಗತಿಯಲ್ಲಿ ಶೇ 60% ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದಿರಬೇಕು. ಅರ್ಜಿಯೊಂದಿಗೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಮತ್ತು 5 ನೇ ತರಗತಿಯ ಅಂಕಪಟ್ಟಿ ಕಡ್ಡಾಯವಾಗಿ ಲಗತ್ತಿಸಬೇಕು, ಮುಖ್ಯೋಪಾಧ್ಯಾಯರು ಶೇಕಡವಾರು ನಮೂದಿಸಿದ ಅಂಕಪಟ್ಟಿಯನ್ನು ಮಾತ್ರ ಆಯ್ಕೆಗೆ ಪರಿಗಣಿಸಲಾಗುವುದು, ಅಂಕಪಟ್ಟಿಯಲ್ಲಿ ಗ್ರೇಡ್ ನಮೂದಿಸಿದ್ದಲ್ಲಿ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ. ಕುಟುಂಬದ ವಾರ್ಷಿಕ ವರಮಾನ 2 ಲಕ್ಷ ರೂ ಒಳಗಿರಬೇಕು. ಅರ್ಹ ವಿದ್ಯಾರ್ಥಿಗಳನ್ನು ಜಿಲ್ಲಾ ಮಟ್ಟದ ಪ್ರವೇಶ ಪರೀಕ್ಷೆ ಮುಖಾಂತರ ಆಯ್ಕೆ ಮಾಡಲಾಗುವುದು. ಒಂದು ಕುಟುಬಂದಲ್ಲಿ ಎರಡು ಮಕ್ಕಳಿಗೆ ಮಾತ್ರ ಅಂದರೆ ಒಬ್ಬ ಬಾಲಕ ಮತ್ತು ಒಬ್ಬ ಬಾಲಕಿಗೆ ಅವಕಾಶ ಕಲ್ಪಿಸಲಾಗುವುದು, ಬಾಲಕ ಇಲ್ಲದಿದ್ದಲ್ಲಿ ಇಬ್ಬರು ಬಾಲಕಿಯರಿಗೆ ಅವಕಾಶ ನೀಡಲಾಗುತ್ತದೆ. ಶ್ರೀ ಬಾಲಗಂಗಾಧರನಾಥ ಸ್ವಾಮೀಜಿ ಕನ್ನಡ ಮತ್ತು ಆಂಗ್ಲ ಹಿರಿಯ ಪ್ರಾಥಮಿಕ ಶಾಲೆ, ಅಗಲಗುರ್ಕಿ, ಚಿಕ್ಕಬಳ್ಳಾಪುರ. ಶ್ರೀ ಬಾಲಗಂಗಾಧರನಾಥ ಸ್ವಾಮೀಜಿ ಗ್ರಾಮಾಂತರ ಆಂಗ್ಲ ಪ್ರೌಢ ಶಾಲೆ, ಅಗಲಗುರ್ಕಿ, ಚಿಕ್ಕಬಳ್ಳಾಪುರ. ಡಾಲ್ಫಿನ್ ಹಿರಿಯ ಪ್ರಾಥಮಿಕ ಶಾಲೆ, ನಲ್ಲಿಮರದಹಳ್ಳಿ ರೋಡ್ , ಶಿಡ್ಲಘಟ್ಟ. ಡಾಲ್ಫಿನ್ ಹಿರಿಯ ಪ್ರಾಥಮಿಕ ಶಾಲೆ(ಸಿಬಿಎಸ್‌ಸಿ)ನಲ್ಲಿಮರದಹಳ್ಳಿ ರೋಡ್, ಶಿಡ್ಲಘಟ್ಟ. ಎಸ್.ಎಫ್. ಎಸ್ ಸ್ಕೂಲ್, ಎಂ.ಜಿ ರೋಡ್, ಚಿಂತಾಮಣಿ. ಸೆಂಟ್ ಅನಾನ್ಸ್ ಸೂಲ್ (ಐ.ಸಿ.ಎ.ಸಿ.ಇ) ಮಾದನಹಳ್ಳಿ, ಗೌರಿಬಿದನೂರು. ನ್ಯೂ ಹ್ರೈಜೆನ್ ಇಂಗ್ಲೀಷ್ ಸ್ಕೂಲ್, ಚಿಕ್ಕಬಳ್ಳಾಪುರ. ಶ್ರೀ ಅರವಿಂದ್ರ ಪ್ರಾಥಮಿಕ ಮತ್ತು ಪ್ರೌಢ ಶಾಲೆ, (ಆಂಗ್ಲ) ಗುಡಿಬಂಡೆ ಪ್ರತಿಷ್ಠಿತ ಶಾಲೆಗಳಿಗೆ ಪ್ರವೇಶ ನೀಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆಯ ತಾಲ್ಲೂಕು ಸಹಾಯಕ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದೆಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೃಷಿ ಪರಿಕರ, ರಸಗೊಬ್ಬರ ಮಾರಾಟ ಪಾರದರ್ಶಕವಾಗಿರಲಿ: ತಹಸೀಲ್ದಾರ್

**ಚಿಕ್ಕಬಳ್ಳಾಪುರ:** ವಿವಿಧ ಕೃಷಿ ಪರಿಕರಗಳನ್ನು ಕಾಯ್ದೆಗಳನುಸಾರ ಯಾವುದೇ ಕೊರತೆಯಾಗದಂತೆ ತಾಲ್ಲೂಕಿನ ರೈತರಿಗೆ ಪಾರದರ್ಶಕವಾಗಿ ಮಾರಾಟ ಮಾಡಬೇಕೆಂದು ತಹಶೀಲ್ದಾರರಾದ ಎಂ. ಅನಿಲ್ ಅವರು ಸೂಚಿಸಿದರು.



ಚಿಕ್ಕಬಳ್ಳಾಪುರ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ಇಂದು ಕೃಷಿ ಪರಿಕರ ಮಾರಾಟಗಾರರೊಂದಿಗೆ ಮುಂಗಾರು ಹಂಗಾಮು ಪೂರ್ವ ಸಿದ್ದತಾ ಸಂಬಂಧ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಮುಂಗಾರು ಹಂಗಾಮಿನಲ್ಲಿ ರೈತರಿಗೆ ಅಗತ್ಯವಾಗಿರುವ ಬಿತ್ತನೆಬೀಜ, ರಸಗೊಬ್ಬರ ಮತ್ತು ಕೀಟನಾಶಕಗಳನ್ನು ಮಾರಾಟ ಮಾಡುವಾಗ ಹೆಚ್ಚು ಹಣ ಪಡೆಯಬಾರದು. ನಿಗದಿಪಡಿಸಿದ ದರಗಳಲ್ಲಿ ಮಾತ್ರ ಮಾರಾಟ ಮಾಡಬೇಕು. ಗುಣಮಟ್ಟದ ಪರಿಕರಗಳನ್ನು ನೀಡಬೇಕು ಎಂದು ತಹಸೀಲ್ದಾರರು ನಿರ್ದೇಶನ ನೀಡಿದರು. ರಸಗೊಬ್ಬರಗಳ ದಾಸ್ತಾನು ವಿವರ, ದರ ಪಟ್ಟಿಯನ್ನು ಸಾರ್ವಜನಿಕರಿಗೆ ಎದ್ದುಕಾಣುವಂತೆ ಫಲಕಗಳಲ್ಲಿ ಪ್ರದರ್ಶಿಸಬೇಕು.

ಕೃಷಿ ಪರಿಕರಗಳನ್ನು ಕೊಳ್ಳುವ ರೈತರಿಗೆ ರಸೀದಿಯನ್ನು ಕಡ್ಡಾಯವಾಗಿ ಸೂಕ್ತ ವಿವರಗಳೊಂದಿಗೆ ನೀಡಬೇಕು. ಪರಿಕರಗಳ ದಾಸ್ತಾನು ವಿವರಗಳನ್ನು ಇಲಾಖೆಗೆ ಕಾಲಕಾಲಕ್ಕೆ ಸಲ್ಲಿಸಬೇಕೆಂದು ಎಂದರು.

ರಸಗೊಬ್ಬರಗಳನ್ನು ರೈತರ ಆಧಾರ್ ಪಡೆದು ಪಿ.ಓ.ಎಸ್ ಯಂತ್ರದ ಮೂಲಕವೇ ವಿತರಿಸಬೇಕು. ರಸಗೊಬ್ಬರ, ಬಿತ್ತನೆಬೀಜ ಮತ್ತು ಕೀಟನಾಶಕ ಕಾಯ್ದೆಗಳ ಅನುಸಾರ ವಹಿವಾಟು ನಡೆಸಬೇಕು. ಯಾವುದೇ ಕೊರತೆ ಲೋಪದೋಷಗಳಿಗೆ ಅವಕಾಶ ವಾಗದಂತೆ ಕೃಷಿ ಚಟುವಟಿಕೆಗಳಿಗೆ ಪೂರಕ ವಾಗಿರುವ ಪರಿಕರಗಳನ್ನು ಮಾರಾಟ ಮಾಡಬೇಕೆಂದು ತಹಸೀಲ್ದಾರರಾದ ಎಂ.ಅನಿಲ್ ಅವರು ತಿಳಿಸಿದರು. ಸಹಾಯಕ ಕೃಷಿ ನಿರ್ದೇಶಕರಾದ ಎ. ಕೇಶವರೆಡ್ಡಿ ಮಾತನಾಡಿ, ರೈತರಿಗೆ ಕೃಷಿ ಪರಿಕರಗಳ ಅಳವಡಿಕೆ ಕುರಿತು ತಾಂತ್ರಿಕ ಮಾಹಿತಿ ನೀಡಬೇಕು. ಕೃಷಿ ಸಂಬಂಧ ಪರಿಕರಗಳ ಮಾರಾಟದ ವಿವರಗಳ ಮಾಹಿತಿಯನ್ನು ಇಲಾಖೆಗೆ ತಪ್ಪದೆ ಸಲ್ಲಿಸಬೇಕು ಎಂದರು. ತಾಲ್ಲೂಕು ಕೃಷಿ ಪರಿಕರ ಮಾರಾಟಗಾರರ ಸಂಘದ ಅಧ್ಯಕ್ಷರಾದ ಮಂಜುನಾಥ್ ಮಾತನಾಡಿ, ರೈತರಿಗೆ ಸಕಾಲದಲ್ಲಿ ಗುಣಮಟ್ಟದ ಕೃಷಿ ಪರಿಕರಗಳನ್ನು ನೀಡಲು ಎಲ್ಲಾ ಪರಿಕರ ಮಾರಾಟಗಾರರು ಮುಂದಾಗಬೇಕು ಎಂದರು. ಕೃಷಿ ಅಧಿಕಾರಿಗಳಾದ ಗಂಗಾಧರರೆಡ್ಡಿ, ರಾಮಚಂದ್ರ, ಕೃಷಿ ಇಲಾಖೆಯ ಸಿಬ್ಬಂದಿ ಮತ್ತು ಚಿಕ್ಕಬಳ್ಳಾಪುರ ತಾಲ್ಲೂಕು ಬಿತ್ತನೆ ಬೀಜ, ರಸಗೊಬ್ಬರ ಮತ್ತು ಕೀಟನಾಶಕ ಮಾರಾಟಗಾರರು ಸಭೆಯಲ್ಲಿ ಭಾಗವಹಿಸಿದ್ದರು.

## ಧರ್ಮ-ಅಧರ್ಮದ ಯುದ್ಧವಾಗಿದೆ

**ತಿಪಟೂರು:** ಶಿಕ್ಷಕರು ಅಧಿಕಾರಕ್ಕೆ ಬಂದರೆ ಮಾತ್ರ ಶಿಕ್ಷಕರ ಅಭಿವೃದ್ಧಿ ಸಾಧ್ಯವಾಗುತ್ತದೆ ಅದ್ದರಿಂದ ಈ ಬಾರಿ ನಡೆಯುವ ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಶಿಕ್ಷಕ ವೃತ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನಾನು ಸ್ಪರ್ಧೆ ಮಾಡಿದ್ದು, ಈ ಬಾರಿಯ ಚುನಾವಣೆಯು ಸತ್ಯ-ಅಸತ್ಯ ಮತ್ತು ಧರ್ಮ-ಅಧರ್ಮದ ಯುದ್ಧವಾಗಿದೆ ಎಂದು ಪಕ್ಷೇತರ ಅಭ್ಯರ್ಥಿ ಲೋಕೇಶ್ ತಾಳಿಕಟ್ಟೆ ತಿಳಿಸಿದರು.

ನಗರದ ಖಾಸಗಿ ಹೋಟೆಲ್ ಕಲ್ಪತರು ಗ್ರಾಂಡ್ ನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಆಗ್ನೇಯ ಶಿಕ್ಷಕರ ಕ್ಷೇತ್ರದ ಪಕ್ಷೇತರ ಅಭ್ಯರ್ಥಿ ಲೋಕೇಶ್ ತಾಳಿಕಟ್ಟೆ ಮಾತನಾಡುತ್ತಾ ಈ ಬಾರಿ ನಡೆಯುವ ಚುನಾವಣೆಯು ಸತ್ಯ ಅಸತ್ಯ ಮತ್ತು ಧರ್ಮ ಅಧರ್ಮದ ಯುದ್ಧವಾಗಿದೆ. ಬಹುತೇಕ ಶಿಕ್ಷಕರು ಬಹಳಷ್ಟು ವರ್ಷಗಳಿಂದ ನನ್ನ ಹೋರಾಟವನ್ನು ಗಮನಿಸಿ ತುಂಬು ಅಭಿಮಾನದಿಂದ' ನನ್ನನ್ನು ಚುನಾವಣೆಗೆ ಸ್ಪರ್ಧಿಸಲು ಬೆಂಬಲಿಸಿದ್ದಾರೆ, ಈ ಬಾರಿ ರಾಜಕೀಯ ವ್ಯಕ್ತಿಯನ್ನು ಹೊರತುಪಡಿಸಿ ಒಬ್ಬ ಶಿಕ್ಷಕ ಗೆಲುವು ಸಾಧಿಸುವುದು ಖಚಿತ ಎಂದು ತಿಳಿಸಿದರು.

ವಿಧಾನ ಪರಿ?ತ್ ಸದಸ್ಯ ವೈ.ಎ.ನಾರಾಯಣಸ್ವಾಮಿ ವಿರುದ್ಧ ಹರಿ ಹಾಯಿದ ಅವರು ಮೂರು ಬಾರಿ ಚುನಾವಣೆಯಲ್ಲಿ ಶಿಕ್ಷಕರ ಕ್ಷೇತ್ರದಿಂದ ಗೆಲುವು ಸಾಧಿಸಿದ ನಾರಾಯಣಸ್ವಾಮಿ ಶಿಕ್ಷಕರ ನಂಬಿಕೆಗೆ ಅರ್ಹರಾದವರಲ್ಲ.

ನಾರಾಯಣಸ್ವಾಮಿಗೆ ಶಿಕ್ಷಕರು ಮತ ಹಾಕಿ ಮೋಸ ಹೋಗಿದ್ದೇವೆ. ಶಿಕ್ಷಕರ ಕುಂದು ಕೊರತೆ ಗಳನ್ನು ಮತ್ತು ಸಮಸ್ಯೆಗಳನ್ನು ಬಗೆಹರಿಸುವಲ್ಲಿ ನಾರಾಯಣಸ್ವಾಮಿ ವಿಫಲರಾಗಿದ್ದಾರೆ. ಈ ಬಾರಿ ಆಗ್ನೇಯ ಶಿಕ್ಷಕರ ಕ್ಷೇತ್ರದ ಅಭ್ಯರ್ಥಿಯಾಗಿ ಸ್ಪರ್ಧೆ ಮಾಡಿದ್ದು, ಶಿಕ್ಷಕರ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸುತ್ತೇನೆ. ಕೋವಿಡ್ ಬಂದಂತಹ ಸಂದರ್ಭದಲ್ಲಿ ಸರಕಾರಿ ಶಾಲಾ ಶಿಕ್ಷಕರಿಗೆ ಕಿಟ್ ನೀಡುವಂತೆ ರಾಜ್ಯ ಸರ್ಕಾರಕ್ಕೆ ವಿಭಿನ್ನ ರೀತಿಯಲ್ಲಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಒತ್ತಾಯಿಸಿದ್ದೇನೆ.

ಬಿ.ಎಸ್.ಯಡಿಯೂರಪ್ಪ ಮುಖ್ಯಮಂತ್ರಿಯಾಗಿದ್ದ ಸಂಧರ್ಭದಲ್ಲಿ ಸರಕಾರಿ ನೌಕರರು ಹಾಗೂ ಶಿಕ್ಷಕರ ಬಗ್ಗೆ ಅಪಾರವಾದ ಕಾಳಜಿಯನ್ನು ಹೊಂದಿದ್ದರು. ಆದರೆ ದುರಾದೃಷ್ಟ ನಾವು ರಾಜಕೀಯ ವ್ಯಕ್ತಿಯನ್ನು ಗೆಲ್ಲಿಸಿ ಮೋಸ ಹೋದೆವು. ನಾರಾಯಣಸ್ವಾಮಿಗೆ ಶಿಕ್ಷಕರ ಬಗ್ಗೆ ಕೊಂಚವೂ ಆಸಕ್ತಿ ಇಲ್ಲ. ಸರಕಾರಿ ಶಾಲೆಗಳನ್ನು ಮುಚ್ಚುವಂತಹ ಪರಿಸ್ಥಿತಿಯನ್ನು ಉಂಟಾಗಿದ್ದು, ನಾನೊಬ್ಬ ಶಿಕ್ಷಕನಾಗಿ ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ. ಕನಿಷ್ಠ ವಿದ್ಯಾರ್ಥಿಗಳು ಇರುವ ಸರಕಾರಿ ಶಾಲೆಗಳನ್ನು ಮುಚ್ಚಬಾರದು. ಪರಿ?ತ್ತಿನ ಈ ಸದಸ್ಯರು ರಾಜ್ಯದ ಸಾಮಾಜಿಕ, ಆರ್ಥಿಕ ಮತ್ತು ಸಾಂಸ್ಕೃತಿಕ ಅಭಿವೃದ್ಧಿ ಮತ್ತು ಎಲ್ಲಾ ವರ್ಗದ ಜನರನ್ನು ಒಳಗೊಳ್ಳುವ ಸುಸ್ಥಿರ ಕರ್ನಾಟಕವನ್ನು ಕಟ್ಟಿಕೊಡುವ ಜವಾಬ್ದಾರಿಯನ್ನು ನಿರ್ವಹಿಸಬೇಕಾಗಿತ್ತು ಎಂದರು. ಪತ್ರಿಕಾಗೋಷ್ಠಿಯಲ್ಲಿ ಕೃಷ್ಣಮೂರ್ತಿ, ಮಲ್ಲೇಶ್, ರೇಣುಕಯ್ಯ ಮತ್ತು ಲೋಕೇಶ್ ತಾಳಿ ಕಟ್ಟೆ ಬೆಂಬಲಿಗರು ಉಪಸ್ಥಿತರಿದ್ದರು

# ರೈತಮೋರ್ಚಾ ಪದಾಧಿಕಾರಿಗಳ ಪದಗ್ರಹಣ



**ಮಂಡ್ಯ:** ಬಿಜೆಪಿ ಜಿಲ್ಲಾ ರೈತಮೋರ್ಚಾ ಆಯೋಜಿಸಿದ್ದ ತಾಲ್ಲೂಕು ರೈತಮೋರ್ಚಾ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮ ಜಿಲ್ಲಾ ಬಿಜೆಪಿ ಕಚೇರಿ ಆವರಣದಲ್ಲಿ ನಡೆಯಿತು. ಶ್ರೀರಂಗಪಟ್ಟಣ ತಾಲುಕು ಅಧ್ಯಕ್ಷರಾಗಿ ಸತೀಶ್ ಹನಿಯಂಬಾಡಿ ನೇಮಕಗೊಂಡರು.

ನಂತರ ಮಾತನಾಡಿದ ಸತೀಶ್ ಹನಿಯಂಬಾಡಿ, ಇಂದು ಬಿಜೆಪಿ ಜಿಲ್ಲಾ ರೈತಮೋರ್ಚಾ ಜಿಲ್ಲಾಧ್ಯಕ್ಷ ಅಶೋಕ್ ಜಯರಾಂ ಮತ್ತು ಮುಖಂಡರ ಸಮ್ಮುಖದಲ್ಲಿ ನೇಮಕಗೊಂಡಿದ್ದೇನೆ. ಎಲ್ಲ ಪದಾಧಿಕಾರಿಗಳ ಜೊತೆ ಸೇರಿ ರೈತ ಪರ ಹೋರಾಟಗಳಲ್ಲಿ ಭಾಗಿಯಾಗುವುದರ ಮೂಲಕ ರೈತರ ಪರವಾಗಿ ನಿಲ್ಲುತ್ತೇವೆ ಎಂದರು.

ಬಿಜೆಪಿ ಜಿಲ್ಲಾ ರೈತಮೋರ್ಚಾ ಜಿಲ್ಲಾಧ್ಯಕ್ಷ ಅಶೋಕ್‌ಜಯರಾಂ ಮಾತನಾಡಿ , ಬಿಜೆಪಿ ಜಿಲ್ಲಾ ರೈತಮೋರ್ಚಾದಲ್ಲಿ 8 ಮಂಡಲಗಳಿದ್ದು ಶ್ರೀರಂಗಪಟ್ಟ ಮಂಡಲದ ರೈತ ಮೋರ್ಚದ ಅಧ್ಯಕ್ಷನಾಗಿ ಪಕ್ಷದ ಸಾಮಾಜಿಕ ಕಳಕಳಿವಿರುವ ಕಲಾವಿದ ಆದಂತಹ ಸಾಕಷ್ಟು ಒಡನಾಟವನ್ನು ಇಟ್ಟುಕೊಂಡರು ಸತೀಶ್ ರವರನ್ನ ಇಂದು ಜವಾಬ್ದಾರಿಯನ್ನು ಕೊಡುವಂತ ಕೆಲಸವನ್ನ ಮಾಡಿದ್ದೇವೆ, ಮುಂದಿನ ದಿನಗಳಲ್ಲಿ ರೈತ ಮೋರ್ಚಾದ ಪಕ್ಷ ಸಂಘಟನೆ ಮತ್ತು ಮಂಡ್ಯ ಜಿಲ್ಲೆಯ ರೈತರ ಸಮಸ್ಯೆಯನ್ನು ನಿವಾರಣೆ ಮಾಡುವ ನಿಟ್ಟನಲ್ಲಿ ಕೆಲಸವನ್ನು ಮಾಡಲಿದ್ದೇವೆ ಎಂದರು.

ರಾಜ್ಯ ಕಾರ್ಯದರ್ಶಿ ಮಳವಳ್ಳಿ ಅಶೋಕ್ಕುಮಾರ್ ,ರಾಜ್ಯ ಕಾರ್ಯಕಾರಿಣಿ ಸದಸ್ಯ ಡಾ.ಸಿದ್ದರಾಮಯ್ಯ ,ಮುಖಂಡರಾದ ಇಂಡುವಾಳು ಸಚ್ಚಿದಾನಂದ , ಪಿ ಹಳ್ಳಿ ರಮೇಶ್ ಸೇರಿದಂತೆ ಮತ್ತಿತರರಿದ್ದರು ಹಾಜರಿದ್ದರು.

# ಲಿಂಗಾಯತ ಸಮಾಜದಲ್ಲಿ ಶಿವ ದೀಕ್ಷಾ ಸಂಸ್ಕಾರ ಮುಖ್ಯ

**ತಿಪಟೂರು:** ವೀರಶೈವ ಲಿಂಗಾಯತ ಸಮಾಜದಲ್ಲಿ ಶಿವ ದೀಕ್ಷಾ ಸಂಸ್ಕಾರ ಮುಖ್ಯವಾಗಿದ್ದು, ದೀಕ್ಷೆ ಇಲ್ಲದವನಿಗೆ ಮೋಕ್ಷವಿಲ್ಲ ಎಂಬುದು ಧರ್ಮದ ಮುಖ್ಯ ಸಂದೇಶವಾಗಿದೆ ಮೂಲ ಗುರುಗಳಾದ ಶ್ರೀ ಗುದ್ದಲೀಶ್ವರ ಸ್ವಾಮಿಗಳು ಇದೇ ಪುಣ್ಯಕ್ಷೇತ್ರದಲ್ಲಿ ನಾಲ್ಕು ಶತಮಾನಗಳಿಂದಲೂ ದೀಕ್ಷಾ ಸಂಸ್ಕಾರ ನೀಡಿದ್ದಾರೆ ಎಂದು ಶ್ರೀ ಗುದ್ದಲೀಶ್ವರ ಸ್ವಾಮಿಗಳು ಸ್ವಾಮಿಗಳು ತಿಳಿಸಿದರು

ನಗರದ ಪಿ ಜಿ ಎಮ್ ಕಲ್ಯಾಣ ಮಂಟಪದಲ್ಲಿ ನಡೆದ ಶ್ರೀ ಗುರು ಗುದ್ಲಿಶ್ವರಸ್ವಾಮಿಗಳ ಸ್ವಾಮಿಗಳ 92ನೇ ಪುಣ್ಯ ಸ್ಮರಣೆ ಹಾಗೂ ಶಿವ ದೀಕ್ಷಾ ಸಂಸ್ಕಾರ ಕಾರ್ಯಕ್ರಮದಲ್ಲಿ ನೆರೆದಿದ್ದ ನೂರಾರು ಭಕ್ತರನ್ನು ಉದ್ದೇಶಿಸಿ ಆಶೀರ್ವದಿಸುತ್ತಾ ಸಮಾಜ ಮತ್ತು ಸಮುದಾಯಗಳ ಏಳಿಗೆಗೆ ಶ್ರೀ ಗುರುಪೀಠಗಳು ಧರ್ಮ ಪ್ರಚಾರದಲ್ಲಿ ಶ್ರಮಿಸಬೇಕು ಅದೇ ರೀತಿ ಭಕ್ತರು ಗುರು ಸ್ಮರಣೆ ಧರ್ಮ ಕಾರ್ಯಗಳಿಗೆ ನಿತ್ಯ ಕೆಲಸಗಳನ್ನು ಒಂದು ದಿನ ಬದಿಗೊತ್ತಿ ಸೇವ ಕಾರ್ಯದಲ್ಲಿ ಭಾಗವಹಿಸಿದಾಗ ಸಮಾಜ ಧರ್ಮ ಗಟ್ಟಿಯಾಗಿ ನೆಲೆಯುರುತ್ತದೆ, ಧಾರ್ಮಿಕ ಕಾರ್ಯಕ್ರಮಗಳಲ್ಲಿ ಕುಟುಂಬ ಸಮೇತರಾಗಿ ಮಕ್ಕಳೊಂದಿಗೆ ಪಾಲ್ಗೊಳ್ಳಿ, ಧಾರ್ಮಿಕ ಭಾವನೆ, ಸಂಸ್ಕೃತಿ ಉಳಿದು ಬೆಳೆಯುತ್ತದೆ, ಪ್ರತಿ ಮನು?ರಲ್ಲಿ ಆತ್ಮ ಶುದ್ಧೀಕರಣವಾದಗ ತನ್ನ?ಕ್ಕೆ ತಾನೇ ಸಮಾಜ ಶುದ್ಧೀಕರಣವಾಗುತ್ತದೆ ಮುಂದಿನ ವರ್?ದಲ್ಲಿ ಭಕ್ತರ ಸಹಕಾರದೊಂದಿಗೆ ಗುದ್ದಲೀಶ್ವರ ಸ್ವಾಮಿಗಳ ಭವ್ಯ ಮೆರವಣಿಗೆ ನಡೆಯಲಿದೆ ಎಂದು ತಿಳಿಸಿದರು. ಕಾರ್ಯಕ್ರಮದ ಸ್ವಾಗತ ಮತ್ತು ನಿರೂಪಣೆಯನ್ನು ಎಸ್ ಬಿ ಶಿವಕುಮಾರ್ ನೆರವೇರಿಸಿದರು, ವಂದನಾರ್ಪಣೆಯನ್ನು ನಿವೃತ್ತ ಪ್ರಾಂಶುಪಾಲರಾದ ಸಾಸಲು ಶಾಂತವೀರಪ್ಪ ನಡೆಸಿಕೊಟ್ಟರು, 18 ಕ್ಕು ಹೆಚ್ಚು ದೀಕ್ಷಾಟುಗಳಿಗೆ ಶಿವ ದೀಕ್ಷಾ ಸಂಸ್ಕಾರ ನೀಡಲಾಯಿತು ವಟುಗಳಿಗೆ ಲುಂಗಿ ಮತ್ತು ಟವಲ್ ಗಳನ್ನು, ಪ್ರತಿವರ್ಷದಂತೆ ಈ ವರ್?ವೂ ಸಹ ಉಮೇಶ್ ಜಿ ಎಸ್ (ಕಬ್ಬಿಣದ ಅಂಗಡಿ), ಹಾಗೂ ಈಚನೂರು ಲೋಕೇಶ್ (ಸಂಪಿ) ಉಚಿತವಾಗಿ ನೀಡಿದರು.



ಎಲ್ಲಾ ಭಕ್ತರಿಗೂ ವೀರಶೈವ ನಂದಾಶ್ರಮ ಹಾಗೂ ಪಾತ್ರೆ ಗುದ್ಲಪ್ಪ ಕುಟುಂಬ ಮತ್ತು ಭಕ್ತಾದಿಗಳು ಪ್ರಸಾದ ಸೇವೆಯಲ್ಲಿ ಪಾಲ್ಗೊಂಡು ಪ್ರಸಾದ ವ್ಯವಸ್ಥೆ ಮಾಡಿದ್ದರು.

# ಲೋಕಸಭೆ ಮತ ಎಣಿಕೆ ನಿಖರವಾಗಿರಲಿ

## ಜೂನ್ 4 ರಂದು ಲೋಕಸಭಾ ಸಾರ್ವತ್ರಿಕ ಚುನಾವಣೆಯ ಮತ ಎಣಿಕೆ | ಜಿಲ್ಲಾಧಿಕಾರಿ ಡಾ: ಕುಮಾರ ಮಾಹಿತಿ

**ಮಂಡ್ಯ:** ಲೋಕಸಭಾ ಸಾರ್ವತ್ರಿಕ ಚುನಾವಣೆಯ ಮತ ಎಣಿಕೆಯು ಜೂನ್ 4 ರಂದು ನಡೆಯಲಿದ್ದು, ಮತ ಎಣಿಕೆಯ ಕೆಲಸ ನಿಖರವಾಗಿರಲಿ ಎಂದು ಜಿಲ್ಲಾಧಿಕಾರಿ ಡಾ: ಕುಮಾರ ಅವರು ತಿಳಿಸಿದರು.

ಸೋಮವಾರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮತ ಎಣಿಕೆ ತರಬೇತಿ ಕುರಿತಂತೆ ಸಭೆ ನಡೆಸಿ ಮಾತನಾಡಿದರು. 8 ವಿಧಾನಸಭಾ ಕ್ಷೇತ್ರದ ಇ.ವಿ.ಎಂ ಯಂತ್ರಗಳನ್ನು 16 ಕೊಠಡಿಗಳು/ ಸ್ಟ್ರಾಂಗ್ ರೂಂ ನಲ್ಲಿ ಇಡಲಾಗಿದೆ. ಜೂನ್ 4 ರಂದು 16 ಸ್ಟ್ರಾಂಗ್ ರೂಂ ಗಳನ್ನು ತೆರೆದು ಎಣಿಕೆ ಪ್ರಾರಂಭಿಸಲಾಗುವುದು ಎಂದರು.

ಇ.ವಿ.ಎಂ ಗಳು ಬೆಳಿಗ್ಗೆ 8 ಗಂಟೆಗೆ ಎಣಿಕೆ ಟೇಬಲ್ ಗಳಿಗೆ ತಲುಪಿಸಲಾಗುವುದು. ಮತ ಎಣಿಕೆಯ ಸಿಬ್ಬಂದಿಗಳು ಎಣಿಕೆಯ ಸಂದರ್ಭದಲ್ಲಿ ಚುನಾವಣಾ ಆಯೋಗ ನೀಡಿರುವ ನಿರ್ದೇಶನಗಳನ್ನು ಪಾಲಿಸಬೇಕು ಯಾವುದೇ ಲೋಪವಾಗದಂತೆ ನೋಡಿಕೊಳ್ಳಿ ಎಂದರು.

ಸಹಾಯಕ ಚುನವಣಾಧಿಕಾರಿಗಳು ಪ್ರತಿ ಸುತ್ತಿನ ಎಣಿಕೆಯನ್ನು ಚುನಾವಣಾ ಆಯೋಗ ತಿಳಿಸುವ ವೆಬ್ ಸೈಟ್ ನಲ್ಲಿ ಅಪ್ ಲೋಡ್ ಮಾಡಬೇಕಿರುತ್ತದೆ. ಇಲ್ಲಿ ತಿದ್ದುಪಡಿಗೆ ಅವಕಾಶ ನೀಡದಂತೆ ಕಾರ್ಯನಿರ್ವಹಿಸಿ ಎಂದರು.

ಪ್ರತಿ ವಿಧಾನಸಭಾ ಕ್ಷೇತ್ರವಾರು ಇ.ವಿ.ಎಂ.ಗಳನ್ನು ಮತ ಎಣಿಕೆ ಕೊಠಡಿಗೆ ತಲುಪಿಸಲು ಸಿಬ್ಬಂದಿಗಳನ್ನು ನಿಯೋಜಿಸಲಾಗುವುದು. ಸಹಾಯಕ ಚುನಾವಣಾ ಅಧಿಕಾರಿಗಳು ಅವರನ್ನು ಗುರುತಿಸಲು ನಿಗದಿ ಪಡಿಸಿದ ಬಣ್ಣದ ಟೀ ಶರ್ಟ್ ಸಹ ನೀಡಲಾಗುವುದು. ನಿಯೋಜಿಸಲಾಗುವ ಸಿಬ್ಬಂದಿಗಳು ತಿಳಿಸಲಾಗುವ ಸಮಯಕ್ಕೆ ಎಣಿಕೆ ಕೇಂದ್ರ ಹಾಗೂ ಸ್ಥಳದಲ್ಲಿ ಹಾಜರಾಗಿ ಶಿಸ್ತು ಬದ್ಧವಾಗಿ ಕಾರ್ಯನಿರ್ವಹಿಸಬೇಕು. ಈ ಕುರಿತಂತೆ ಸಹಾಯಕ ಚುನಾವಣಾಧಿಕಾರಿಗಳು ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ನಿರ್ದೇಶನ ನೀಡಿ ಸಮನ್ವಯದಿಂದ ಕಾರ್ಯನಿರ್ವಹಿಸಿ ಎಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಶೇಖ್ ತನ್ವೀರ್ ಆಸಿಫ್ ಹಾಗೂ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.



### ಸ್ಟ್ರಾಂಗ್ ರೂಂ ಪರಿಶೀಲನೆ

**ಜಿಲ್ಲಾಧಿಕಾರಿ ಡಾ: ಕುಮಾರ ಅವರು ಸೋಮವಾರ ಮಂಡ್ಯ ವಿಶ್ವವಿದ್ಯಾಲಯದಲ್ಲಿ ಸ್ಟ್ರಾಂಗ್ ರೂಂ ಪರಿಶೀಲನೆ ನಡೆಸಿದರು. ಮತ ಎಣಿಕೆ ಕೊಠಡಿಗಳಲ್ಲಿ ಮಾಡಿಕೊಳ್ಳಬೇಕಿರುವ ಸಿದ್ಧತೆ ಪರಿಶೀಲಿಸಿ ಅಧಿಕಾರಿಗಳಿಗೆ ಸಲಹೆ ಹಾಗೂ ಸೂಚನೆ ನೀಡಿದರು. ಇದೇ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ: ಹೆಚ್ ಎಲ್ ನಾಗರಾಜು ಉಪಸ್ಥಿತರಿದ್ದರು.**



### 5403 ಅರ್ಹ ಮತದಾರರ ಅಂತಿಮ ಪಟ್ಟಿ ಪ್ರಕಟ

**ಕರ್ನಾಟಕ ವಿಧಾನ ಪರಿಷತ್ತಿಗೆ ದಕ್ಷಿಣ ಶಿಕ್ಷಕರ ಕ್ಷೇತ್ರದಿಂದ ನಡೆಯುವ ಚುನಾವಣೆ 2024 ಕ್ಕೆ ಸಂಬಂಧಿಸಿದಂತೆ ಅಂತಿಮ ಮತದಾರರ ಪಟ್ಟಿ ಪ್ರಕಟವಾಗಿದ್ದು, ಜಿಲ್ಲೆಯಲ್ಲಿ 5403 ಅರ್ಹ ಮತದಾರರಿದ್ದಾರೆ ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ: ಕುಮಾರ ಅವರು ತಿಳಿಸಿದರು. ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ರಾಜಕೀಯ ಪಕ್ಷದ ಮುಖಂಡರ ಸಭೆ ನಡೆಸಿ ಮಾತನಾಡಿದರು. ಜೂನ್ 3 ರಂದು ಬೆಳಿಗ್ಗೆ 8 ರಿಂದ 4 ರವರೆಗೆ ಮತದಾನ ನಡೆಯಲಿದ್ದು. ಜೂನ್ 6 ರಂದು ಮತ ಎಣಿಕೆ ನಡೆಯಲಿದೆ, ಎಲ್ಲ ಚುನಾವಣೆ ಪ್ರಕ್ರಿಯೆಗಳು ಜೂನ್ 12 ರಂದು ಪೂರ್ಣಗೊಳ್ಳುತ್ತದೆ ಎಂದರು. ದಕ್ಷಿಣ ಶಿಕ್ಷಕರ ಕ್ಷೇತ್ರದ ವ್ಯಾಪ್ತಿಗೆ ಮೈಸೂರು, ಮಂಡ್ಯ, ಚಾಮರಾಜನಗರ ಮತ್ತು ಹಾಸನ ಜಿಲ್ಲೆಗಳು ಒಳಪಡುತ್ತದೆ ಹಾಗೂ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳು ಸಹಾಯಕ ಚುನಾವಣಾಧಿಕಾರಿಗಳಾಗಿರುತ್ತಾರೆ. ಮೈಸೂರು ವಿಭಾಗದ ಪ್ರಾದೇಶಿಕ ಆಯುಕ್ತರು ಚುನಾವಣಾಧಿಕಾರಿಗಳಾಗಿರುತ್ತಾರೆ ಎಂದರು. ಮಂಡ್ಯ ತಾಲ್ಲೂಕು ಕಚೇರಿಯಲ್ಲಿ ನೊಂದಣಿಯಾಗಿರುವ ಮತದಾರರ ಸಂಖ್ಯೆ ಹೆಚ್ಚಿದ್ದು, ತಾಲ್ಲೂಕು ಕಚೇರಿಯಲ್ಲಿ ಎರಡು ಮತ ಕೇಂದ್ರ ತೆರೆಯಲಾಗುವುದು. ಮಂಡ್ಯ ತಾಲ್ಲೂಕು ಪಂಚಾಯತ್ ಸಾಮರ್ಥ್ಯ ಸೌಧದಲ್ಲಿ ಒಂದು ಮತ ಕೇಂದ್ರ ಒಟ್ಟು 3 ಮತ ಕೇಂದ್ರಗಳು ಕಾರ್ಯನಿರ್ವಹಿಸಲಿದೆ. ಜಿಲ್ಲೆಯಲ್ಲಿ 9 ಮತಕೇಂದ್ರಗಳಿದ್ದು, ಅಂತಿಮ ಮತದಾರರ ಪಟ್ಟಿಯ ಪ್ರಕಾರ 5403 ಮತದಾರರು ಮತದಾರರ ಪಟ್ಟಿಯಲ್ಲಿ ಹೆಸರು ನೊಂದಣಿ ಮಾಡಿಕೊಂಡಿದ್ದಾರೆ ಎಂದರು.**

**ಕೆ ಆರ್ ಪೇಟೆ ಮಿನಿ ವಿಧಾನಸೌಧ ಮತ ಕೇಂದ್ರದಲ್ಲಿ ಗಂಡು - 327, ಹೆಣ್ಣು - 137 ಒಟ್ಟು 464 ಮತದಾರರು ಹೆಸರು ನೊಂದಾಯಿಸಿಕೊಂಡಿದ್ದಾರೆ. ನಾಗಮಂಗಲ ಮಿನಿ ವಿಧಾನಸೌಧ ಮತ ಕೇಂದ್ರದಲ್ಲಿ ಗಂಡು - 296, ಹೆಣ್ಣು - 147, ಒಟ್ಟು - 443 ಮತದಾರರು ಹೆಸರು ನೊಂದಾಯಿಸಿಕೊಂಡಿದ್ದಾರೆ. ಪಾಂಡವಪುರ ಮಿನಿ ವಿಧಾನಸೌಧ ಮತ ಕೇಂದ್ರದಲ್ಲಿ ಗಂಡು - 260, ಹೆಣ್ಣು - 186, ಒಟ್ಟು - 446 ಮತದಾರರು ಹೆಸರು ನೊಂದಾಯಿಸಿಕೊಂಡಿದ್ದಾರೆ. ಮಂಡ್ಯ ಮಿನಿವಿಧಾನಸೌಧ ಮತ ಕೇಂದ್ರದಲ್ಲಿ ಗಂಡು - 573, ಹೆಣ್ಣು - 611, ಒಟ್ಟು - 1184, ಮತದಾರರು ಹೆಸರು ನೊಂದಾಯಿಸಿಕೊಂಡಿದ್ದಾರೆ. ಮಂಡ್ಯ ತಾಲ್ಲೂಕು ಪಂಚಾಯತ್ ಸಾಮರ್ಥ್ಯ ಸೌಧ ಮತ ಕೇಂದ್ರದಲ್ಲಿ ಗಂಡು - 458, ಹೆಣ್ಣು -343, ಒಟ್ಟು -801, ಮತದಾರರು ಹೆಸರು ನೊಂದಾಯಿಸಿಕೊಂಡಿದ್ದಾರೆ. ಮದ್ದೂರು ಮಿನಿ ವಿಧಾನಸೌಧ ಮತ ಕೇಂದ್ರದಲ್ಲಿ ಗಂಡು - 554, ಹೆಣ್ಣು - 413, ಒಟ್ಟು - 967 ಮತದಾರರು ಹೆಸರು ನೊಂದಾಯಿಸಿಕೊಂಡಿದ್ದಾರೆ. ಶ್ರೀರಂಗಪಟ್ಟಣ ಮಿನಿವಿಧಾನಸೌಧ ಮತ ಕೇಂದ್ರದಲ್ಲಿ ಗಂಡು - 207, ಹೆಣ್ಣು - 224, ಒಟ್ಟು - 431 ಮತದಾರರು ಹೆಸರು ನೊಂದಾಯಿಸಿಕೊಂಡಿದ್ದಾರೆ. ಮಳವಳ್ಳಿ ಮಿನಿವಿಧಾನಸೌಧ ಮತ ಕೇಂದ್ರದಲ್ಲಿ ಗಂಡು - 452, ಹೆಣ್ಣು - 215, ಒಟ್ಟು - 667 ಮತದಾರರು ಹೆಸರು ನೊಂದಾಯಿಸಿಕೊಂಡಿದ್ದಾರೆ. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶೇಖ್ ತನ್ವೀರ್ ಆಸೀಫ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್ ಯತೀಶ್, ರಾಜಕೀಯ ಪಕ್ಷಗಳ ಮುಖಂಡರುಗಳಾದ ಬೊಮ್ಮಯ್ಯ, ಮಂಜುನಾಥ್, ನವೀನ್, ದಿನೇಶ್, ರಮೇಶ್ ಉಪಸ್ಥಿತರಿದ್ದರು.**



### ಶಂಕರ ಸಪ್ತಾಹ

**ತಿಪಟೂರು ತಾಲ್ಲೂಕಿನ ಹೊನ್ನವಳ್ಳಿ ಗ್ರಾಮದ ಶ್ರೀ ಶಂಕರ ಗುರು ಮಂದಿರದಲ್ಲಿ ಏಳು ದಿನಗಳ ಕಾಲ ಶಂಕರ ಸಪ್ತಾಹ ಆಚರಿಸಲಾಯಿತು. ಕಡೇ ದಿನ ಶ್ರೀ ಶಂಕರ ಜಗದ್ಗುರು ಸೇವಾ ಸಂಘದ ನೂರು ವಸಂತಗಳು ತುಂಬಿದ ಹರ್ಷದಲ್ಲಿ ದೇವರಿಗೆ ಪವಮಾನ ಸೂಕ್ತ ಅಭಿಷೇಕ, ರುದ್ರಾಭಿಷೇಕ , ಮಹಾಮಂಗಳಾರತಿ, ನೆರೆದಿದ್ದ ಭಕ್ತರಿಗೆ ಮಹಾಪ್ರಸಾದವನ್ನು ಏರ್ಪಡಿಸಲಾಗಿತ್ತು. ಈ ಶತಮಾನ ಉತ್ಸವ ಕಾರ್ಯಕ್ರಮಕ್ಕೆ ಬೆಲಗೂರಿನ ಶ್ರೀ ಅವದೂತ ಸದ್ಗುರು ವಿಜಯಮಾರುತಿ ಸ್ವಾಮಿಜಿ ಚಾಲನೆ ನೀಡಿ ಭಕ್ತಾಧಿಗಳಿಗೆ ಆಶೀರ್ವಚನ ನೀಡಿದರು. ವೇದಮೂರ್ತಿ ಬ್ರಹ್ಮಶ್ರೀ ಶ್ರೀನಿವಾಸ ಮೂರ್ತಿಯವರು ಪೂಜಾ ಕೈಕರ್ಯಗಳ ನೇತೃತ್ವ ವಹಿಸಿದ್ದರು. ಸೇವಾಕಾರ್ತರುಗಳಿಗೆ ಗೌರವ ಸರ್ಮಪಿಸಿದರು. ಈ ಸಭೆಯಲ್ಲಿ ಸೇವಾ ಸಂಘ ಅಧ್ಯಕ್ಷ ಹೆಚ್.ಆರ್ ರಾಮಣ್ಣ, ಆರ್ಚಕರಾದ ಹೆಚ್.ಎಸ್.ಮುರಳೀಧರ ಕಾರ್ಯದರ್ಶಿ ಡಾ.ಕೆ.ಎಸ್.ಭಾರ್ಗವ ಉಪಸ್ಥಿತರಿದ್ದರು.**

### ಶ್ರೀರಾಮಕೋಟಿ ತಾರಕ ಮಂತ್ರ

**ಕೋಲಾರ:** ಜಿಲ್ಲೆಯ ಬಂಗಾರಪೇಟೆ ತಾಲ್ಲೂಕಿನ ಮಾಕಾರಹಳ್ಳಿ ಗ್ರಾಮದಲ್ಲಿ ನಾಲ್ಕು ದಿನಗಳ ಕಾಲ 27ನೇ ವರ್ಷದ ಶ್ರೀರಾಮಕೋಟಿ ಮಹೋತ್ಸವ ಅತ್ಯಂತ ಶ್ರದ್ಧಾಭಕ್ತಿಗಳಿಂದ ನಡೆದಿದ್ದು, ಆಗಮಶಾಸ್ತ್ರ ಪ್ರಕಾರ ಶ್ರೀರಾಮನಾಮಕೋಟಿ ತಾರಕ ಮಂತ್ರ, ಭಜನೆ ಸಹಸ್ರಾರು ಮಂದಿ ಪಾಲ್ಗೊಳ್ಳುವ ಮೂಲಕ ಸಂಪನ್ನಗೊಂಡಿತು. ಮೊದಲ ದಿನ ಕಳಶ ಸ್ಥಾಪನೆ, ಅಖಂಡ್ಲ ಪ್ರತಿಷ್ಠಾಪನೆ ಜಪ ಪ್ರಾರಂಭ, ನವಗ್ರಹ ಸ್ಥಾಪನೆ, ಸೂರ್ಯ ನಮಸ್ಕಾರ, ಸನಸ್ರನಾಮ ಅರ್ಚನೆಗಳ ಮೂಲಕ ಪೂಜಾ ಕಾರ್ಯಕ್ರಮಗಳಿಗೆ ಚಾಲನೆ ನೀಡಿದ್ದು, ನಂತರದ ದಿನ ನಿತ್ಯಪೂಜೆ, ನಿತ್ಯಹೋಮ ನವಗ್ರಹ ಆರಾಧನೆ, ದೇವತಾಲಂಕಾರ, ಮಹಾಮಂಗಳಾರತಿ ಯೊಂದಿಗೆ ನಡೆಯಿತು. ನಾಲ್ಕು ದಿನಗಳ ಕಾರ್ಯಕ್ರಮದಲ್ಲಿ ಕೊನೆ ದಿನ ಅಖಂಡ್ಲ ವಿಸರ್ಜನೆ, ರಾಮಕೋಟಿ ತಾರಕಮಂತ್ರ ಸಮಾಪ್ತಿ ನಡೆದಿದ್ದು, ನೂರಾರು ಭಕ್ತರು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಪುನೀತರಾದರು. ಸೀತಾರಾಮ ಕಲ್ಯೋಣೋತ್ಸವ, ವಸಂತೋತ್ಸವ, ಅನ್ನಸಂತರ್ಪಣೆ ನಡೆಯಲಿದ್ದು, ಗ್ರಾಮದವರಾದ ಪ್ರಧಾನ ಅರ್ಚಕ ವೇಣುಗೋಪಾಲ ಕೃಷ್ಣಮಾಚಾರ್ಯಲು, ಬೂದಿಕೋಟೆಯ ವೇಣೂಗೋಪಾಲಾಚಾರ್ಯಲು, ಮಾಕಾರಹಳ್ಳಿಯ ಅರ್ಚಕ ಮೋಹನಾಚಾರ್ಯಲು ಪೂಜಾ ಕೈಂಕರ್ಯಗಳ ನೇತೃತ್ವ ವಹಿಸಿದ್ದು, ಅಲಂಕಾರ,ನಿತ್ಯಪೂಜೆ, ಹೋಮಾದಿಗಳನ್ನು ನಡೆಸಿಕೊಟ್ಟರು. ನಿತ್ಯ ಪೂಜಾ ಮತ್ತು ಹೋಮಗಳನ್ನು ಬಾಲಕೃಷ್ಣಮೂರ್ತಿ ಮತ್ತು ಶ್ರೀಮತಿ ಲೀಲಾವತಿ ಕುಟುಂಬದವರು ಹಾಗೂ ಮಕಾರಹಳ್ಳಿ ಗ್ರಾಮಸ್ಥರು ನಡೆಸಿಕೊಟ್ಟಿದ್ದು, ನಿತ್ಯವೂ ಶ್ರೀರಾಮದೇವರಿಗೆ ಹೂವಿನ ಅಲಂಕಾರ ವಿಶೇಷ ಪೂಜೆ ಗಮನ ಸೆಳೆಯಿತು. ಪುಷ್ಪಾಲಂಕಾರವನ್ನು ಸಂತ ಕೃಷ್ಣದಾಸರು ಮತ್ತು ಮಕ್ಕಳು ವಿಠಲ ಮಂದಿರ ಬೆಂಗಳೂರು ಇವರು, ಅಖಂಡ್ಲಕ್ಕೆ ಎಣ್ಣೆಯನ್ನು ಮಾಕಾರಹಳ್ಳಿಯ ಸೀತಮ್ಮ ಬಂಗಾರಪೇಟೆಯ ಕಮಲಮ್ಮ ಲೇಟ್ ಗೋಪಾಲರೆಡ್ಡಿ, ಶ್ರೀಧರಮೂರ್ತಿ ಸಹೋದರರು ಒದಗಿಸಿಕೊಟ್ಟರು.



# ಎಲ್ಲರೊಂದಿಗೂ ಉತ್ತಮ ಬಾಂಧವ್ಯ ಹೊಂದಿದ್ದ ಶ್ರೀನಿವಾಸ ಪ್ರಸಾದ್

**ಚಾಮರಾಜನಗರ:** ಶ್ರೀನಿವಾಸ ಪ್ರಸಾದ್ ಕೋಮುವಾದಿಯಾಗಿದ್ದು, ಎಲ್ಲ ಜನಾಂಗದವರೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದರು ಎಂದು ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್.ಮಹೇಶ್ ಹೇಳಿದರು. ಚಾಮರಾಜನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಆಯೋಜಿಸಿದ್ದ ವಿ.ಶ್ರೀನಿವಾಸಪ್ರಸಾದ್ ಸಂಸ್ಮರಣಾ ಕಾರ್ಯಕ್ರಮದಲ್ಲಿ ಮಾತನಾಡಿದರು. ಶ್ರೀನಿವಾಸ ಪ್ರಸಾದ್ ಜಾತಿವಾದಿಯಾಗಿರಲಿಲ್ಲ. ನಾವೆಲ್ಲರೂ ಅವರನ್ನು ಜಾತಿವಾದಿಯನ್ನಾಗಿ ಮಾಡಲು ಪ್ರಯತ್ನಿಸಿದೆವು. ಆದರೆ, ಅವರು ತುಂಬಾ ಜಾತ್ಯತೀತ ಮನೋಭಾವವನ್ನು ಹೊಂದಿದ್ದರು. ಯಾವತ್ತೂ ಜಾತಿವಾದಿಯಾಗಿ ನಡೆದುಕೊಂಡಿಲ್ಲ. ತುಳಿತಕ್ಕೊಳಗಾದವರ ಪರ ನಿಂತರು. ಆದರೆ, ಅವರು ಎಲ್ಲ ಜಾತಿಯವರನ್ನು ಪ್ರೀತಿಸುತ್ತಿದ್ದರು ಎಂದರು. ಶ್ರೀನಿವಾಸ ಪ್ರಸಾದ್ ಭ್ರಷ್ಟರಲ್ಲ. 50 ವರ್ಷಗಳ ಕಾಲ ರಾಜಕೀಯದಲ್ಲಿದ್ದರು. ಅವರು 6 ಬಾರಿ ಸಂಸದರಾಗಿ ಕೇಂದ್ರದಲ್ಲಿ ಸಚಿವರಾಗಿದ್ದರು. ಎರಡು ಬಾರಿ ಶಾಸಕರಾಗಿ ರಾಜ್ಯದ ಕಂದಾಯ ಸಚಿವರೂ ಆಗಿದ್ದರು. ಶ್ರೀನಿವಾಸ ಪ್ರಸಾದ್ ಅವರು ಇಂದಿನ ಮಂತ್ರಿಗಳಾಗಿದ್ದರೆ ಅಪಾರ ಪ್ರಮಾಣದ ಆಸ್ತಿ, ಹಣ ಇರಬೇಕಿತ್ತು. ಅವರ ಆಸ್ತಿ ಎಲ್ಲರಿಗೂ ತಿಳಿದಿದೆ. ಏನನ್ನೂ ಮುಚ್ಚಿಟ್ಟಿಲ್ಲ ಎಂದು ಹೇಳಿದರು. ಶ್ರೀನಿವಾಸ ಪ್ರಸಾದ್ ಅವರ ರಾಜಕೀಯ ಮಾದರಿಯಾಗಬೇಕು ಎಂದರು.

# ಸಾಟಿಡುವ ಮೂಲಕ ಗಂಗಾ ತಾಯಿ ಜಾತ್ರೆಗೆ ಚಾಲನೆ

**ವಿಜಯಪುರ:** ಊರಿನ ಗ್ರಾಮದೇವತೆ ಗಂಗಾತಾಯಿಯ 54 ನೇ ವರ್ಷದ ಜಾತ್ರಾ ಮಹೋತ್ಸವಕ್ಕೆ ಗಂಗಾ ಮತಸ್ಥರ ಸಂಘದ ಅಧ್ಯಕ್ಷ ನಾರಾಯಣಸ್ವಾಮಿ ಚಾಲನೆ ನೀಡಿದರು.

ಪಟ್ಟಣದ ಬೆಸ್ತರಪೇಟೆಯಲ್ಲಿ ನೆಲೆಸಿರುವ ಗ್ರಾಮದೇವತೆ ಗಂಗಾತಾಯಿ ದೇವಾಲಯದ ಆವರಣದಲ್ಲಿ ಗಂಗಾ ದೇವಿಯ 54 ನೇ ವರ್ಷದ ಜಾತ್ರಾ ಮಹೋತ್ಸವದ ಮೊದಲ ದಿನ ವಾದ ಮೇ 21 ರಂದು ಜಾತ್ರಾ ಕಮಿಟಿ ವತಿಯಿಂದ ಸಾಟು ಇಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಊರಿನ ಗ್ರಾಮದೇವತೆ ಗಂಗಾ ತಾಯಿಯ 54 ನೇ ವರ್ಷದ ಜಾತ್ರಾ ಮಹೋತ್ಸವಕ್ಕೆ ಸಾಟಿ ಡುವ ಮೂಲಕ ಚಾಲನೆ ದೊರೆತಿದ್ದು, ಮೊದಲಿನಿಂದ ಊರಿನ ಹಿರಿಯರು ಇಂತಹ ಕಾರ್ಯಕ್ರಮಗಳಲ್ಲಿ ಭಾಗಿಯಾಗಿ ಜಾತ್ರಾ ಮಹೋತ್ಸವವನ್ನು ಅಚ್ಚುಕಟ್ಟಾಗಿ ನಡೆಸಿಕೊಂಡು ಬರುವ ಪದ್ಧತಿ ಈಗಲೂ ಮುಂದುವರೆದಿದೆ. ಅದೇ ರೀತಿ ಗಂಗಾತಾಯಿಯು ಊರಿನ ಜನರನ್ನು ಪೋಷಿಸಿ ಎಲ್ಲರಿಗೂ ಒಳಿತನ್ನು ಮಾಡುತ್ತಾ ಬರುತ್ತಿದ್ದು ತಾಯಿಯ ಅನುಗ್ರಹ ನಮ್ಮೆಲ್ಲರ ಮೇಲೆ ಹೀಗೆ ಇರಲಿ ಎಂದು ತಿಳಿಸಿದರು.

ಜಾತ್ರಾ ಕಮಿಟಿಯ ಗೌರವ ಕಾರ್ಯದರ್ಶಿ ರುದ್ರಮೂರ್ತಿ ಮಾತನಾಡಿ, ಪಟ್ಟಣದ ಅನೇಕ ಧಾರ್ಮಿಕ ಕಾರ್ಯಕ್ರಮಗಳಿಗೆ ಸಹಕಾರ ನೀಡಿದ್ದಾರೆ. ಪಟ್ಟಣದ ಅನೇಕ ದೇವಾಲಯಗಳ ಅಭಿವೃದ್ಧಿಗೆ ನೆರವಾಗಿದ್ದಾರೆ. ಅದೇ ರೀತಿ ಈ ವರ್ಷ ಗಂಗಾ ತಾಯಿಯ ಸೇವೆ ಮಾಡುವ ಅವಕಾಶ ಅವರಿಗೆ ದೊರೆತಿದ್ದು, ಅವರ ಮುಂದಾಳತ್ವ ಮತ್ತು ಸಹಕಾರದೊಂದಿಗೆ ಜಾತ್ರಾ ಮಹೋತ್ಸವ ಮತ್ತಷ್ಟು ವಿಜೃಂಭಣೆಯಿಂದ ಯಶಸ್ವಿಯಾಗಿ ನಡೆಯುತ್ತದೆ. ಹಿಂದೂ ಜನಾಂಗದ ಎಲ್ಲಾ ಸಂಘ ಸಂಸ್ಥೆಗಳ ಮುಖ್ಯಸ್ಥರು ಜಾತ್ರೆಯ ಚಾಲನಾ ಮಹೋತ್ಸವದಲ್ಲಿ ಭಾಗವಹಿಸಿ ಸಹಕಾರ ನೀಡಿದ್ದಾರೆ. ಇದು ಒಂಭತ್ತು ದಿನಗಳ ಕಾರ್ಯ ಕ್ರಮವಾಗಿದ್ದು, ಮುಂದಿನ ಮಂಗಳ ವಾರ ಮೇ 28 ರಂದು ಗಂಗಾ ತಾಯಿಯ ಜಾತ್ರೆ ಇದೆ ಎಂದು ತಿಳಿಸಿದರು.



**ಮೇ 21 ರಿಂದ 7 ದಿನಗಳ ಕಾರ್ಯಕ್ರಮ:** ಜಾತ್ರೆಗೆ ಸಾಟು ಇಡುವುದು ಎಂದರೆ ಜಾತ್ರೆಗೆ ಒಂದು ವಾರ ಮೊದಲೇ ಜಾತ್ರಾ ಕಾರ್ಯಕ್ರಮಗಳಿಗೆ ಚಾಲನೆ ನೀಡಲಾಗುತ್ತದೆ. ಇದನ್ನು ಊರಿನ ತುಂಬೆಲ್ಲಾ ಡಂಗೂರ ಹೊಡೆದು ಸಾರುತ್ತಾರೆ ( ಸಾಟಿಡುತ್ತಾರೆ). ಊರಿನ ನಿವಾಸಿಗಳು ಯಾರೂ ಜಾತ್ರೆ ಮುಗಿಯುವ ತನಕ ಊರಿನಿಂದ ಹೋಗಬಾರದು. ಸಾಟು ಇಟ್ಟ ದಿನದಿಂದ ಮುಂದಿನ 7 ದಿನಗಳ ಕಾಲ ಗಂಗಾತಾಯಿಯ ದೇವಾಲಯದಲ್ಲಿ ವಿವಿಧ ಪೂಜಾ ಕಾರ್ಯಕ್ರಮಗಳು, ಸಂಜೆ ಸಾಂಸ್ಕೃತಿಕ ಕಾರ್ಯಕ್ರಮಗಳು ಇದ್ದು ಜಾತ್ರೆಯ ದಿನ ಮೇ 28ರ ಮಂಗಳವಾರದಂದು ಬೆಳಗ್ಗೆ 6 ಗಂಟೆಯಿಂದ ರಾತ್ರಿಯವರೆಗೆ ದೇವರಿಗೆ ಊರಿನ ಪ್ರತಿ ಮನೆಯವರು ತಂಬಿಟ್ಟಿನ ಆರತಿ ಮಾಡಿ ಕೊಂಡು ಬಂದು ಬೆಳಗುವ ಪದ್ಧತಿ ಇದೆ, ಕಳಸ ದೀಪಾರತಿ ಯೊಂದಿಗೆ ಕುಟುಂಬ ಸಮೇತರಾಗಿ ದರ್ಶನ ಪಡೆದು ತಾಯಿಗೆ ಮಡಲಕ್ಕಿ ತುಂಬಿ ಹೋಗುತ್ತಾರೆ. ಮೇ 21 ರಿಂದ 9 ದಿನಗಳ ಕಾಲ ಪ್ರತಿ ದಿನ ರಾತ್ರಿ ಭಕ್ತಾದಿಗಳಿಗೆ ಅನ್ನ ದಾಸೋಹ ಏರ್ಪಡಿಸಲಾಗಿದೆ. ಶ್ರೀ ಗಂಗಾದೇವಿ ರವರಿಗೆ ಪ್ರಥಮ ಪೂಜೆ ಬಳಿಕ ತೋಟಿ ದೊಡ್ಡ ಕೆಂಪಣ್ಣನವರ ಬಿ ಕೆಂಪಯ್ಯನವರ ಮಗ ಕೆ ಮುನಿರಾಜು ಮತ್ತು ದೊಡ್ಡ ಆಂಜಿನಪ್ಪನವರ ಮಗ ಡಿ ರವಿಕುಮಾರ್, ಕೆಂಪರಾಜು, ಹೇಮಂತ್ ಊರಿನ ಪ್ರಮುಖ ಬೀದಿಗಳಲ್ಲಿ ಸಾಟಿಡುವ ಕಾರ್ಯಕ್ರಮವನ್ನು ನಡೆಸಿಕೊಟ್ಟರು. ಗಂಗಾ ಮತಸ್ಥರ ಸಂಘದ ಉಪಾಧ್ಯಕ್ಷ ಶಿವರಾಜ್, ಪುರಸಭಾ ಮಾಜಿ ಉಪಾಧ್ಯಕ್ಷರಾದ ಎಂ ಕೇಶವಪ್ಪ ಪುರಸಭಾ ಸದಸ್ಯರಾದ ಕವಿತಾ ಮುನಿ ಅಂಜಿನಪ್ಪ, ಸಿಎಂ ರಾಮು, ಶ್ರೀಕೃಷ್ಣ ಸೇವಾ ಟ್ರಸ್ಟ್ ಅಧ್ಯಕ್ಷರಾದ ಜೆ. ಎಸ್ ರಾಮಚಂದ್ರಪ್ಪ, ಗಂಗಾಮತಸ್ಥರ ರಾಜ್ಯ ಸಂಘಟನಾ ಕಾರ್ಯದರ್ಶಿಯಾದ ಎನ್ ಮುನಿರಾಜು, ಪುರಸಭಾ ಮಾಜಿ ಅಧ್ಯಕ್ಷರಾದ ಅನ್ನಪೂರ್ಣಮ್ಮ ,ಮುನಿಕೃಷ್ಣ ಮಾಜಿ ಉಪಾಧ್ಯಕ್ಷರಾದ ಎನ್ ನಾರಾಯಣಸ್ವಾಮಿ, ಮಾಜಿ ಪುರಸಭಾ ಸದಸ್ಯರಾದ ಡಿ ನವೀನ್ ಕುಮಾರ್, ಕೆ ಬಿ ಎಸ್ ಭಾಸ್ಕರ್, ಲಕ್ಷ್ಮೀಬಾರ್ ಸಂಪತ್ ಕುಮಾರ್, ಗಂಗಾಮತಸ್ಥರ ಸಂಘದ ಗೌರವಾಧ್ಯಕ್ಷರಾದ ಮೋಹನ್ ಬಾಬು, ವಿ ಎಂ ಪಿ ಸಿ ಎಸ್ ಮಾಜಿ ಉಪಾಧ್ಯಕ್ಷರಾದ ಕೆ ಮುನಿರಾಜು, ದೇವನಹಳ್ಳಿ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿ ಅಧ್ಯಕ್ಷರಾದ 'ಎಂ ನಾರಾಯಣಸ್ವಾಮಿ, ಶ್ರೀ ರೇಣುಕಾ ಎಲ್ಲಮ್ಮ ದೇವಿ ದೇವಾಲಯ ಪ್ರಧಾನ ಕಾರ್ಯದರ್ಶಿ ಡಿ.ಆರ್. ಚನ್ನಕೃಷ್ಣ, ಅಂಜಿನಪ್ಪ ( ಗುಂಡಣ್ಣ) ವಕೀಲರುಗಳಾದ ವೆಂಕಟಗಿರಿಯಪ್ಪ ಇದ್ದರು.

### ಮಾಜಿ ಪ್ರಧಾನಿ ರಾಜೀವ್ ಗಾಂಧಿ ಪುಣ್ಯ ಸ್ಮರಣೆ

**ಮಂಡ್ಯ:** ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಕಾಂಗ್ರೆಸ್ ಮುಖಂಡರುಗಳಿಂದ ಮಾಜಿ ಪ್ರಧಾನಿ ರಾಜೀವ್ ಗಾಂಧಿ ಪುಣ್ಯ ಸ್ಮರಣೆ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು, ನಂತರ ಮಾತನಾಡಿದ ಕಾಂಗ್ರೆಸ್ ಜಿಲ್ಲಾ ಕಾರ್ಯಧ್ಯಕ್ಷ ಎಂ ಎಸ್ ಚಿದಂಬರ್ ಮಾತನಾಡಿ ರಾಜೀವ್ ಗಾಂಧಿ ಅವರು ತಂತ್ರಜ್ಞಾನ ಅಭಿವೃದ್ಧಿಯಲ್ಲಿ ಮುಂಚೂಣಿಯಲ್ಲಿದ್ದ ನಾಯಕರಾಗಿದ್ದರು ಈ ದೇಶದ ಅಭಿವೃದ್ಧಿಗೆ ಕೊಡುಗೆ ಕೊಟ್ಟಿರುವುದನ್ನು ನಾವು ನೆನಪಿಸಿಕೊಳ್ಳಬೇಕಾಗಿದೆ ಎಂದು ಶ್ಲಾಘಿಸಿದರು, ರಾಜೀವ್ ಗಾಂಧಿ ಅವರು ಕೃತ್ಯಕ್ಕೆ ಬಲಿಯಾಗಿ ಹೊದರು ಇದು ನಮ್ಮ ದೇಶಕ್ಕೆ ಅಪಾರ ನಷ್ಟ ಉಂಟು ಮಾಡಿದೆ ರಾಜೀವ್ ಗಾಂಧಿ ಅವರು ಕಿರಿಯ ವಯಸ್ಸಿನಲ್ಲೇ ಪ್ರಧಾನಿಯಾಗಿದ್ದವರು ಈ ದೇಶದ ಅಭಿವೃದ್ಧಿಗೆ ಶ್ರಮಿಸಿದ ಮಹಾನ್ ನಾಯಕರಾಗಿದ್ದರು ಎಂದು ಬಣ್ಣಿಸಿದರು, ಈ ಸಂದರ್ಭದಲ್ಲಿ ಕಾಂಗ್ರೆಸ್ ಮಹಿಳಾ ಜಿಲ್ಲಾಧ್ಯಕ್ಷ ಅಂಜನಾ ಶ್ರೀಕಾಂತ್, ನಗರಸಭಾ ಸದಸ್ಯ ಶ್ರೀಧರ್ ,ಸುಂಡಳ್ಳಿ ಮಂಜುನಾಥ, ಕಾಗೆಹಳ್ಳದ ದೊಡ್ಡಿ ರಾಮಕೃಷ್ಣ ,ಜಯರಾಮ್, ವಿಜಯಕುಮಾರ್, ಚನ್ನಪ್ಪ, ಭಾಗವಹಿಸಿದ್ದರು.



**ಭರತನಾಟ್ಯ ಪ್ರದರ್ಶನ**

**ಹುಳಿಯಾರು ಸಮೀಪದ ಕೋಡಿಪಾಳ್ಯದ ಶ್ರೀ ಕಂಕಾಳೇಶ್ವರಿ, ಶ್ರೀ ತುಳಜಾಭವಾನಿ, ಶ್ರೀ ಮಾರಿಕಾಂಬ ದೇವರುಗಳ 7 ನೇ ವರ್ಷದ ವಾರ್ಷಿಕೋತ್ಸವದ ಅಂಗವಾಗಿ ಬೆಂಗಳೂರಿನ ಭ್ರಮರಿ ಡ್ಯಾನ್ಸ್ ರೆಪರ್ಟರಿಯಿಂದ ಸ್ನೇಹ ಕಪ್ಪಣ್ಣ ಅವರ ನಿರ್ದೇಶನದಲ್ಲಿ ಏರ್ಪಡಿಸಿದ್ದ ಭರತನಾಟ್ಯ ಪ್ರದರ್ಶನ ಪ್ರೇಕ್ಷಕರ ಮನಗೆದ್ದಿತು.**

# ಸ್ಪರ್ಧೆ ಮನೋಭಾವನೆ ಬೆಳೆಸಿಕೊಳ್ಳಿ

**ಚಾಮರಾಜನಗರ:** ವಿದ್ಯಾರ್ಥಿಗಳು ಆತ್ಮವಿಶ್ವಾಸದಿಂದ ಸ್ಪರ್ಧೆಗಳಿಗೆ ಭಾಗವಹಿಸಿದರೆ ಗೆಲುವು ಖಚಿತ ಎಂದು ಅಂತರಾಷ್ಟ್ರೀಯ ಯೋಗ ಪಟ್ಟು ಮತ್ತು ತರಬೇತುದಾರ ನಂಜನಗೂಡು ಬಿ ಎಂ ರಮೇಶ್ ತಿಳಿಸಿದರು.

ಜೆಎಸ್ಎಸ್ ಮಹಿಳಾ ಕಾಲೇಜು ವತಿಯಿಂದ ಸಾಂಸ್ಕೃತಿಕ ಮತ್ತು ಕ್ರೀಡಾ ವೇದಿಕೆಗಳ ಸಮಾರೋಪ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳ ಭಾಷಣ ಹಾಗೂ ವಿಧಿಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಿ ಮಾತನಾಡಿದವರು. ವಿದ್ಯಾಭ್ಯಾಸ ಇಷ್ಟು ಮುಖ್ಯವೋ ಅಷ್ಟೇ ಕ್ರೀಡೆ ಸಾಂಸ್ಕೃತಿಕ. ಹಾಗೂ ಯೋಗ ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಕಠಿಣ ಪರಿಶ್ರಮ ಯಾವುದೇ ಕೆಲಸಗಳನ್ನು ಭಯ ಭಕ್ತಿಯಿಂದ ಮಾಡಿದರೆ. ಯಶಸ್ಸು ಖಚಿತ ಎಂದು ತಿಳಿಸಿದೆ ಅವರು ನಂಜನಗೂಡು ಜೆಎಸ್ಎಸ್ ಶಿಕ್ಷಣ ಸಂಸ್ಥೆ ಯೋಗ ಕಾರ್ಯಕ್ರಮದಲ್ಲಿ ರಾಷ್ಟ್ರಮಟ್ಟದ ಕಾರ್ಯಕ್ರಮದಲ್ಲಿ ಭಾಗವಹಿಸಿ ಹಲವಾರು ಪ್ರಶಸ್ತಿಗಳನ್ನು ಗಳಿಸಿಕೊಂಡಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಜೆಎಸ್ಎಸ್ ಶಿಕ್ಷಣ ವಿದ್ಯಾಭ್ಯಾಸದ ಕಲಿತ ಸಾವಿರಾರು ವಿದ್ಯಾರ್ಥಿಗಳು. ರಾಜ್ಯ ಹಾಗೆ ವರ ರಾಜ್ಯ ದೇಶಗಳಲ್ಲಿ ಉನ್ನತ ಮಟ್ಟದ ಅಧಿಕಾರಿಗಳಾಗಿ ಸೇವೆ ಮಾಡುತ್ತಿದ್ದಾರೆ ಎಂದು ಅಭಿಪ್ರಾಯಪಟ್ಟರು.

ಚಾಮರಾಜನಗರ ದೀನ ಬಂದು ಸಂಸ್ಥೆ ಗೌರವ ಕಾರ್ಯದರ್ಶಿ ಪ್ರೊಫೆಸರ್ ಜಿಎಸ್ ಜಯದೇವ್ ಮಾತನಾಡಿ. ಭಾರತದ ಸಂಸ್ಕೃತಿ ಅಭಿವೃದ್ಧಿಪಡಿಸಬೇಕಾದರೆ ಹೆಣ್ಣು ಮಕ್ಕಳಿಂದ ಮಾತ್ರ ಸಾಧ್ಯ. ಈ ನಿಟ್ಟಿನಲ್ಲಿ ಕೆಲಸ ಮಾಡುತ್ತಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಒಂದು ವೇಳೆ ವಿದೇಶಿ ಸಂಸ್ಕೃತಿಗೆ ಮಾರುವುದೇ. ಸಂಸ್ಕೃತಿ ಅಪಾಯ ಹಂಚಿನಲ್ಲಿ ಇರುತ್ತದೆ. ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಚಾಮರಾಜನಗರಜೆಎಸ್ಎಸ್ ಶಿಕ್ಷಣ ಸಂಸ್ಥೆಗಳ ಸಾರ್ವಜನಿಕ ಸಂಪರ್ಕ ಅಧಿಕಾರಿ ಆರ್ ಎಂ ಸ್ವಾಮಿ . ಕಾಲೇಜಿನ ಪ್ರಾಂಶುಪಾಲ ಡಾ, ಎನ್ ಮಹದೇವಸ್ವಾಮಿ, ಸಾಂಸ್ಕೃತಿಕ ವೇದಿಕೆ ಸಂಚಾಲಕಿ ಹಾಗೂ ಉಪನ್ಯಾಸಕಿ ಡಾ, ಸುಷ್ಮಾ, ಎ ಆರ್, ಕ್ರೀಡೆ ಸಾಂಸ್ಕೃತಿಕ ವೇದಿಕೆ ಸಂಚಾಲಕ, ಉಮೇಶ್. ವಿದ್ಯಾರ್ಥಿ ಸಂಘದ ಅಧ್ಯಕ್ಷ ಸುಸ್ಮಿತಾ, ಉಪನ್ಯಾಸಕಿ ಕೆ ಎಸ್ ಅರುಣಾ ಶ್ರೀ. ರೂಪಶ್ರೀ. ಶುಭ ಏನ್. ಶ್ವೇತ ನಂದಿನಿ. ಪೂಜಾ ಹೆಚ್ ವಿ. ಹಾಗೂ ಕಾಲೇಜಿನ ಉಪನ್ಯಾಸಕರು. ವಿದ್ಯಾರ್ಥಿಗಳು. ಹಾಜರಿದ್ದರು.

# ವೈ.ಎಸ್.ಪಾಳ್ಯ ರಸ್ತೆ ದುರಸ್ತಿ ಯಾವಾಗ?

**ಎಚ್.ಬಿ.ಕಿರಣ್ ಕುಮಾರ್ ಹುಳಿಯಾರು**

ರಾಷ್ಟ್ರೀಯ ಹೆದ್ದಾರಿ 150 ಎ ಯಿಂದ ತಮ್ಮಡಿಹಳ್ಳಿ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ವೈ.ಎಸ್.ಪಾಳ್ಯದ ರಸ್ತೆಯೆಂದೇ ಹೆಸರಾಗಿರುವ ಈ ರಸ್ತೆ ಸಂಪೂರ್ಣ ಹಾಳಾಗಿದೆ. ಕಿತ್ತೋದ ಈ ರಸ್ತೆಯಲ್ಲಿ ನಿತ್ಯ ಜನಪ್ರತಿನಿಧಿಗಳಿಗೆ, ಅಧಿಕಾರಿಗಳಿಗೆ ಹಿಡಿಶಾಪ ಹಾಕಿ ಜನರು ಸಂಚರಿಸುತ್ತಿದ್ದಾರೆ.

ಹುಳಿಯಾರು ಸಮೀಪದಲ್ಲಿರುವ ಈ ರಸ್ತೆ ವೈ.ಎಸ್.ಪಾಳ್ಯ, ವಳಗೆರೆಹಳ್ಳಿ ಹಾಗೂ ತಮ್ಮಡಿಹಳ್ಳಿ ಗ್ರಾಮಗಳು ಸೇರಿದಂತೆ ಅನೇಕ ತೋಟದಮನೆಗಳಿಗೆ ಸಂಪರ್ಕ ಕಲ್ಪಿಸುತ್ತದೆ. ಈ ರಸ್ತೆಗೆ ದಶಕಗಳ ಹಿಂದೆ 150 ಎ ರಾಷ್ಟ್ರೀಯ ಹೆದ್ದಾರಿಯಿಂದ ವಳಗೆರೆಹಳ್ಳಿಗೆ ಡಾಂಬರೀಕರಣ ಮಾಡಿ ಬಿಟ್ಟರೆ ತಮ್ಮಡಿಹಳ್ಳಿ ಗ್ರಾಮಕ್ಕೆ ಈಗಲೂ ಮಣ್ಣಿನ ರಸ್ತೆಯಾಗೇ ಉಳಿದಿದೆ. ಹಾಗಾಗಿಯೇ ಕೆಂಕೆರೆ, ಹೊಯ್ಸಲಕಟ್ಟೆ, ಗಾಣಧಾಳು, ದಸೂಡಿ ಗ್ರಾಪಂ ಜನರಿಗೆ ತಮ್ಮಡಿಹಳ್ಳಿಗೆ ಹೋಗಲು ಈ ರಸ್ತೆ ಮಾರ್ಗ ಸಮೀಪವಿದ್ದರೂ ರಸ್ತೆ ಸರಿಯಿಲ್ಲದ ಕಾರಣ ಹುಳಿಯಾರು, ಕೆ.ಎಸ್.ಹಳ್ಳಿ ಮಾರ್ಗವಾಗಿ ಸುತ್ತಿಬಳಸಿ ಓಡಾಡುತ್ತಿದ್ದಾರೆ. ಪರಿಣಾಮ ವೈ.ಎಸ್.ಪಾಳ್ಯ, ವಳಗೆರೆಹಳ್ಳಿ ಜನರು ಮಾತ್ರ ಈ ರಸ್ತೆ ಬಳಸುತ್ತಿದ್ದಾರೆ.

ಇನ್ನು ಡಾಬಂರೀಕರಣವಾದ ಈ ರಸ್ತೆ ಈಗಾಗಲೇ ಅಲ್ಲಲ್ಲಿ ಕಿತ್ತು ಹೋಗಿ ಸುಗಮ ಸಂಚಾರಕ್ಕೆ ಜನತೆ ಪರಿತಪ್ಪಿಸುವಂತಾಗಿದೆ. ಅಲ್ಲಲ್ಲಿ ಜಲ್ಲಿಕಲ್ಲುಗಳು ಮೇಲೆದ್ದು ಕೆಲವು ಕಡೆ ಗುಂಡಿಗಳು ನಿರ್ಮಾಣವಾಗಿವೆ. ರಸ್ತೆ ಬದಿಯ ಮಣ್ಣು ಕೊಚ್ಚಿ ರಸ್ತೆಗೆ ಬಿದ್ದಿರುವುದರಿಂದ ಮಳೆ ಬಂದರಂತೂ ಕೆಸರುಗದ್ದೆಯಾಗಿ ಪಾದಚಾರಿಗಳು ಸಹ ಓಡಾಡಲು ಭಯ ಬೀಳುತ್ತಿದ್ದಾರೆ. ಬೈಕ್ ಸವಾರರ ಪಾಡು ಹೇಳತೀರದಾಗಿದೆ. ಬಿದ್ದು ಎದ್ದು ಓಡಾಡುತ್ತಿದ್ದು ಇದರಿಂದ ಜನ ನಿತ್ಯ ನರಕಯಾತನೆ ಅನುಭವಿಸುವಂತಾಗಿದೆ.

ವೈ.ಎಸ್.ಪಾಳ್ಯದ ಜನರು ಕಡ್ಡಿ ವ್ಯಾಪಾರ ಮಾಡುವುದರಿಂದ ನಿತ್ಯ ನೂರಾರು ಮಂದಿ ಹಳ್ಳಿಗಳಿಂದ ಕಡ್ಡಿ ಖರೀದಿಸಿ ಇದೇ ರಸ್ತೆಯಲ್ಲಿ ಊರಿಗೆ ಬರುತ್ತಾರೆ. ಟಿವಿಎಸ್, ಸೈಕಲ್ ಮೇಲೆ ಭಾರಿ ಭಾರದ ಕಡ್ಡಿ ಹೊರೆ ಕಟ್ಟಿಕೊಂಡು ಕೆಸರಾಗಿರುವ ಈ ರಸ್ತೆಯಲ್ಲಿ ಅಕ್ಷರಶಃ ಸರ್ಕಸ್ ಮಾಡಿಕೊಂಡು ಓಡಾಡುತ್ತಿದ್ದಾರೆ. ಈ ಸಂದರ್ಭದಲ್ಲಿ ಬಿದ್ದು ಕೈಕಾಲಿಗೆ ಪೆಟ್ಟು ಮಾಡಿಕೊಂಡವರು ಅನೇಕರಿದ್ದಾರೆ. ಇದೇ ರಸ್ತೆಯ ಮೂಲಕ ನೂರಾರು ವಿದ್ಯಾರ್ಥಿಗಳು ಶಾಲಾಕಾಲೇಜಿಗೆ ಓಡಾಡುತ್ತಿದ್ದು ಮಳೆಬಂದರಂತೂ ಕೆಸರು ಸಿಡಿಸಿಕೊಳ್ಳದೆ ಓಡಾಡಲು ಅಸಾಧ್ಯ ಎನ್ನುವಂತಾಗಿದೆ.



ಒಟ್ಟಾರೆ ಈ ಹದಗೆಟ್ಟ ರಸ್ತೆಯಿಂದ ಜನರು ರೋಸಿ ಹೋಗಿದ್ದಾರೆ. ರಸ್ತೆ ದುರಸ್ತಿ ಮಾಡಿ ಎಂದರೆ ಅಧಿಕಾರಿಗಳು ಕ್ಯಾರೆ ಎನ್ನುತ್ತಿಲ್ಲ. ಪ್ರತಿ ವರ್ಷ ರಸ್ತೆ ಅಭಿವದ್ಧಿ ನೆಪದಲ್ಲಿ ಕೋಟಿ-ಕೋಟಿ ಹಣ ಬಿಡುಗಡೆಯಾಗಿ ರಸ್ತೆಗಳು ಸಿಸಿ ಮತ್ತು ಡಾಂಬರ್ ಕಂಡರೂ, ಈ ರಸ್ತೆ ದುರಸ್ತಿ ಮಾಡಲು ಯಾರೊಬ್ಬರೂ ಮುಂದಾಗುತ್ತಿಲ್ಲ. ಇದರಿಂದ ದಿನಂಪ್ರತಿ ರಸ್ತೆಯಲ್ಲಿ ಸಂಚಾರ ಮಾಡುವ ಸಾವಿರಾರು ಜನರು ಪಡುವ ಪಾಡಿಗೆ ಪರಿಹಾರ ಇಲ್ಲವೇ ಎನ್ನುವ ಪ್ರಶ್ನೆಗೆ ಉತ್ತರ ದೊರಕುತ್ತಿಲ್ಲ.



**ಪ್ರತಿ ಚುನಾವಣೆಯಲ್ಲಿ ಓಟ್ ಕೇಳೋಕೆ ನಮ್ಮೂರಿಗೆ ರಾಜಕಾರಣಿಗಳು ಬರುತ್ತಾರೆ. ಬಂದ ರಾಜಕಾರಣಿಗಳಿಗೆಲ್ಲಾ ನಮ್ಮೂರ ಜನರ ಮುಖ್ಯ ಬೇಡಿಕೆ ಈ ರಸ್ತೆ ದುರಸ್ತಿ ಮಾಡಿಸಿ ಎನ್ನುವುದು. ಈ ಹಿಂದೆ ಮಾಧುಸ್ವಾಮಿ ಓಟಿಗಾಗಿ ಬಂದಾಗಲೂ ಕೇಳಿದಾಗ ಗೆದ್ದಮೇಲೆ ಮಾಡಿಸ್ತಿನಿ ಅಂದ್ರು. ಆದರೆ ಸುತ್ತಮುತ್ತಲಿನ ರಸ್ತೆಗಳು ಡಾಂಬರ್ ಕಂಡವಾದರೂ ನಮ್ಮೂರ ರಸ್ತೆಗೆ ಡಾಂಬರ್ ಬೀಳಲಿಲ್ಲ. ಈ ಚುನಾವಣೆಯಲ್ಲೂ ಸುರೇಶ್‌ಬಾಬು ಅವರನ್ನು ಕೇಳಿದಾಗ ಮಾಡಿಕೊಡುವ ಭರಸವೆ ನೀಡಿದರಾದರೂ ಗೆದ್ದು ವರ್ಷವಾದರೂ ಇತ್ತ ತಿರುಗಿಯೂ ನೋಡಿಲ್ಲ. ಕಿತ್ತೋಗಿರುವ ಈ ರಸ್ತೆಯಲ್ಲಿ ಕಡ್ಡಿ ವ್ಯಾಪಾರ ಮಾಡುವ ಅನೇಕರು ಬಿದ್ದು ಕೈಕಾಲು ಮುರ್ಕೊಂಡು ಆಯ್ಕೊಂಡು ತಿನ್ನೋ ಕೋಳಿ ಕಾಲು ಮುರಿದ ಪರಿಸ್ಥಿತಿಯಲ್ಲಿ ಅವರ ಸಂಸಾರಗಳಿವೆ. ಈಗಲಾದರೂ ರಾಜಕಾರಣಿಗಳು ನಮ್ಮೂರ ರಸ್ತೆಗೆ ಡಾಂಬರೀಕರಣ ಮಾಡಲಿ.**

**ಮಹಬೂಬ್ ಕಡ್ಡಿ ವ್ಯಾಪಾರಿ, ವೈ.ಎಸ್.ಪಾಳ್ಯ.**

### ಬರದಲೇಪಾಳ್ಯದವರು ಜಾಗ ಬಿಡಲಿಲ್ಲ



**ವೈ.ಎಸ್.ಪಾಳ್ಯ, ಬರದಲೇಪಾಳ್ಯ ಮೂಲಕ ತಮ್ಮಡಿಹಳ್ಳಿಗೆ ರಸ್ತೆ ನಿರ್ಮಾಣಕ್ಕೆ ಪ್ರಧಾನಮಂತ್ರಿ ಗ್ರಾಮಸಡಕ್ ಯೋಜನೆಯಿಂದ ಈ ಹಿಂದೆ ಪ್ರಪೋಜಲ್ ಕಳುಹಿಸಲಾಗಿತ್ತು. ಸರ್ವೆಗೆ ಬಂದಿದ್ದಾಗ ಬರದಲೇ ಪಾಳ್ಯದ ಜನರು ಜಾಗ ಬಿಟ್ಟುಕೊಡದ ಕಾರಣ ಯೋಜನೆ ನೆನಗುದಿಗೆ ಬಿತ್ತು. ಈಗಲೂ ಬರದಲೇ ಪಾಳ್ಯದ ಜನರು ಅವಕಾಶ ಮಾಡಿಕೊಟ್ಟರೆ ಡಾಂಬರೀಕರಣ ಮಾಡುತ್ತೇವೆ ಎನ್ನುತ್ತಾರೆ ಪಿಎಂಜಿಎಸ್‌ವೈ ಎಂಜಿನಿಯರ್ ತೇಜಮೂರ್ತಿ. ಇನ್ನು ಪಿಆರ್‌ಇಡಿ ಎಂಜಿನಿಯರ್ ಮೋಹನ್ ಕುಮಾರ್ ಅವರನ್ನು ಪತ್ರಿಕೆ ದೂರವಾಣಿ ಮೂಲಕ ಸಂಪರ್ಕಿಸಿದರೆ ನಮಗೆ ಹೊಸ ರಸ್ತೆಗೆ ಗ್ರ್ಯಾಂಟ್ ಬರೋದಿಲ್ಲ. ದುರಸ್ತಿಗೆ 1 ಲಕ್ಷ ಬರುತ್ತದಷ್ಟೆ ಅನ್ನುತ್ತಾರೆ. ಆಗಲಿ ಸಾರ್ ದುರಸ್ತಿ ಸಹ ಮಾಡಿಲ್ವಲ್ಲ ಎಂದರೆ ಆಯ್ತು ಈ ಬಾರಿ ಈ ಭಾಗಕ್ಕೆ ಬಂದಾಗ ನೋಡ್ತಿನಿ ಎಂದಷ್ಟೆ ಹೇಳಿದರು. ಹಾಗಾಗಿ ಬರದಲೇಪಾಳ್ಯ ಜನರ ಮನವೊಲಿಸಿ ರಸ್ತೆಗೆ ಜಾಗ ಕೊಡಿಸಬೇಕು ಅಥವಾ ಕಿತ್ತೋಗಿರೋ ಗುಂಡಿಗಳನ್ನಾದರೂ ಮುಚ್ಚಿಸಬೇಕಿದೆ.**

### ಕಾಂಗ್ರೆಸ್ ಕಚೇರಿಯಲ್ಲಿ ರಾಜೀವ್ ಗಾಂಧಿ ಸ್ಮರಣೆ

**ಮಂಡ್ಯ:** ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಮಾಜಿ ಪ್ರಧಾನ ಮಂತ್ರಿ ರಾಜೀವ್ ಗಾಂಧಿ ಅವರ ಪುಣ್ಯ ಸ್ಮರಣೆಯಲ್ಲಿ ಅವರ ಭಾವಚತ್ರಕ್ಕೆ ಮುಖಂಡರು ಪುಷ್ಪಾರ್ಚನೆ ಮಾಡಿ ಗೌರವ ಸಲ್ಲಿಸಿದರು. ಇದೇ ಸಂದರ್ಭದಲ್ಲಿ ಮಾತನಾಡಿದ ಕಾಂಗ್ರೆಸ್ ಜಿಲ್ಲಾ ಕಾರ್ಯಧ್ಯಕ್ಷ ಎಂ.ಎಸ್.ಚಿದಂಬರ್, ರಾಜೀವ್ ಗಾಂಧಿ ಅವರು ತಂತ್ರಜ್ಞಾನ ಅಭಿವೃದ್ಧಿಯಲ್ಲಿ ಮುಂಚೂಣಿಯಲ್ಲಿದ್ದ ನಾಯಕರಾಗಿದ್ದರು, ಭಾರತ ದೇಶದ ಅಭಿವೃದ್ಧಿಗೆ ಕೊಡುಗೆ ಕೊಟ್ಟಿರುವುದನ್ನು ನಾವು ನೆನಪಿಸಿಕೊಳ್ಳಬೇಕಾಗಿದೆ, ಇದು ಇತರೆ ದೇಶಗಳಿಗೂ ಮಾದರಿ ಎಂಬುದನ್ನು ಮರೆಯುವಂತಿಲ್ಲ ಎಂದು ಸ್ಮರಿಸಿದರು.

ರಾಜೀವ್ ಗಾಂಧಿ ಅವರು ಕಾಣದ ಶಕ್ತಿಯ ಕೃತ್ಯಕ್ಕೆ ಬಲಿಯಾಗಿ ಹೊದರು? ಇದು ನಮ್ಮ ದೇಶಕ್ಕೆ ಅಪಾರ ನಷ್ಟ ಉಂಟು ಮಾಡಿದೆ, ರಾಜೀವ್ ಗಾಂಧಿ ಅವರು ಕಿರಿಯ ವಯಸ್ಸಿನಲ್ಲೇ ಪ್ರಧಾನಿಯಾಗಿದ್ದರು, ಈ ದೇಶದ ಅಭಿವೃದ್ಧಿಗೆ ಶ್ರಮಿಸಿದ ಮಹಾನ್ ನಾಯಕರು ಹೌದು ಎಂದು ಬಣ್ಣಿಸಿದರು. ನಗರಸಭಾ ಸದಸ್ಯ ಶ್ರೀಧರ್, ಕಾಂಗ್ರೆಸ್ ಮಹಿಳಾ ಜಿಲ್ಲಾಧ್ಯಕ್ಷ ಅಂಜನಾ ಶ್ರೀಕಾಂತ್, ಭಾಗವಹಿಸಿದ್ದರು.

# ಸಂಜೆ ಟಿಪ್ಸ್

## ಭಾರತದಲ್ಲಿ ಪ್ರತಿ ವರ್ಷ 7 ಲಕ್ಷ ಮಹಿಳೆಯರಲ್ಲಿ ಕ್ಯಾನ್ಸರ್ ಪತ್ತೆ

ಭಾರತದಲ್ಲಿ ಪ್ರತಿ ವರ್ಷ 7 ಲಕ್ಷ ಮಹಿಳೆಯರಲ್ಲಿ ಕ್ಯಾನ್ಸರ್ ರೋಗ ಪತ್ತೆಯಾಗುತ್ತಿದೆ. ಈ ಪೈಕಿ ಶೇ.28.8 ರಷ್ಟು ಸ್ತನ ಕ್ಯಾನ್ಸರ್, ಶೇ.10.6 ರಷ್ಟು ಗರ್ಭಕಂಠ, ಶೇ.6.2 ರಷ್ಟು ಅಂಡಾಶಯ, ಶೇ.3.7 ರಷ್ಟು ಗರ್ಭಾಶಯ ಮತ್ತು ಶೇ.3.7 ರಷ್ಟು ಶ್ವಾಸಕೋಶ ಕ್ಯಾನ್ಸರ್ ರೋಗಗಳು ಸೇರಿವೆ. ವಿಶ್ವದಾದ್ಯಂತ ಮಹಿಳೆಯರು ಅಕಾಲಿಕವಾಗಿ ಮರಣ ಹೊಂದಲು ಇರುವ ಪ್ರಮುಖ ಮೂರು ಕಾರಣಗಳಲ್ಲಿ ಕ್ಯಾನ್ಸರ್ ಮೊದಲ ಸ್ಥಾನದಲ್ಲಿದೆ. ಆದಾಗ್ಯೂ, ಪುರುಷರಿಗೆ ಹೋಲಿಸಿದರೆ ಈ ಮಾರಕ ರೋಗವನ್ನು ತಡೆಗಟ್ಟುವ ಕ್ರಮಗಳನ್ನು ಕೈಗೊಳ್ಳುವುದು ಮಹಿಳೆಯರಲ್ಲಿ ಕಡಿಮೆ ಇದೆ. ಮಹಿಳಾ ಆರೋಗ್ಯಕ್ಕಾಗಿ ಕ್ರಮದ ಅಂತಾರಾಷ್ಟ್ರೀಯ ದಿನದ ಹಿನ್ನೆಲೆಯಲ್ಲಿ ಬೆಂಗಳೂರಿನ ಸಂಪ್ರದ ಆಸ್ಪತ್ರೆಯ ತಜ್ಞ ವೈದ್ಯರು ಈ ಕಳವಳಕಾರಿ ಮಾಹಿತಿಯನ್ನು ನೀಡಿದ್ದಾರೆ. ಬೆಂಗಳೂರಿನ ಸಂಪ್ರದ ಆಸ್ಪತ್ರೆಯ ಕನ್ಸಲ್ಟೆಂಟ್ ಮೆಡಿಕಲ್ ಆಂಕಾಲಾಜಿಸ್ಟ್ ಮತ್ತು ಹೆಮಟೋಲಾಜಿಸ್ಟ್ ಬೋನ್ ಮ್ಯಾರೋ ಟ್ರಾನ್ಸ್ ಪ್ಲಾಂಟ್ ಫಿಸಿಶಿಯನ್ ಡಾ.ರಾಧೇಶ್ಯಾಮ್ ನಾಯಕ್ ಅವರು ಮಾತನಾಡಿ, ''ಪ್ರತಿವರ್ಷ ಭಾರತದಲ್ಲಿ 1.23 ಲಕ್ಷ ಮಹಿಳೆಯರಲ್ಲಿ ಗರ್ಭಕಂಠ ಕ್ಯಾನ್ಸರ್ ಮತ್ತು 1.44 ಲಕ್ಷ ಜನರಲ್ಲಿ ಸ್ತನ ಕ್ಯಾನ್ಸರ್ ಪ್ರಕರಣಗಳು ಪತ್ತೆಯಾಗುತ್ತಿವೆ. ಇದು ಜಾಗತಿಕವಾಗಿ ಗರ್ಭಕಂಠ ಕ್ಯಾನ್ಸರ್ ಮರಣದ ಶೇ.ಮೂರನೇ ಒಂದರಷ್ಟಾಗಲಿದೆ. ಇತ್ತೀಚಿನ ವರ್ಷಗಳಲ್ಲಿ ದೇಶದಲ್ಲಿ ಪ್ರಕರಣಗಳು ಮತ್ತು ಮರಣಕ್ಕೆ ಕಾರಣಗಳ ವಿಚಾರದಲ್ಲಿ ಸ್ತನ ಕ್ಯಾನ್ಸರ್ ಗರ್ಭಕಂಠ ಕ್ಯಾನ್ಸರ್ ಅನ್ನು ಹಿಂದಿಕ್ಕಿದೆ'' ಎಂದರು. ''ಕ್ಯಾನ್ಸರ್ ರೋಗ ನಿರ್ಣಯ ಮಾಡುವ ಸ್ಥಿತಿಯು ಆರಂಭಿಕ ರೋಗನಿರ್ಣಯ ಹಾಗೂ ಸ್ಕ್ರೀನಿಂಗ್ ಮಾಡಿಸುವುದು ಎಷ್ಟು ಪರಿಣಾಮಕಾರಿಯಾಗಿದೆ ಎಂಬುದನ್ನು ನಿರ್ಧರಿಸುತ್ತದೆ. ದುರದೃಷ್ಟವಶಾತ್, ಶೇ.57 ರಷ್ಟು ಸ್ತನ ಕ್ಯಾನ್ಸರ್, ಶೇ.40.6 ರಷ್ಟು ಅಂಡಾಶಯ ಕ್ಯಾನ್ಸರ್ ಮತ್ತು ಶೇ.60 ರಷ್ಟು ಗರ್ಭಕಂಠ ಕ್ಯಾನ್ಸರ್ ಪ್ರಕರಣಗಳನ್ನು ದುಗ್ಧರಸ ಗ್ರಂಥಿಗಳು, ಅಂಗಾಂಶಗಳು ಅಥವಾ ಇತರ ಅಂಗಗಳಿಗೆ ಹರಡಿಕೊಂಡಿರುವ ಹಂತದಲ್ಲಿ ರೋಗನಿರ್ಣಯವನ್ನು ಮಾಡಲಾಗುತ್ತಿದೆ'' ಎಂದು ಅವರು ತಿಳಿಸಿದರು. ಮಹಿಳೆಯರಲ್ಲಿ ಕ್ಯಾನ್ಸರ್ ರೋಗ ತಡೆಗಟ್ಟಲು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವ ಮಹತ್ವದ ಬಗ್ಗೆ ಮಾತನಾಡಿದ ಬೆಂಗಳೂರಿನ ಸಂಪ್ರದ ಆಸ್ಪತ್ರೆಯ ಪ್ರಿವೆಂಟಿವ್ ಆಂಕಾಲಾಜಿಸ್ಟ್ ಡಾ.ವಿನೋದ್ ಕೆ.ರಮಣಿ ಅವರು, ''ಮಹಿಳೆಯರು ಪ್ರತಿ ವರ್ಷ ಆರು ಕ್ಯಾನ್ಸರ್ ವಿಧಗಳಾದ ಸ್ತನ, ಗರ್ಭಕಂಠ, ಓರಲ್ ಕ್ಯಾವಿಟಿ, ಹೊಟ್ಟೆ, ಶ್ವಾಸಕೋಶ ಮತ್ತು ಇತರ ಅಂಗಗಳ ತಪಾಸಣೆ ಮಾಡಿಸಿಕೊಳ್ಳುವುದು ಉತ್ತಮ. 9 ರಿಂದ 15 ವರ್ಷ ವಯೋಮಾನದ ಹೆಣ್ಣು ಮಕ್ಕಳು ಊಕಗಿ ಲಸಿಕೆ ಹಾಕಿಸಿಕೊಳ್ಳುವುದು ಮತ್ತು ವಯಸ್ಕ ಮಹಿಳೆಯರು ಹೆಪಟೈಟಿಸ್ ಬಿ ವೈರಸ್ ಲಸಿಕೆಯನ್ನು ಹಾಕಿಸಿಕೊಳ್ಳುವುದು ಅತ್ಯಂತ ಮುಖ್ಯವಾಗಿದೆಎಂದು ಅಭಿಪ್ರಾಯಪಟ್ಟರು. ಭಾರತದಲ್ಲಿ ಶೇ.60 ಸ್ತನ ಕ್ಯಾನ್ಸರ್ ಪ್ರಕರಣಗಳನ್ನು ಮೂರು ಅಥವಾ ನಾಲ್ಕನೇ ಹಂತದಲ್ಲಿದ್ದಾಗ ಪತ್ತೆ ಮಾಡಲಾಗುತ್ತಿದೆ.

## ಮ್ಯಾಂಗೋ ಮಸಾಲ ರೈಸ್

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಸಾಸಿವೆ - ಅರ್ಧ ಚಮಚ, ಜೀರಿಗೆ - ಅರ್ಧ ಚಮಚ, ಮೆಂತೆಕಾಳು - 4 ರಿಂದ 5, ಧನಿಯಾ ಕಾಳು - 1 ಚಮಚ, ಒಣಮೆಣಸು - 8 ರಿಂದ 10, ತೆಂಗಿನತುರಿ - ಕಾಲು ಕಪ್, ಎಣ್ಣೆ - 3 ಚಮಚ, ಕಡಲೆಬೇಳೆ, ಕರಿಬೇವು, ಮಾವಿನ ತುರಿ - ನಾಲ್ಕೈದು ಚಮಚ, ಅನ್ನ - ಮೊದಲೇ ತಯಾರಿಸಿಟ್ಟುಕೊಂಡಿರಿ

### ಮಾಡುವ ವಿಧಾನ

ಪ್ಯಾನ್ವೊಂದಕ್ಕೆ ಎಣ್ಣೆ ಹಾಕದೇ ಸ್ವಲ್ಪ ಜೀರಿಗೆ, ಮೆಂತೆ, ಧನಿಯಾ ಹಾಗೂ ಒಣಮೆಣಸು ಸೇರಿಸಿ ಹುರಿದುಕೊಳ್ಳಿ. ಹುರಿದುಕೊಂಡ ಸಾಮಗ್ರಿಗಳನ್ನು ಮಿಕ್ಸಿ ಜಾರಿಗೆ ಹಾಕಿ. ಇದರ ಜೊತೆ ತೆಂಗಿನತುರಿ ಸೇರಿಸಿ ನೀರು ಹಾಕದೇ ರುಬ್ಬಿಕೊಳ್ಳಿ. ಈಗ ಇನ್ನೊಂದು ಪ್ಯಾನ್ಗೆ ಸ್ವಲ್ಪ ಎಣ್ಣೆ ಹಾಕಿ ಬಿಸಿಯಾದ ಮೇಲೆ ಸಾಸಿವೆ, ಜೀರಿಗೆ, ಕಡಲೆಬೇಳೆ ಹಾಕಿ ಹುರಿದುಕೊಳ್ಳಿ. ನಂತರ ಕರಿಬೇವು ಸೇರಿಸಿ ಎಲ್ಲವನ್ನೂ ಫ್ರೈ ಮಾಡಿ. ಇದಕ್ಕೆ ಮೊದಲೇ ಮಾಡಿಟ್ಟುಕೊಂಡ ಮಿಶ್ರಣ ಸೇರಿಸಿ. ಎಲ್ಲವನ್ನೂ ಮಿಕ್ಸ್ ಮಾಡಿಕೊಂಡ ನಂತರ ತುರಿದಿಟ್ಟುಕೊಂಡ ಮಾವಿನತುರಿ ಸೇರಿಸಿ ಕಲೆಸಿ. ನಂತರ ಅನ್ನ ಹಾಕಿ ಚೆನ್ನಾಗಿ ಕಲೆಸಿದರೆ ರುಚಿಯಾದ ಮಾವಿನಕಾಯಿ ಮಸಾಲಾ ರೈಸ್ ತಿನ್ನಲು ಸಿದ್ಧ.

## ಬೆಂಡೆಕಾಯಿ ಪ್ರಯೋಜನಗಳು



### ಹೆಲ್ತ್ ಟಿಪ್ಸ್

ಬೆಂಡೆಕಾಯಿ ತರಕಾರಿ ತಿನ್ನುವುದರಿಂದ ಆರೋಗ್ಯಕ್ಕೆ ಉತ್ತಮ ಲಾಭವಿದೆ. ಹಲವು ರೀತಿಯ ಉತ್ಕರ್ಷಣ ನಿರೋಧಕಗಳು, ಹೇರಳವಾದ ನಾರು, ಪಿಷ್ಟ, ಖನಿಜಗಳು ಮತ್ತು ವಿಟಮಿನ್ಗಳು ಬೆಂಡೆಕಾಯಿಯಲ್ಲಿವೆ. ಹಾಗಾಗಿಯೇ ಟೈಪ್ 2 ಮಧುಮೇಹದಿಂದ ಹಿಡಿದು, ಜೀರ್ಣಾಂಗಗಳ ತೊಂದರೆಯನ್ನು ಸುಧಾರಿಸುವವರೆಗೆ, ಹೃದಯ ರೋಗಗಳಿಂದ ಹಿಡಿದು ಕೆಲವು ಕ್ಯಾನ್ಸರ್ಗಳನ್ನು ದೂರ ಮಾಡುವವರೆಗೆ ಬೆಂಡೆಕಾಯಿ ಆರೋಗ್ಯಕ್ಕೆ ಬಹುಪಯೋಗವಿದೆ. ಬೆಂಡೆಕಾಯಿಯಲ್ಲಿರುವ ಕರಗಬಲ್ಲ ನಾರುಗಳು ಎಲ್ಡಿಎಲ್ ಅಥವಾ ಕೆಟ್ಟ ಕೊಲೆಸ್ಟ್ರಾಲ್ ಅಂಶವನ್ನು ಕರಗಿಸುವಲ್ಲಿ ನೆರವಾಗುತ್ತವೆ. ಹಾಗಾಗಿ ಕೊಲೆಸ್ಟ್ರಾಲ್ ತೊಂದರೆಯಿಂದ ಬಳಲುತ್ತಿರುವವರು ಬೆಂಡೆಕಾಯಿಯ ಸೇವನೆಯನ್ನು ಹೆಚ್ಚಿಸಬಹುದು. ಇದರಲ್ಲಿರುವ ಕರಗದಂಥ ನಾರುಗಳು ಜೀರ್ಣಾಂಗದ ಆರೋಗ್ಯ ಏರುಪೇರಾಗದಂತೆ ನೋಡಿಕೊಳ್ಳುತ್ತವೆ. ಮಲಬದ್ಧತೆಯಿಂದ ಮುಕ್ತಿ ನೀಡುತ್ತವೆ.

ಇದರಲ್ಲಿರುವ ನಾರಿನಂಶದಿಂದಾಗಿ ರಕ್ತದಲ್ಲಿರುವ ಸಕ್ಕರೆಯಂಶವನ್ನು ಸ್ಥಿರವಾಗಿ ಇರಿಸಲು ಅನುಕೂಲ. ಪರಂಪರಾಗತವಾಗಿ ಸಕ್ಕರೆಯಂಶವನ್ನು ನಿಯಂತ್ರಣದಲ್ಲಿರಿಸಲು ಇದನ್ನು ಬಳಸಲಾಗುತ್ತದೆ. ಆಹಾರ ಗ್ಲೂಕೋಸ್ ಆಗಿ ಪರಿವರ್ತನೆಯಾಗುವುದನ್ನು ನಿಧಾನವಾಗಿಸಿ, ಸಕ್ಕರೆಯಂಶ ಏರಿಳಿತ ಆಗದಂತೆ ತಡೆಯುವ ಸಾಧ್ಯತೆ ಇದಕ್ಕಿದೆ.

ಇದರಲ್ಲಿರುವ ವಿಟಮಿನ್ ಎ ಅಂಶವು ಕಣ್ಣಿನ ಆರೋಗ್ಯ ರಕ್ಷಣೆಯಲ್ಲಿ ಒಳ್ಳೆಯ ನೆರವು ನೀಡುತ್ತದೆ. ಕಾರ್ನಿಯ ರಕ್ಷಣೆಗೆ ಬೇಕಾದ ಅಂಶಗಳು ಬೆಂಡೆಕಾಯಿಯಲ್ಲಿವೆ. ಇದಲ್ಲದೆ, ಕಣ್ಣಿನ ಸೋಂಕುಗಳನ್ನು ದೂರ ಮಾಡುವಂಥ ಸಾಧ್ಯತೆಯೂ ಈ ತರಕಾರಿಗಿದೆ. ಚರ್ಮದ ಕಾಂತಿ ಹೆಚ್ಚಳಕ್ಕೂ ಇದು ಕೊಡುಗೆಯನ್ನು ನೀಡುತ್ತದೆ. ಕೂದಲಿನ ಬೆಳವಣಿಗೆಗೆ ಬೇಕಾದಂಥ ಖನಿಜಗಳು ಮತ್ತು ವಿಟಮಿನ್ಗಳು ಇದರಲ್ಲಿ ವಿಪುಲವಾಗಿವೆ. ಜೊತೆಗೆ, ವಿಟಮಿನ್ ಸಿ ಅಧಿಕವಾಗಿದ್ದು, ಕೊಲಾಜಿನ್ ಹೆಚ್ಚಳಕ್ಕೆ ಅನುಕೂಲವಾಗುತ್ತದೆ.

## ಮುಖದ ಕಲೆಗಳ ನಿವಾರಣೆಗೆ 'ಮುಲ್ತಾನಿ ಮಿಟ್ಟಿ'

### ಬ್ಯೂಟಿ ಟಿಪ್ಸ್



ಕಲುಷಿತ ವಾತಾವರಣ, ಆರೋಗ್ಯದ ಜೊತೆಗೆ ತ್ವಚೆಯ ಸೌಂದರ್ಯವನ್ನು ಕೂಡ ಹಾಳು ಮಾಡುತ್ತದೆ. ಧೂಳು, ಹೊಗೆಯಿಂದ ಮುಖದ ಸೌಂದರ್ಯ ಕಳೆಗುಂದುತ್ತದೆ. ಇದರಿಂದ ಪಾರಾಗಲು ಉಪಯೋಗವಾಗುವಂತ ಕೆಲವು ಸೌಂದರ್ಯ ಸಂಬಂಧಿ ಸಲಹೆಗಳು ಇಲ್ಲಿವೆ.

ಮುಲ್ತಾನಿ ಮಿಟ್ಟಿಗೆ ಬಾದಾಮಿ ಪುಡಿಯನ್ನು ಹಾಕಿ ಅದಕ್ಕೆ ಸ್ವಲ್ಪ ಪ್ರಮಾಣದಲ್ಲಿ ಹಾಲನ್ನು ಸೇರಿಸಿ ಮುಖಕ್ಕೆ ಹಚ್ಚಿಕೊಳ್ಳಿ.

ಹೀಗೆ ಮಾಡುವುದರಿಂದ ಮುಖ ಸ್ವಚ್ಚವಾಗುತ್ತದೆ ಮತ್ತು ಮೃದುವಾಗುತ್ತದೆ.

ಪುದೀನಾದ ಎಲೆಗಳನ್ನು ನುಣ್ಣಗೆ ಪುಡಿ ಮಾಡಿ ಅದಕ್ಕೆ ಸ್ವಲ್ಪ ಪ್ರಮಾಣದಲ್ಲಿ ಮೊಸರನ್ನು ಸೇರಿಸಿ. ಇವೆರಡರ ಮಿಶ್ರಣವನ್ನು ಮುಲ್ತಾನಿ ಮಿಟ್ಟಿಗೆ ಸೇರಿಸಿ ಮುಖಕ್ಕೆ ಹಚ್ಚಿಕೊಳ್ಳಿ. ಹೀಗೆ ಮಾಡುವುದರಿಂದ ಮುಖದ ಕಲೆಗಳು ಮಾಯವಾಗುತ್ತವೆ.

ಮುಲ್ತಾನಿ ಮಿಟ್ಟಿಗೆ ರೋಸ್ ವಾಟರ್ ಸೇರಿಸಿ ಮುಖಕ್ಕೆ ಹಚ್ಚಿ. ಅದು ಪೂರ್ತಿಯಾಗಿ ಒಣಗಿದ ನಂತರ ಮುಖವನ್ನು ತೊಳೆದುಕೊಳ್ಳಿ. ಹೀಗೆ ಮಾಡುವುದರಿಂದ ಮುಖದಲ್ಲಿನ ಜಿಡ್ಡಿನ ಅಂಶ ಮಾಯವಾಗಿ ಚರ್ಮ ಕಾಂತಿಯುತವಾಗಿರುತ್ತದೆ.

ಒಂದು ಚಮಚ ಪಪ್ಪಾಯಿ ಹಣ್ಣಿನ ತಿರುಳಿನ ಜೊತೆ ಸ್ವಲ್ಪ ಜೇನುತುಪ್ಪ ಸೇರಿಸಿ, ಅದನ್ನು ಮುಲ್ತಾನಿ ಮಿಟ್ಟಿಗೆ ಬೆರೆಸಿ ಮುಖಕ್ಕೆ ಹಚ್ಚಿಕೊಳ್ಳಿ.

ಚಂದನದ ಪೌಡರ್ ಜೊತೆ ಟೊಮೆಟೋ ರಸವನ್ನು ಬೆರೆಸಿ ಅದನ್ನು ಮುಲ್ತಾನಿ ಮಿಟ್ಟಿಗೆ ಸೇರಿಸಿ. ಈ ಮಿಶ್ರಣವನ್ನು ಮುಖಕ್ಕೆ ಹಚ್ಚಿಕೊಳ್ಳುವುದರಿಂದ ಮುಖದ ಹೊಳಪು ಹೆಚ್ಚುತ್ತದೆ.

## ಕಾಜಲ್ ಅಗರ್ವಾಲ್ ಅವರ ಸತ್ಯಭಾಮ ಚಿತ್ರ ಬಿಡುಗಡೆಗೆ ಸಿದ್ಧ



ಸುಮನ್ ಚಿಕ್ಕಾಲಾ ನಿರ್ದೇಶನದ ಕಾಜಲ್ ಅಗರ್ವಾಲ್ ನಟನೆಯ ಸತ್ಯಭಾಮಾ ಚಿತ್ರ ಮುಂದಿನ ಥಿಯೇಟರ್ ಗಳಲ್ಲಿ ಬಿಡುಗಡೆಗೊಳ್ಳಲಿದ್ದು, ದಿನಾಂಕ ಘೋಷಣೆಯಾಗಿದೆ. ಸತ್ಯಭಾಮಾ ಹೊಸ ದಿನಾಂಕವನ್ನು ಘೋಷಣೆ ಮಾಡಿದ್ದಾರೆ. ಕಾಜಲ್ ಅಗರ್ವಾಲ್ ಅವರ 60 ನೇ ಚಿತ್ರ ಸತ್ಯಭಾಮ ಮುಂದಿನ ತಿಂಗಳು ಬಿಡುಗಡೆಗೊಳ್ಳಲಿದೆ.

ಸುಮನ್ ಚಿಕ್ಕಾಲಾ ನಿರ್ದೇಶಿಸಿದ ಸಿನಿಮಾ ಬರ್ಘ್ ಸೃಷ್ಟಿಸುತ್ತಿರುವ ಒಂದು ರೋಮಾಂಚನಕಾರಿ ಪೊಲೀಸ್ ನಾಟಕವಾಗಿದೆ. ನವೀನ್ ಚಂದ್ರ ಪುರುಷ ನಾಯಕನಾಗಿ, ಚಲನಚಿತ್ರವು ಆಕರ್ಷಕ ಮತ್ತು ತೀವ್ರವಾದ ಕಥಾಹಂದರವನ್ನು ಹೊಂದಿದೆ. ಅತ್ಯಾಕರ್ಷಕವಾಗಿ, ಸತ್ಯಭಾಮ ಚಿತ್ರದ ಬಿಡುಗಡೆ ದಿನಾಂಕವನ್ನು ಮರುನಿಗದಿಪಡಿಸಲಾಗಿದೆ. ಆರಂಭದಲ್ಲಿ ಮೇ 31, 2024 ಕ್ಕೆ ನಿಗದಿಪಡಿಸಲಾಗಿದೆ, ಇದು ಈಗ ಜೂನ್ 7, 2024 ರಂದು ಥಿಯೇಟರ್ಗಳಿಗೆ ಬರಲಿದೆ. ನಿರೀಕ್ಷೆಯನ್ನು ಹೆಚ್ಚಿಸಲು, ತಯಾರಕರು ನವೀಕರಿಸಿದ ಬಿಡುಗಡೆ ದಿನಾಂಕವನ್ನು ಒಳಗೊಂಡಿರುವ ಹೊಸ ಪೋಸ್ಟರ್ ಅನ್ನು ಅನಾವರಣಗೊಳಿಸಿದ್ದಾರೆ, ಇದು ಉತ್ಸಾಹಿ ಅಭಿಮಾನಿಗಳಲ್ಲಿ ಉತ್ಸಾಹವನ್ನು ಹೆಚ್ಚಿಸಿದೆ. ಪ್ರಕಾಶ್ ರಾಜ್, ನಾಗಿನೀಡು, ಹರ್ಷವರ್ಧನ್, ರವಿವರ್ಮ, ಅಂಕಿತ್ ಕೊಯ್ಯ, ಸಂಪದ ಎನ್, ಪ್ರಜ್ವಲ್ ಯದ್ಮ ಮುಂತಾದ ಹೆಸರಾಂತ ನಟರನ್ನು ಒಳಗೊಂಡಂತೆ ಈ ಚಿತ್ರವು ತಾರಾಬಳಗವನ್ನು ಹೊಂದಿದೆ. ಔರಂ ಆರ್ಟ್ಸ್ ಬ್ಯಾನರ್ಡಡಿಯಲ್ಲಿ ಬಾಬಿ ಟಿಕ್ಕಾ ಮತ್ತು ಶ್ರೀನಿವಾಸ್ ರಾವ್ ಟಕ್ಕಲಪೆಲ್ಲಿ ನಿರ್ಮಿಸಿರುವ ಸತ್ಯಭಾಮ ಚಿತ್ರಕಥೆಗಾರ ಶಶಿ ಕಿರಣ್ ಟಿಕ್ಕಾ ಮತ್ತು ಸಂಯೋಜಕ ಶ್ರೀಚರಣ್ ಪಕಾಲ ಅವರ ಸೃಜನಶೀಲ ಸ್ಪರ್ಶದಿಂದ ಸಿನಿಮಾ ತಯಾರಾಗಿದೆ, ಇದು ಚಲನಚಿತ್ರದ ಒಟ್ಟಾರೆ ಸಿನಿಮೀಯ ಅನುಭವಕ್ಕೆ ಅನನ್ಯ ಪರಿಮಳವನ್ನು ಸೇರಿಸುತ್ತದೆ. ಈ ಎಲ್ಲಾ ಅಂಶಗಳೊಂದಿಗೆ, ಸತ್ಯಭಾಮಾ ಕಾಜಲ್ ಅಗರ್ವಾಲ್ ಅವರ ಪ್ರಭಾವಶಾಲಿ ಚಿತ್ರಕಥೆಗೆ ಮರೆಯಲಾಗದ ಸೇರ್ಪಡೆಯಾಗಲಿದೆ ಎಂದು ಭರವಸೆ ನೀಡುತ್ತದೆ.

## ಡಿಜಿಟಲ್ ಥಿಯೇಟರ್‌ನಲ್ಲಿ 'ಚೌ ಚೌ ಬಾತ್' ಬಿಡುಗಡೆ




ಕೇಂಜ ಚೇತನ್ ಕುಮಾರ್ ನಿರ್ದೇಶನದ 'ಚೌ ಚೌ ಬಾತ್' ಈ ವರ್ಷ ಬಿಡುಗಡೆಗೊಂಡಿರುವ ಚೆಂದದ ಚಿತ್ರಗಳಲ್ಲೊಂದಾಗಿ ಗುರುತಿಸಿಕೊಂಡಿದೆ. ಒಂದಷ್ಟು ಪ್ರಯೋಗಾತ್ಮಕ ಅಂಶಗಳು, ಪ್ರೇಕ್ಷಕರನ್ನೇ ತನ್ನೊಳಗಿಳಿಸಿಕೊಂಡು ಕರೆದೊಯ್ಯುವ ಗುಣದ ದೃಷ್ಯದಿಂದ ಕಳೆಗಟ್ಟಿಕೊಂಡಿದ್ದ ಚಿತ್ರ 'ಚೌ ಚೌ ಬಾತ್'. ಅತ್ಯುತ್ತಮ ವಿಮರ್ಶೆ ಪಡೆದಿದ್ದ ಈ ಸಿನಿಮಾವನ್ನು ನೋಡಿದ ಪ್ರೇಕ್ಷಕರೆಲ್ಲ ಥ್ರಿಲ್ ಆಗಿದ್ದರು. ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿಯೂ ಪ್ರದರ್ಶನಗೊಂಡಿದ್ದ ಚೌ ಚೌ ಬಾತ್ ಇದೀಗ ಸಿನಿ ಬಜ಼ಾರ್ ಎಂಬ ಡಿಜಿಟಲ್ ಥಿಯೇಟರಿನಲ್ಲಿ ಬಿಡುಗಡೆಗೊಂಡಿದೆ.




ಸಿನಿ ಬಜಾರ್ ನಲ್ಲಿ ಬಿಡುಗಡೆಗೊಂಡ ಮೊದಲ ದಿನವೇ ಹೆಚ್ಚಿನ ಸಂಖ್ಯೆಯಲ್ಲಿ ವೀಕ್ಷಣೆ ಪಡೆದುಕೊಂಡಿದೆ. ಇನ್ನು ಐವತ್ತು ದಿನಗಳ ಕಾಲ ಈ ಸಿನಿಮಾ ಸಿನಿ ಬಜಾರಿನಲ್ಲಿ ಪ್ರದರ್ಶನ ಕಾಣಲಿದೆ. ಆರಂಭದಿಂದಲೂ ಚೌ ಚೌ ಬಾತ್ ಬಗ್ಗೆ ಉತ್ತಮ ಅಭಿಪ್ರಾಯ ಮೂಡಿಕೊಂಡಿತ್ತು. ಈ ಕಾರಣದಿಂದಲೇ ಈ ಸಿನಿಮಾ ಯಶ ಕಂಡಿದ್ದೀಗ ಇತಿಹಾಸ. ನಿರ್ದೇಶಕ ಕೇಂಜ ಚೇತನ್ ಕುಮಾರ್ ಅಂಥಾದ್ದೊಂದು ಸಮ್ಮೋಹಕ ಶೈಲಿಯಲ್ಲಿ ಈ ಚಿತ್ರವನ್ನು ಕಟ್ಟಿಕೊಟ್ಟಿದ್ದರು. ಬೆಂಗಳೂರು ಅಂತಾರಾಷ್ಟ್ರೀಯ ಸಿನಿಮೋತ್ಸವದ ಪ್ರೇಕ್ಷಕರಿಂದಲೇ ಈ ಚಿತ್ರ ಮೆಚ್ಚುಗೆ ಗಳಿಸಿಕೊಂಡಿತ್ತು. ಇಂಥಾ ಸದಭಿಪ್ರಾಯ ಕೇಳಿ ಸಿನಿಮಾ ಮಂದಿರಗಳಲ್ಲಿ ನೋಡಬೇಕಂದುಕೊಂಡು ಸಾಧ್ಯವಾಗದವರು, ಸಿನಿ ಬಜಾರ್ ಡಾಟ್ ಕಾಮ್ ನಲ್ಲಿ ಚೌ ಚೌ ಬಾತ್ ನ ಅಸಲೀ ಸವಿಯನ್ನು ಆಸ್ವಾದಿಸುವ ಅವಕಾಶವೀಗ ಒದಗಿ ಬಂದಿದೆ.

ಇದು ಹೈಪರ್ ಲಿಂಕ್ ರೊಮ್ಯಾಂಟಿಕ್ ಜಾನರಿನ ಚಿತ್ರ. ಕನ್ನಡದ ಮಟ್ಟಿಗಿದು ಅಪರೂಪದ ಜಾನರ್. ಮೂರು ವಿಭಿನ್ನ ಪ್ರೇಮ ಕಥನಗಳನ್ನು ತೆರೆದಿಡುವ ಚೌ ಚೌ ಬಾತ್ ಎಲ್ಲ ವರ್ಗದ ಪ್ರೇಕ್ಷಕರನ್ನೂ ಸೆಳೆಯುವಂತಿದೆ. ಹೀಗೊಂದು ಅಭಿಪ್ರಾಯ ನೋಡಿದವರಿಂದಲೇ ಮೂಡಿಕೊಂಡಿದೆ. ಸನಾತನಯ್ ಪಿಕ್ಚರ್ಸ್ ಮತ್ತು ಕಾಮನಧೇನು ಫಿಲಂಸ್ ಅರ್ಪಿಸುವ ಈ ಚಿತ್ರ ಹಾರಿಜಾನ್ ಮೂವೀಸ್ ಬ್ಯಾನರಿನಡಿಯಲ್ಲಿ ನಿರ್ಮಾಣಗೊಂಡಿದೆ. ಹೇಮಂತ್ ಜೋಯಿಸ್ ಸಂಗೀತ ನಿರ್ದೇಶನ, ರುದ್ರಮುನಿ ಬೆಳಗೆರೆ ಛಾಯಾಗ್ರಹಣ, ಪ್ರಮೋದ್ ಮರವಂತೆ ಗೀತ ಸಾಹಿತ್ಯವಿದೆ. ಸಾಗರ್ ಗೌಡ, ಸಂಕಲ್ಪ ಶರ್ಮಾ, ಸುಶ್ಮಿತಾ ಭಟ್, ಅರುಣಾ ಬಾಲರಾಜ್, ಧನುಶ್ ಬೈಕಂಪಾಡಿ, ಗೀತಾ ಬಂಗೇರ, ಪ್ರಕರ್ಷ ಶಾಸ್ತ್ರಿ ಮುಂತಾದವರ ತಾರಾಗಣವನ್ನು ಈ ಸಿನಿಮಾ ಒಳಗೊಂಡಿದೆ. ಸತೀಶ್ ಎಸ್.ಬಿ, ಸಂಕಲ್ಪ ಶರ್ಮಾ, ಪೂರ್ಣಚಂದ್ರ, ದ ಜೋಯ್ಸ್ ಪ್ರಾಜೆಕ್ಟ್, ಅಶೋಕ್ ಡಿ ಶೆಟ್ಟಿ, ಓಂ ಸ್ಟುಡಿಯೋ ಸಹ ನಿರ್ಮಾಣದೊಂದಿಗೆ 'ಚೌ ಚೌ ಬಾತ್' ಚಿತ್ರ ಮೂಡಿ ಬಂದಿದೆ.

## ದುಷ್ಟ ಶಕ್ತಿಗಳ ಸಂಹಾರದ ಪಯಣದಲ್ಲಿ ಬಾಲ್ಯದಿಂದ ತಾರುಣ್ಯದ ಕಡೆಗೆ ರೇಣುಕಾ-ಯಲ್ಲಮ್ಮ

ಕನ್ನಡ ಕಿರುತೆರೆಯಲ್ಲಿ ಸ್ಟಾರ್ ಸುವರ್ಣ ವಾಹಿನಿಯು ವೀಕ್ಷಕರಿಗೆ ಪುರಾಣ, ಆಧ್ಯಾತ್ಮ ಮತ್ತು ಮೌಲ್ಯಾಧಾರಿತ ಕಥೆಗಳನ್ನು ನೀಡುತ್ತಾ ಬಂದಿದೆ. ಪ್ರಸ್ತುತ ವಾಹಿನಿಯಲ್ಲಿ ಪ್ರಸಾರವಾಗುತ್ತಿರುವ ಉಧೋ ಉಧೋ ಶ್ರೀ ರೇಣುಕಾ ಯಲ್ಲಮ್ಮ ಧಾರಾವಾಹಿ ಪ್ರೇಕ್ಷಕರ ಮನಗೆದ್ದು ಯಶಸ್ಸಿನಿಂದ ಸಾಗುತ್ತಿದೆ. ಇದೀಗ ಸಮಯದ ಕುದುರೆಯನ್ನೇರಿ ಉರುಳಿವೆ ಋತುಗಳು - ಇನ್ಮುಂದೆ ಹೊಸ ಅಧ್ಯಾಯದೊಂದಿಗೆ ಧಾರಾವಾಹಿಯಲ್ಲಿ ಅನೇಕ ರೋಚಕ ತಿರುವುಗಳು ಕಾಣಿಸಿಕೊಳ್ಳಲಿದೆ.

ಅಪ್ಪಟ ಕನ್ನಡ ಮಣ್ಣಿನ ಪೌರಾಣಿಕ ಕಥಾವಸ್ತುವನ್ನಿಟ್ಟುಕೊಂಡು ಶುರುವಾದ ಈ ಧಾರಾವಾಹಿ ಆರಂಭದಿಂದಲೂ ಕಿರುತೆರೆಯಲ್ಲಿ ಹೊಸ ಸಂಚಲನವನ್ನು ಮೂಡಿಸುತ್ತಿದೆ. ರೇಣುಕೆ ಹಾಗು ಯಲ್ಲಮ್ಮನ ಪಾತ್ರಕ್ಕೆ ಜೀವ ತುಂಬಿದ ಮಕ್ಕಳು ಅದ್ಭುತವಾಗಿ ನಟಿಸಿ ಅಭಿಮಾನಿಗಳ ಮನಗೆದ್ದು ಮನೆಮಾತಾಗಿದ್ದರು ಆದರೆ ಇದೀಗ ಕಥೆಯಲ್ಲಿ ವರ್ಷಗಳುರುಳಿ ರೇಣುಕಾ-ಯಲ್ಲಮ್ಮ ಬಾಲ್ಯದಿಂದ ತಾರುಣ್ಯದ ಕಡೆಗೆ ಕಾಲಿಡುತ್ತಿದ್ದಾರೆ.




ಬಾಲ್ಯದಿಂದಲೂ ಕಷ್ಟಗಳನ್ನೇ ಎದುರಿಸುತ್ತಾ ಬಂದಿರುವ ರೇಣುಕಾ-ಯಲ್ಲಮ್ಮರ ಬಾಳಿನಲ್ಲಿ10 ವರ್ಷಗಳ ಬಳಿಕ ಏನೆಲ್ಲಾ ಆಗಲಿದೆ ದುಷ್ಟರಿಂದ ಇನ್ನೆಷ್ಟು ಕಷ್ಟಗಳನ್ನು ಎದುರಿಸಬೇಕಾಗಬಹುದು?

ಇವರಿಬ್ಬರ ಬಾಳಿನಲ್ಲಿ ಪ್ರೀತಿಯ ಹೂವು ಅರಳಲಿದೆಯೇ ಜನಜನಿತವಾದ ರೇಣುಕಾ ಹಾಗು ಜಮದಗ್ನಿಯ ವಿವಾಹವು ಯಾವಾಗ ಜರುಗಲಿದೆ ಲೋಕ ಕಲ್ಯಾಣಕ್ಕಾಗಿ ಹಾಗೂ ದುಷ್ಟ ಸಂಹಾರಕ್ಕಾಗಿ ದೇವಿ ಅಂಶದ ಎರಡು ಶಕ್ತಿಗಳು ಒಂದಾಗಿ ಮುಂಬರುವ ಕಷ್ಟ ಕೋಟಲೆಗಳನ್ನು ಹೇಗೆ ಎದುರಿಸುತ್ತಾರೆ ಎಂಬುದು ಈ ಧಾರಾವಾಹಿಯ ಮುಂದಿನ ರೋಚಕ ಕಥಾಹಂದರ.

ಈಗಾಗಲೇ ಹೊಸ ಅಧ್ಯಾಯದ ಚಿತ್ರೀಕರಣ ಶುರುವಾಗಿದ್ದು, ರೇಣುಕೆಯಾಗಿ ಮಹತಿ, ಯಲ್ಲಮ್ಮನ ಪಾತ್ರದಲ್ಲಿ ಅನನ್ಯ ಮೈಸೂರ್ ಅಭಿನಯಿಸುತ್ತಿದ್ದಾರೆ. ಅಮೋಘ ವಿನ್ಯಾಸದ ಸೆಟ್ ಮತ್ತು ಗ್ರಾಫಿಕ್ಸ್ನಿಂದ ಪ್ರಸಾರವಾಗುತ್ತಿರುವ ಧಾರಾವಾಹಿಯ ಪ್ರೋಮೋಗಳು ಪ್ರೇಕ್ಷಕರ ಮನಗೆಲ್ಲುವಲ್ಲಿ ಯಶಸ್ವಿಯಾಗಿದೆ.

ಹೊಸ ಸವಾಲುಗಳನ್ನು ಎದುರಿಸಲು, ಹೊಸ ಉತ್ಸಾಹದೊಂದಿಗೆ ಬರ್ತಿದ್ದಾರೆ ರೇಣುಕಾ-ಯಲ್ಲಮ್ಮ.ಉಧೋ ಉಧೋ ಶ್ರೀ ರೇಣುಕಾ ಯಲ್ಲಮ್ಮ ಇದೇ ಸೋಮವಾರದಿಂದ ರಾತ್ರಿ 8.30 ಕ್ಕೆ ನಿಮ್ಮ ಸ್ಟಾರ್ ಸುವರ್ಣ ವಾಹಿನಿಯಲ್ಲಿ ತಪ್ಪದೇ ವೀಕ್ಷಿಸಿ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ಅನಾರೋಗ್ಯದ ಸಮಸ್ಯೆ ಹೆಚ್ಚು, ನಿಮ್ಮ ಕೆಲಸಕ್ಕೆ ಜನರ ಬೆಂಬಲ ದೊರೆಯುತ್ತದೆ, ವಾಸ ಸ್ಥಳದ ಬದಲಾವಣೆಯಿಂದ ಶುಭ.

**ವೃಷಭ:** ಪ್ರಯಾಣದಿಂದ ಧನಲಾಭ, ಉನ್ನತ ವ್ಯಾಸಂಗದಲ್ಲಿ ಶುಭ, ವ್ಯವಹಾರದಲ್ಲಿ ನಿರೀಕ್ಷೆಗೂ ಮೀರಿ ಸಫಲತೆ.

**ಮಿಥುನ:** ದಿನಸಿ ವ್ಯಾಪಾರದಲ್ಲಿ ಲಾಭದಾಯಕ, ವಾಹನ ಕೊಳ್ಳಲು ಸೂಕ್ತ ಸಮಯವಲ್ಲ, ಆರ್ಥಿಕತೆಯಲ್ಲಿ ತೊಂದರೆ.

**ಕಟಕ:** ಆಹಾರ ಸರಬರಾಜು ವೃತ್ತಿಯಲ್ಲಿ ಆದಾಯ, ಕುಟುಂಬದಲ್ಲಿ ಸಂತಸ, ಸಕಾಲ.

**ಸಿಂಹ:** ಕೆಲಸದ ವಿಷಯದಲ್ಲಿ ಸೂಕ್ತ ನಿರ್ಧಾರ ತೆಗೆದುಕೊಳ್ಳಿ, ಹಣ ಹೂಡಿಕೆಯಲ್ಲಿ ಲಾಭ,

**ಕನ್ಯಾ:** ಅಧಿಕಾರಿಗಳ ಪ್ರಶಂಸೆಯಿಂದ ಆತ್ಮವಿಶ್ವಾಸ ಹೆಚ್ಚುತ್ತದೆ, ಆರ್ಥಿಕತೆಯಲ್ಲಿ ತೊಂದರೆ ಕಡಿಮೆ, ಆರೋಗ್ಯ ಸಮಸ್ಯೆ ಬೇಸರ.

**ತುಲಾ:** ದುಡುಕುತನದ ಮಾತಿನಿಂದ ತೊಂದರೆ, ಮಾನಸಿಕ ಒತ್ತಡದಿಂದ ಅಧಿಕ ಚಿಂತೆ,

**ವೃಶ್ಚಿಕ:** ಕೆಲಸದಲ್ಲಿ ಮಾನಸಿಕ ಒತ್ತಡ ಉಂಟಾಗುತ್ತದೆ, ಹಿರಿಯರ ಸಲಹೆಗಳನ್ನು ಪಾಲಿಸಿ, ಖರ್ಚಿನಿಂದ ಮನಸ್ಸಿಗೆ ಬೇಸರ.

**ಧನಸ್ಸು:** ಅನಿರೀಕ್ಷಿತ ಧನ ಲಾಭ, ಸಂತಾನಾಕಾಂಕ್ಷಿಗಳಿಗೆ ಶುಭ,

**ಮಕರ:** ವಿಶ್ರಾಂತಿಯ ಅವಶ್ಯಕತೆ ಇದೆ, ದುಡುಕುತನದ ನಿರ್ಧಾರಗಳು ಬೇಡ,

**ಕುಂಭ:** ವ್ಯಾಯಾಮ ಶಾಲೆಯವರಿಗೆ ಆದಾಯ, ಬಂಧುಗಳಿಂದ ಸಹಾಯ, ಲಾಭ.

**ಮೀನ:** ಹೋಟೆಲ್ ವ್ಯಾಪಾರದಲ್ಲಿ ಆದಾಯ, ಬೇಕರಿ ಉತ್ಪನ್ನದಿಂದ ಅಧಿಕ ಲಾಭ, ಅಧಿಕಾರಿಗಳಿಗೆ ಮಾನಸಿಕ ಒತ್ತಡ.

## ಸ್ಕಿಜೋಫ್ರೇನಿಯಾ ದಿನ




ವಿಶ್ವ ಸ್ಕಿಜೋಫ್ರೇನಿಯಾ ದಿನವನ್ನು ಪ್ರತಿ ಮೇ 24 ರಂದು ಸ್ಮರಿಸಲಾಗುತ್ತದೆ. ಇದು ವಿಶ್ವದಾದ್ಯಂತ 20 ದಶಲಕ್ಷಕ್ಕೂ ಹೆಚ್ಚು ಜನರ ಮೇಲೆ ಪರಿಣಾಮ ಬೀರುವ ಮಾನಸಿಕ ಅಸ್ವಸ್ಥತೆಯ ಜಾಗೃತಿ ಮೂಡಿಸಲು ಮೀಸಲಾದ ದಿನವಾಗಿದೆ. ಸ್ಕಿಜೋಫ್ರೇನಿಯಾವು ಹೆಚ್ಚು ಕಳಂಕಿತವಾಗಿದೆ ಏಕೆಂದರೆ ಅದರ ಬಗ್ಗೆ ಮಾತನಾಡಲಾಗಿಲ್ಲ ಮತ್ತು ಮಾಧ್ಯಮದಲ್ಲಿ ನಿಖರವಾದ ಪ್ರಾತಿನಿಧ್ಯವನ್ನು ಹೊಂದಿಲ್ಲ. ವಿಶ್ವ ಸ್ಕಿಜೋಫ್ರೇನಿಯಾ ಜಾಗೃತಿ ದಿನವನ್ನು ಕಳಂಕದ ವಿರುದ್ಧ ಹೋರಾಡಲು ಮತ್ತು ಸಹಾಯ ಪಡೆಯಲು ವಿವಿಧ ಸಂಪನ್ಮೂಲಗಳನ್ನು ಹುಡುಕಲು ಜನರಿಗೆ ಸುಲಭವಾಗುವಂತೆ ರಚಿಸಲಾಗಿದೆ. ಸ್ಕಿಜೋಫ್ರೇನಿಯಾದ ಸಾವಿರಾರು ಜನರು - ಪ್ರಪಂಚದಾದ್ಯಂತ - ತಮ್ಮ ಜೀವನದ ಪ್ರತಿ ದಿನವೂ ಹೋರಾಡಬೇಕಾದ ಸವಾಲುಗಳ ಮೇಲೆ ಇದು ಮುಚ್ಚಳವನ್ನು ಎತ್ತುತ್ತದೆ.

ಸ್ಕಿಜೋಫ್ರೇನಿಯಾವು ಮಾನಸಿಕ ಅಸ್ವಸ್ಥತೆಯಾಗಿದ್ದು, ಶ್ರವಣೇಂದ್ರಿಯ ಮತ್ತು/ಅಥವಾ ದೃಷ್ಟಿ ಭ್ರಮೆಗಳು, ಭ್ರಮೆಯ ಚಿಂತನೆ, ವಾಸ್ತವದಿಂದ ವಿಘಟನೆ ಮತ್ತು ಅಸ್ತವ್ಯಸ್ತವಾಗಿರುವ ಆಲೋಚನೆಗಳು ಮತ್ತು ನಡವಳಿಕೆಯಂತಹ ನಿರಂತರ ಮನೋವಿಕೃತ ರೋಗಲಕ್ಷಣಗಳಿಂದ ನಿರೂಪಿಸಲ್ಪಟ್ಟಿದೆ. ರೋಗಿಯು ಇಪ್ಪತ್ತರ ದಶಕದ ಆರಂಭದಲ್ಲಿದ್ದಾಗ ಇದು ಸಾಮಾನ್ಯವಾಗಿ ಪ್ರಕಟಗೊಳ್ಳಲು ಪ್ರಾರಂಭಿಸುತ್ತದೆ, ಆದಾಗ್ಯೂ, ಅಪರೂಪದ ಸಂದರ್ಭಗಳಲ್ಲಿ, ಬಾಲ್ಯದಲ್ಲಿ ರೋಗಲಕ್ಷಣಗಳನ್ನು ತೋರಿಸಬಹುದು. ಈ ಅಸ್ವಸ್ಥತೆಯು ಪ್ರಪಂಚದ ಸುಮಾರು 24 ಮಿಲಿಯನ್ ಜನರ ಮೇಲೆ ಪರಿಣಾಮ ಬೀರುತ್ತದೆ.

ಸ್ಕಿಜೋಫ್ರೇನಿಕ್ಗೆ ಸಂಬಂಧಿಸಿದ ವಿವರಣೆಗಳೊಂದಿಗೆ ಪ್ರಕರಣಗಳು 1700 ರ ದಶಕದಲ್ಲಿ ದಾಖಲಾಗಲು ಪ್ರಾರಂಭಿಸಿದವು; ಈ ರೋಗವು ಆರಂಭಿಕ ನಾಗರಿಕತೆಯಿಂದಲೂ ಇದೆ. 1900 ರ ದಶಕದ ಆರಂಭದಲ್ಲಿ ಮನೋವೈದ್ಯ ಯುಜೆನ್ ಬ್ಲ್ಯೂಲರ್ ಸ್ಕಿಜೋಫ್ರೇನಿಯಾ ಎಂಬ ಹೆಸರನ್ನು ರಚಿಸಿದಾಗ ಮಾತ್ರ ಇದನ್ನು ನೋಂದಾಯಿಸಲಾಯಿತು ಮತ್ತು ಗುರುತಿಸಲಾಯಿತು. ಆದಾಗ್ಯೂ, ನ್ಯಾಯಸಮ್ಮತವಾದ ಮಾನವೀಯ ವೈದ್ಯಕೀಯ ವಿಧಾನಗಳನ್ನು ಅನುಸರಿಸುವ ಸರಿಯಾದ ಚಿಕಿತ್ಸೆಯನ್ನು 1980 ರ ಸುಮಾರಿಗೆ ಅಳವಡಿಸಲಾಯಿತು, ಸೂಕ್ತವಾದ ಆಂಟಿ ಸೈಕೋಟಿಕ್ ಔಷಧಿಗಳನ್ನು ಪರಿಚಯಿಸಿದಾಗ ಮತ್ತು ಸಾಮಾನ್ಯವಾಗಿ ಮನೋವೈದ್ಯಕೀಯ ಚಿಕಿತ್ಸೆಯಲ್ಲಿ ಈಗಾಗಲೇ ಕ್ರಾಂತಿ ಕಂಡುಬಂದಿದೆ. ಸ್ಕಿಜೋಫ್ರೇನಿಯಾವು ಚಿಕಿತ್ಸೆ ನೀಡಬಹುದಾದ ಅಸ್ವಸ್ಥತೆಯಾಗಿದೆ ಮತ್ತು ಕೆಲವು ಸಂದರ್ಭಗಳಲ್ಲಿ, ಗುಣಪಡಿಸಬಹುದಾಗಿದೆ. ಸರಿಯಾದ ಔಷಧಿ ಮತ್ತು ಮಾನಸಿಕ ಚಿಕಿತ್ಸೆಯೊಂದಿಗೆ, ರೋಗಿಗಳು ಸುಧಾರಣೆಯನ್ನು ತೋರಿಸಿದ್ದಾರೆ. ಅನೇಕ ಜನರು ಇನ್ನೂ ಸಹಾಯಕ್ಕಾಗಿ ತಲುಪುವುದಿಲ್ಲ. ತಲುಪುವ ಕೆಲವರು ಆರೈಕೆಯನ್ನು ಪಡೆಯುವ ಬದಲು ತಮ್ಮ ಸ್ಥಿತಿಯ ಕಾರಣದಿಂದಾಗಿ ಕಳಂಕವನ್ನು ಅನುಭವಿಸುತ್ತಾರೆ.

# ಚುನಾವಣಾ ಪ್ರಚಾರ ವೇಳೆ ವೇದಿಕೆ ಕುಸಿದು 9 ಸಾವು

ಚುನಾವಣಾ ಪ್ರಚಾರ ವೇಳೆ ಬೃಹತ್ ಸುಂಟರಗಾಳಿಗೆ ವೇದಿಕೆ ಕುಸಿದು 9 ಮಂದಿ ಸಾವನಪ್ಪಿದ್ದು ಹಲವರು ಗಾಯಗೊಂಡಿರುವ ಭಯಾನಕ ಘಟನೆ ಮೆಕ್ಸಿಕೋದಲ್ಲಿ ನಡೆದಿದೆ.ಮೆಕ್ಸಿಕನ್ ಅಧ್ಯಕ್ಷೀಯ ಚುನಾವಣೆಯ



ಪ್ರಚಾರದ ವೇಳೆ ಈ ಅವಾಂತರ ನಡೆದಿದೆ. ಉತ್ತರ ಮೆಕ್ಸಿಕನ್ ರಾಜ್ಯದ ನ್ಯೂವೊ ಲಿಯಾನ್ನಲ್ಲಿ ಈ ಘಟನೆ ನಡೆದಿದೆ. ಇದೀಗ ಈ ಭಯಾನಕ ಘಟನೆಯ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದ್ದು ,ಬೆಚ್ಚಿ ಬೀಳಿಸುವಂತಿದೆ. ಮೆಕ್ಸಿಕೋದ ಅಧ್ಯಕ್ಷೀಯ ಚುನಾವಣೆಯ ಅಭ್ಯರ್ಥಿಯಾದ ಜಾರ್ಜ್ ಅಲ್ವಾರೆಜ್ ಮೈನೆಜ್ ಅವರು ಚುನಾವಣಾ ಭಾಷಣ ಮಾಡುತ್ತಿದ್ದ ವೇಳೆ ಈ ಅವಘಡ ಸಂಭವಿಸಿದ್ದು, ಇದ್ದಕಿದ್ದಂತೆ ಸುಂಟರಗಾಳಿ ಬೀಸಿದ್ದು ವೇದಿಕೆ ಕುಸಿದಿದ್ದು ಈ ವೇಳೆ ಜಾರ್ಜ್ ಮತ್ತು ವೇದಿಕೆಯಲ್ಲಿದ್ದವರು ರಕ್ಷಿಸಿಕೊಳ್ಳಲು ಓಡುವುದನ್ನು ವಿಡಿಯೋದಲ್ಲಿ ಗಮನಿಸಬಹುದು. ಗಾಳಿಯ ರಭಸಕ್ಕೆ ನಾವಿದ್ದ ವೇದಿಕೆಯು ಕುಸಿದು ಬಿದ್ದಿದೆ. ನಾನು ಸುರಕ್ಷಿತನಾಗಿದ್ದೇನೆ. ಆದರೆ ಈ ಘಟನೆಯಲ್ಲಿ ಮಡಿದವರಿಗೂ ಮತ್ತು ಗಾಯಗೊಂಡವರಿಗೂ ನಾನು ಸಂತಾಪ ಸೂಚಿಸುತ್ತೇನೆ ಎಂದಿದ್ದಾರೆ. ಅಧ್ಯಕ್ಷೀಯ ಅಭ್ಯರ್ಥಿ ಜಾರ್ಜ್ ಅಲ್ವಾರೆಜ್ ಮೈನೆಜ್ ಅವರು ಘಟನೆಯ ಬಳಿಕ ಟ್ವಿಟ್ ಮಾಡಿದ್ದಾರೆ.

# ಹೆಚ್ಚುತ್ತಿದೆ BORG ಮದ್ಯ ಸೇವನೆ ಟ್ರೆಂಡ್

**ನವದೆಹಲಿ:** ಜೆನ್-ಜಿ ಕಾಲೇಜು ವಿದ್ಯಾರ್ಥಿಗಳು ಅಪಾಯಕಾರಿ ಬೋರ್ಗ್ (ಬೋರ್ಗ್) ಮದ್ಯವನ್ನು ಸೇವಿಸುವ ಪ್ರವೃತ್ತಿಯ ಬಗ್ಗೆ ಆರೋಗ್ಯ ತಜ್ಞರು ಎಚ್ಚರಿಕೆ ನೀಡಿದ್ದಾರೆ. ಬೋರ್ಗ್ ಅನ್ನು ಬ್ಲ್ಯಾಕೌಟ್ ರೇಜ್ ಗ್ಯಾಲೆನ್ ಎಂದೂ ಕರೆಯಲಾಗುತ್ತದೆ.

ಬೋರ್ಗ್ ಮದ್ಯವು ಸಾಮಾನ್ಯವಾಗಿ ಹಗಲಿನ ಪಾರ್ಟಿಗಳಲ್ಲಿ ನಡೆಯುತ್ತದೆ, ಇದನ್ನು ಜನಪ್ರಿಯವಾಗಿ ಡಾರ್ಟೈಟ್ಸ್ ಎಂದು ಕರೆಯಲಾಗುತ್ತದೆ, ಇದರಲ್ಲಿ ಭಾಗವಹಿಸುವವರು ಶಕ್ತಿಯುತ ಆಲ್ಕೋಹಾಲ್ ಮಿಶ್ರಣದೊಂದಿಗೆ ಗ್ಯಾಲನ್ ಗಾತ್ರದ ಪ್ಲಾಸ್ಟಿಕ್ ಜಗ್ ಅನ್ನು ಒಳಗೆ ಕೊಂಡೊಯ್ಯುತ್ತಾರೆ. ವೋಡ್ಕಾ ಅಥವಾ ಇತರ ಕೆಲವು ಡಿಸ್ಟಿಲ್ಡ್ ಆಲ್ಕೋಹಾಲ್ ಮತ್ತು ನೀರು, ಪರಿಮಳ ವರ್ಧಕ ಮತ್ತು ಎಲೆಕ್ಟ್ರೋಲೈಟ್ ಪುಡಿ ಅಥವಾ ಪಾನೀಯವನ್ನು ಒಳಗೊಂಡಿರುವ ಜಗ್ ಸಾಮಾನ್ಯವಾಗಿ ಇತರ ಪದಾರ್ಥಗಳಿಗಿಂತ ಹೆಚ್ಚಿನ ಆಲ್ಕೋಹಾಲ್ ಅನ್ನು ಹೊಂದಿರುತ್ತದೆ,



ಆದ್ದರಿಂದ ತಜ್ಞರು ಇದನ್ನು ಮಾರಣಾಂತಿಕ ಎಂದು ಕರೆದಿದ್ದಾರೆ.

ಮದ್ಯಪಾನವು ಮಾರಣಾಂತಿಕ ಸೇವನೆ ಮತ್ತು ಆಲ್ಕೋಹಾಲ್ ವಿಷಕ್ಕೆ ಕಾರಣವಾಗಬಹುದು ಎಂದು ಸ್ಟ್ಯಾನ್ಫೋರ್ಡ್ ಮನೋವೈದ್ಯಕೀಯ ಮತ್ತು ವ್ಯಸನ ಔಷಧ ಪ್ರಾಧ್ಯಾಪಕ ಡಾ.ಅನ್ನಾ ಲೆಮ್ಕೆ ಸಿಎನ್ಎನ್ಗೆ ತಿಳಿಸಿದರು. ಬೋರ್ಗ್ ಸಾಮಾನ್ಯವಾಗಿ ಐದನೇ ಒಂದು 25.6 ದ್ರವ ಔನ್ಸ್ ಅಥವಾ 3.2 ಕಪ್ ವೋಡ್ಕಾ ಅಥವಾ ಇತರ ಕಠಿಣ ಆಲ್ಕೋಹಾಲ್ ಅನ್ನು ಹೊಂದಿರುತ್ತದೆ, ಇದು ಸುಮಾರು 17 ಪ್ರಮಾಣಿತ ಪಾನೀಯಗಳು, ಇದು ಭಾರಿ ಪ್ರಮಾಣದ ಆಲ್ಕೋಹಾಲ್ ಆಗಿದೆ ಎಂದು ಡಾ. ಟಿಕ್ ಟಾಕ್ ನಂತಹ ಸಾಮಾಜಿಕ ಮಾಧ್ಯಮಗಳ ವ್ಯಾಪಕತೆಯಿಂದ ಹದಗೆಟ್ಟಿರುವ ಸಾಮಾಜಿಕ ಸಾಂಕ್ರಾಮಿಕ ರೋಗಕ್ಕೆ ಬೋರ್ಗ್ ಕುಡಿತದ ಹರಡುವಿಕೆಯೇ ಕಾರಣ ಎಂದು ಡಾ.ಲೆಂಬ್ಕೆ ಹೇಳುತ್ತಾರೆ.

# ಹಮಾಸ್ ಥೀಮ್ ಬರ್ತ್ಡೇ ಕೇಕ್ : ಆಸ್ಟ್ರೇಲಿಯಾದಲ್ಲಿ ಕಿಡಿ ಹೊತ್ತಿಸಿದ ಬೇಕರಿ

**ಆಸ್ಟ್ರೇಲಿಯಾ :** ಇಲ್ಲಿನ ಸಿಡ್ನಿಯಲ್ಲಿರುವ ಬೇಕರಿಯೊಂದು ತಯಾರಿಸಿದ ಕೇಕ್ ಆಸ್ಟ್ರೇಲಿಯಾದಲ್ಲಿ ತೀವ್ರ ವಿವಾದಕ್ಕೆ ಕಾರಣವಾಗಿದೆ. ಆಸ್ಟ್ರೇಲಿಯಾದ ಸಿಡ್ನಿಯಲ್ಲಿರುವ ಬೇಕರಿಯೊಂದು ಪ್ಯಾಲೇಸ್ಟಿನಿಯನ್ ಭಯೋತ್ಪಾದಕ ಗುಂಪು ಹಮಾಸ್ ಬೆಂಬಲಿಸುವಂತಹ ಕೇಕ್ ಸಿದ್ಧಪಡಿಸಿತ್ತು. ನಾಲ್ಕು ವರ್ಷದ ಪುಟ್ಟ ಬಾಲಕನ ಹುಟ್ಟುಹಬ್ಬಕ್ಕಾಗಿ ಈ ರೀತಿಯ ಕೇಕ್ ರೆಡಿ ಮಾಡಿತ್ತು. ಈ ಕೇಕ್ನ್ನು ಪ್ಯಾಲೇಸ್ಟಿನಿಯನ್ ಧ್ವಜದಿಂದ ಅಲಂಕರಿಸಲಾಗಿತ್ತು. ಈ ಕೇಕ್ನೊಂದಿಗೆ ಆ ಪುಟ್ಟ ಬಾಲಕ ನಿಂತಿರುವ ಫೋಟೋವನ್ನು ಬೇಕರಿ ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಂಡಿತ್ತು. ಈ ಫೋಟೋಗಳು ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗುತ್ತಿದ್ದಂತೆ ತೀವ್ರ ವಿವಾದಕ್ಕೆ ಕಾರಣವಾಗಿದೆ. ಆರಂಭದಲ್ಲಿ ಬೇಕರಿಯು ಕೇಕ್ ಸಿದ್ಧಪಡಿಸಿದ್ದಕ್ಕಾಗಿ ಪ್ರಶಂಸೆ ಪಡೆಯಿತು. ಆದರೆ, ನಂತರ ದೊಡ್ಡ ಆಕ್ರೋಶವನ್ನೇ ಎದುರಿಸಬೇಕಾಯಿತು. ಸೋಷಿಯಲ್ ಮೀಡಿಯಾದಲ್ಲಿ ತೀವ್ರ ಟೀಕೆಗಳು ವ್ಯಕ್ತವಾಗುತ್ತಿದ್ದಂತೆ ಫೋಟೋಗಳನ್ನು ಬೇಕರಿ ಡಿಲೀಟ್ ಮಾಡಿದೆ. ಅದಾಗ್ಯೂ ಕೂಡ ಬೇಕರಿ ವಿರುದ್ಧ ಪ್ರಕರಣ ದಾಖಲಾಗಿದ್ದು, ತನಿಖೆ ನಡೆಯುತ್ತಿದೆ.

# ರಾಜಿನಾಮೆ ಕೊಟ್ಟರೆ, ವಿರೋಧ ಪಕ್ಷಗಳನ್ನು ಗುರಿಯಾಗಿಸಲು ಬಿಜೆಪಿಗೆ ಮುಕ್ತ ಹಸ್ತ ನೀಡಿದಂತೆ

**ನವದೆಹಲಿ:** ನಾನು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡುವುದಿಲ್ಲ. ಏಕೆಂದರೆ ಅದು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಮತ್ತು ತಮಿಳುನಾಡು ಮುಖ್ಯಮಂತ್ರಿ ಎಂಕೆ ಸ್ಟಾಲಿನ್ ಸೇರಿದಂತೆ ಪ್ರತಿಪಕ್ಷಗಳ ಮುಖ್ಯಮಂತ್ರಿಗಳನ್ನು ಗುರಿಯಾಗಿಸಲು ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರಕ್ಕೆ ಮುಕ್ತ ಹಸ್ತ ನೀಡಿದಂತೆ ಮತ್ತು ಇದು ಪ್ರಜಾಪ್ರಭುತ್ವಕ್ಕೆ ಅತ್ಯಂತ ಅಪಾಯಕಾರಿ ಎಂದು ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರು ಗುರುವಾರ ಹೇಳಿದ್ದಾರೆ.

ಜೂನ್ 1 ರಂದು ಮಧ್ಯಂತರ ಜಾಮೀನು ಅಂತ್ಯಗೊಂಡ ನಂತರ ತಿಹಾರ್ ಜೈಲಿಗೆ ಹಿಂತಿರುಗಬೇಕಾದ ಕೇಜ್ರಿವಾಲ್ ಅವರು, ಜೈಲಿನಿಂದ ದೆಹಲಿ ಮುಖ್ಯಮಂತ್ರಿಯಾಗಿ ತಮ್ಮ ಕರ್ತವ್ಯಗಳನ್ನು ಪೂರೈಸಲು ಅನುಮತಿ ಕೋರಿ ಕೋರ್ಟ್ ಮೆಟ್ಟಿಲೇರುವುದಾಗಿ ಪಿಟಿಐಗೆ ನೀಡಿದ ಸಂದರ್ಶನದಲ್ಲಿ ಕೇಜ್ರಿವಾಲ್ ತಿಳಿಸಿದ್ದಾರೆ.

ಎಎಪಿ ರಾಷ್ಟ್ರೀಯ ಸಂಚಾಲಕರರಾಗಿರುವ ಅರವಿಂದ್ ಕೇಜ್ರಿವಾಲ್ ಅವರನ್ನು ದೆಹಲಿ ಅಬಕಾರಿ ನೀತಿ ಸಂಬಂಧ ಮಾರ್ಚ್ 21 ರಂದು ಜಾರಿ ನಿರ್ದೇಶನಾಲಯ ಬಂಧಿಸಿತ್ತು.

ಆದಾಯ ತೆರಿಗೆ ಆಯುಕ್ತ ಹುದ್ದೆಗೆ ರಾಜೀನಾಮೆ ನೀಡಿದ ನಂತರ ನಾನು ದೆಹಲಿಯ ಕೊಳೆಗೇರಿಯಲ್ಲಿ ಕೆಲಸ ಮಾಡಿದ್ದೇನೆ. ನಾನು ಮೊದಲ ಬಾರಿ ದೆಹಲಿಯ ಮುಖ್ಯಮಂತ್ರಿಯಾದ ನಂತರ 49 ದಿನಗಳಲ್ಲಿ (2013 ರಲ್ಲಿ) ಅಧಿಕಾರದಿಂದ ಕೆಳಗಿಳಿದಾಗ ಯಾರೂ ನನ್ನ ರಾಜೀನಾಮೆ ಕೇಳಲಿಲ್ಲ. ಮುಖ್ಯಮಂತ್ರಿ ಗಾದಿ ಅಲ್ಲ ಯಾರೂ ಫ್ಯಾನ್ ಕೆಲಸ ಸಹ ಬಿಟ್ಟುಕೊಡುವುದಿಲ್ಲ. ಆದರೆ ನಾನು ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಿದೆ' ಎಂದರು.

ನಾನು ಈ ಬಾರಿ ಉದ್ದೇಶಪೂರ್ವಕವಾಗಿ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡುವುದಿಲ್ಲ. ಇದು ನನ್ನ ಹೋರಾಟದ ಭಾಗವಾಗಿದೆ ಎಂದು ದೆಹಲಿ ಸಿಎಂ ಹೇಳಿದ್ದಾರೆ.

ಆಮ್ ಆದ್ಮಿ ಪಕ್ಷವು 67 ಅಸೆಂಬ್ಲಿ ಸ್ಥಾನಗಳನ್ನು (2015 ರಲ್ಲಿ) ಮತ್ತು 62 ಸ್ಥಾನಗಳನ್ನು (2020 ರಲ್ಲಿ) ಪಡೆದುಕೊಂಡಿದೆ ಎಂದು ಹೇಳಿದ ಕೇಜ್ರಿವಾಲ್, ದೆಹಲಿ ಚುನಾವಣೆಯಲ್ಲಿ ಎಎಪಿಯನ್ನು ಸೋಲಿಸಲು ಸಾಧ್ಯವಾಗಿಲ್ಲ. ಹೀಗಾಗಿ ಪ್ರಧಾನಿ ನರೇಂದ್ರ ಮೋದಿ, ನನ್ನನ್ನು ಬಂಧಿಸಲು ಸಂಚು ರೂಪಿಸಿದ್ದಾರೆ ಎಂದು ಆರೋಪಿಸಿದರು.

ನಾನು ರಾಜೀನಾಮೆ ನೀಡುತ್ತೇನೆ ಮತ್ತು ನನ್ನ ಸರ್ಕಾರ ಉರುಳುತ್ತದೆ ಎಂದು ಭಾವಿಸಿ ಅವರು ನನ್ನನ್ನು ಬಂಧಿಸಿದರು. ಆದರೆ ಅವರ ಸಂಚು ಯಶಸ್ವಿಯಾಗಲು ನಾನು ಬಿಡುವುದಿಲ್ಲ. ಈ ಸಂಪೂರ್ಣ ಪ್ರಕರಣ(ಅಬಕಾರಿ ಹಗರಣ) ನಕಲಿ ಪ್ರಕರಣವಾಗಿದೆ ಎಂದಿದ್ದಾರೆ.

ನಾನೇನಾದರೂ ತಪ್ಪು ಮಾಡಿ ಹಣ ಪಡೆದಿದ್ದರೆ ಒಳಗಿನಿಂದ ತುಂಬಾ ಬಲಹೀನವಾಗಿರುತ್ತಿದ್ದೆ ಮತ್ತು ಬಹುಶಃ ಬಿಜೆಪಿಗೆ ಹೋಗುತ್ತಿದ್ದೆ ಮತ್ತು ನನ್ನ ಪಾಪಗಳೆಲ್ಲವೂ ಕ್ಷಮಿಸಲ್ಪಡುತ್ತಿದ್ದವು ಎಂದು ಕೇಜ್ರಿವಾಲ್ ಹೇಳಿದ್ದಾರೆ.

ತಮ್ಮನ್ನು ಬಲವಂತವಾಗಿ ಜೈಲಿನಲ್ಲಿ ಇರಿಸಲಾಗಿದೆ ಎಂದು ಪ್ರತಿಪಾದಿಸಿದ ಕೇಜ್ರಿವಾಲ್, ನಾನು ರಾಜೀನಾಮೆ ನೀಡಿದರೆ, ಪಶ್ಚಿಮ ಬಂಗಾಳದ ಸಿಎಂ ಮಮತಾ ಬ್ಯಾನರ್ಜಿಯನ್ನು ಅವರು ಒಂದು ದಿನ ಬಂಧಿಸಿ ರಾಜೀನಾಮೆ ನೀಡುವಂತೆ ಕೇಳುತ್ತಾರೆ. ಅವರು ತಮಿಳುನಾಡು ಮುಖ್ಯಮಂತ್ರಿ ಸ್ಟಾಲಿನ್ ಅವರನ್ನು ಸಹ ಬಂಧಿಸಿ ರಾಜೀನಾಮೆ ನೀಡುವಂತೆ ಮಾಡುತ್ತಾರೆ. ಇದು ಪ್ರತಿಪಕ್ಷಗಳ ಮುಖ್ಯಮಂತ್ರಿಗಳ ಬಂಧನಕ್ಕೆ ಬಿಜೆಪಿಗೆ ಮುಕ್ತ ಹಸ್ತ ನೀಡಿದಂತೆ. ಬಿಜೆಪಿ ಚುನಾವಣೆಯಲ್ಲಿ ಸೋತಲ್ಲೆಲ್ಲಾ, ಪ್ರತಿಪಕ್ಷಗಳ ಆಡಳಿತವಿರುವ ರಾಜ್ಯಗಳ ಮುಖ್ಯಮಂತ್ರಿಗಳನ್ನು ಬಂಧಿಸಲಾಗುತ್ತದೆ ಮತ್ತು ನಂತರ ಅವರ ಸರ್ಕಾರಗಳನ್ನು ಉರುಳಿಸಲಾಗುತ್ತದೆ. ಇದು ಪ್ರಜಾಪ್ರಭುತ್ವಕ್ಕೆ ತುಂಬಾ ಅಪಾಯಕಾರಿ ಎಂದು ಹೇಳಿದರು.

**ಹರಿಯಾಣದ ಅಂಬಾಲಾದಲ್ಲಿ ಶುಕ್ರವಾರ ನಸುಕಿನ ವೇಳೆ ಟ್ರಕ್ ಒಂದು ಮಿನಿ ಬಸ್ ಗೆ ಡಿಕ್ಕಿ ಹೊಡೆದ ಪರಿಣಾಮ ಕನಿಷ್ಠ ಏಳು ಜನರು ಸಾವನ್ನಪ್ಪಿದ್ದಾರೆ ಮತ್ತು ಸುಮಾರು 25 ಜನರು ಗಾಯಗೊಂಡಿದ್ದಾರೆ.**

## ವೈಷ್ಣೋದೇವಿ ದರ್ಶನಕ್ಕೆ ತೆರಳುತ್ತಿದ್ದ ಮಿನಿ ಬಸ್ ಗೆ ಟ್ರಕ್ ಡಿಕ್ಕಿ

# ಒಂದೇ ಕುಟುಂಬದ 7 ಮಂದಿ ಸಾವು

**ಹರ್ಯಾಣ:** ಹರಿಯಾಣದ ಅಂಬಾಲಾದಲ್ಲಿ ಶುಕ್ರವಾರ ನಸುಕಿನ ವೇಳೆ ಟ್ರಕ್ ಒಂದು ಮಿನಿ ಬಸ್ ಗೆ ಡಿಕ್ಕಿ ಹೊಡೆದ ಪರಿಣಾಮ ಕನಿಷ್ಠ ಏಳು ಜನರು ಸಾವನ್ನಪ್ಪಿದ್ದಾರೆ ಮತ್ತು ಸುಮಾರು 25 ಜನರು ಗಾಯಗೊಂಡಿದ್ದಾರೆ.

ಅಂಬಾಲಾ-ದೆಹಲಿ-ಜಮ್ಮು ರಾಷ್ಟ್ರೀಯ ಹೆದ್ದಾರಿಯಲ್ಲಿ ಈ ಅಪಘಾತ ಸಂಭವಿಸಿದ್ದು, ವೈಷ್ಣೋದೇವಿಗೆ ಯಾತ್ರಾರ್ಥಿಗಳನ್ನು ಕರೆದೊಯ್ಯುತ್ತಿದ್ದ ಮಿನಿ ಬಸ್ ಗೆ ಟ್ರಕ್ ಡಿಕ್ಕಿ ಹೊಡೆದಿದೆ.

ಅಪಘಾತದಲ್ಲಿ ಒಂದೇ ಕುಟುಂಬದ ಏಳು ಸದಸ್ಯರು ಸಾವನ್ನಪ್ಪಿದ್ದಾರೆ ಮತ್ತು 25 ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. ಅಪಘಾತದ ನಂತರ ಚಾಲಕ ಕುಡಿದು ಸ್ಥಳದಿಂದ ಪರಾರಿಯಾಗಿದ್ದಾನೆ ಎಂದು ಅಪಘಾತದಲ್ಲಿ ಬದುಕುಳಿದವರು ತಿಳಿಸಿದ್ದಾರೆ. ಅಪಘಾತ ಸಂಭವಿಸಿದಾಗ ಬಸ್ಸಿನಲ್ಲಿದ್ದ ಎಲ್ಲಾ ಪ್ರಯಾಣಿಕರು ನಿದ್ರೆಯಲ್ಲಿದ್ದರು, ಮೃತರೆಲ್ಲಾ ಒಂದೇ ಕುಟುಂಬಕ್ಕೆ ಸೇರಿದವರು ಎಂದು ಅವರು ಹೇಳಿದ್ದಾರೆ.




# ಗಾಜಾ ಪಟ್ಟಿಯ ಮೇಲೆ ಇಸ್ರೇಲ್ ಪಡೆಗಳಿಂದ ವೈಮಾನಿಕ ದಾಳಿ: 38 ಸಾವು

**ಕೈರೋ:** ಇಸ್ರೇಲಿ ಪಡೆಗಳು ಗುರುವಾರ ಗಾಜಾ ಪಟ್ಟಿಯಾದ್ಯಂತ ವೈಮಾನಿಕ ಮತ್ತು ನೆಲದ ಬಾಂಬ್ ದಾಳಿಯಲ್ಲಿ ಕನಿಷ್ಠ 38 ಪ್ಯಾಲೆಸ್ಟೀನಿಯನ್ನರನ್ನು ಕೊಂದಿವೆ ಮತ್ತು ದಕ್ಷಿಣ ನಗರವಾದ ರಫಾದ ಪ್ರದೇಶಗಳಲ್ಲಿ ಹಮಾಸ್ ನೇತೃತ್ವದ ಉಗ್ರಗಾಮಿಗಳೊಂದಿಗೆ ನಿಕಟ ಯುದ್ಧದಲ್ಲಿ ಹೋರಾಡಿದೆ ಎಂದು ಆರೋಗ್ಯ ಅಧಿಕಾರಿಗಳು ಮತ್ತು ಹಮಾಸ್ ಮಾಧ್ಯಮಗಳು ತಿಳಿಸಿವೆ. ಇಸ್ರೇಲಿ ಟ್ಯಾಂಕ್ಗಳು ರಾಫಾದ ಆಗ್ನೇಯದಲ್ಲಿ ಮುಂದುವರೆದವು, ನಗರದ ಪಶ್ಚಿಮ ಜಿಲ್ಲೆಯ ಯಿಬ್ನಾ ಕಡೆಗೆ ಅಂಚಿಗೆ ಬಂದು ಮೂರು ಪೂರ್ವ ಉಪನಗರಗಳಲ್ಲಿ ಕಾರ್ಯನಿರ್ವಹಿಸುವುದನ್ನು ಮುಂದುವರೆಸಿದೆ ಎಂದು ನಿವಾಸಿಗಳು ತಿಳಿಸಿದ್ದಾರೆ. ಆಕ್ರಮಣವು (ಇಸ್ರೇಲಿ ಪಡೆಗಳು) ಪಶ್ಚಿಮಕ್ಕೆ ಮತ್ತಷ್ಟು ಚಲಿಸಲು ಪ್ರಯತ್ನಿಸುತ್ತಿದೆ. ಅವರು ಯಿಬ್ನಾದ ಅಂಚಿನಲ್ಲಿದ್ದಾರೆ. ಇದು ಜನನಿಬಿಡವಾಗಿದೆ. ಅವರು ಇನ್ನೂ ಅದನ್ನು ಆಕ್ರಮಿಸಿಲ್ಲ ಎಂದು ಹೆಸರೇಳದ ಒಬ್ಬ ನಿವಾಸಿ ಹೇಳಿದರು. ನಾವು ಸ್ಫೋಟಗಳನ್ನು ಕೇಳುತ್ತೇವೆ ಮತ್ತು ಸೇನೆಯು ಆಕ್ರಮಣ ಮಾಡಿದ ಪ್ರದೇಶಗಳಿಂದ ಕಪ್ಪು ಹೊಗೆ ಬರುವುದನ್ನು ನಾವು ನೋಡುತ್ತೇವೆ. ಇದು ಮತ್ತೊಂದು ಅತ್ಯಂತ ಕಷ್ಟಕರವಾದ ರಾತ್ರಿ, ಎಂದು ಅವರು ಚಾಟ್ ಅಪ್ಲಿಕೇಶನ್ ಮೂಲಕ ರಾಯಿಟರ್ಸ್ಗೆ ತಿಳಿಸಿದರು.




# ಆಸ್ಟ್ರೇಲಿಯಾಕ್ಕೆ ಕಾಲಿಟ್ಟ ಹಕ್ಕಿಜ್ವರ

ತಮ್ಮ ದೇಶಕ್ಕೆ ಆಗಮಿಸಿದ ಮಗುವೊಂದರಲ್ಲಿ ಹಕ್ಕಿಜ್ವರ ಪತ್ತೆಯಾಗಿದೆ ಎಂದು ಆಸ್ಟ್ರೇಲಿಯಾ ಹೇಳಿದೆ.

ಇದು ಮಾನವನಲ್ಲಿ ಹಕ್ಕಿಜ್ವರ ಕಾಣಿಸಿಕೊಂಡ ದೇಶದ ಮೊದಲ ಪ್ರಕರಣವಾಗಿದೆ. ಮಗುವಿಗೆ ಸೂಕ್ತ ಚಿಕಿತ್ಸೆ ನೀಡಲಾಗಿದ್ದು, ಈಗ ಸಂಪೂರ್ಣ ಗುಣಮುಖವಾಗಿದೆ ಎಂದು ವಿಕ್ಟೋರಿಯಾದ ಆರೋಗ್ಯ ಇಲಾಖೆ ಸಾಮಾಜಿಕ ಜಾಲತಾಣ ಎಕ್ಸ್ನಲ್ಲಿ ಮಾಹಿತಿ ನೀಡಿದೆ.

ಮಾರ್ಚ್ನಲ್ಲಿ ಮಗುವಿಗೆ ಅನಾರೋಗ್ಯ ಉಂಟಾಗಿತ್ತು. ಈ ಸೋಂಕು ಸುಲಭವಾಗಿ ಹರಡುವುದಿಲ್ಲ. ಹೀಗಾಗಿ ಸೋಂಕು ವ್ಯಾಪಿಸಿರುವ ಬಗ್ಗೆ ಯಾವುದೇ ಪುರಾವೆಗಳಿಲ್ಲ ಎಂದೂ ಅದು ಹೇಳಿದೆ. ಮಗು ಯಾವ ದೇಶದಿಂದ ಆಗಮಿಸಿದೆ ಎಂಬುದನ್ನು ಮಾತ್ರ ಆಸ್ಟ್ರೇಲಿಯಾ ಬಹಿರಂಗಪಡಿಸಿಲ್ಲ.



# ಒಂದು ವರ್ಷದ ಮಗು ಹೃದಯಾಘಾತಕ್ಕೆ ಬಲಿ

**ವಾಷಿಂಗ್ಟನ್:** ಜನ್ಮ ಕೊಟ್ಟ ತಾಯಿಯ ಎದುರೇ 1 ವರ್ಷದ ಮಗು ಸಾವನ್ನಪ್ಪಿರುವ ಘಟನೆ ಅಮೆರಿಕಾದಲ್ಲಿ ಓಹಿಯೋದಲ್ಲಿ ನಡೆದಿದೆ. ಕಳೆದ ಮೇ 5ರಂದು ಕರೀಂ ಕೀಟಾ ಅನ್ನೋ ಬಾಲಕನ ಶವ ಮನೆಯಲ್ಲಿ ಪತ್ತೆಯಾಗಿದೆ. ಈ ಬಗ್ಗೆ ತನಿಖೆ ನಡೆಸಿರುವ ಪೊಲೀಸರು 23 ವರ್ಷದ ಎಡ್ವರ್ಡ್ ಮುರ್ರೆ ಎಂಬ ವ್ಯಕ್ತಿಯನ್ನು ಬಂಧಿಸಿದ್ದಾರೆ. ಆರೋಪಿಯ ವಿಚಾರಣೆ ನಡೆಸಿದಾಗ ಮಗುವಿನ ಸಾವಿಗೆ ಅಸಲಿ ಕಾರಣ ಏನು ಅನ್ನೋದು ಪತ್ತೆಯಾಗಿದೆ. 1 ವರ್ಷದ ಕರೀಂ ಕೀಟಾ ಎಂಬ ಮಗು ತನ್ನ ತಾಯಿ ಜೊತೆ ವಾಸವಿತ್ತು. ತಾಯಿ ಅಮೀನತಾ ಕೀಟಾಗೆ 3 ತಿಂಗಳ ಹಿಂದಷ್ಟೇ ಎಡ್ವರ್ಡ್ ಮುರ್ರೆ ಪರಿಚಯವಾಗಿದೆ. ಬಾಯ್ ಫ್ರೆಂಡ್ ಎಡ್ವರ್ಡ್ ಮುರ್ರೆ ಅಮೀನತಾ ಮನೆಗೆ ಹೋಗಿದ್ದಾನೆ. ಆಗ ಕರೀಂ ಕೀಟಾಗೆ ಊಟ ಮಾಡಿಸಲು ಪ್ರಯತ್ನಿಸಿದ್ದಾನೆ. ಊಟ ಮಾಡಲು ಮಗು ಹಠ ಮಾಡಿದ್ದರಿಂದ ರಕ್ತ ಬರುವಂತೆ ಹೊಡೆದಿದ್ದಾನೆ. ಜೋರಾದ ಹೊಡೆತಕ್ಕೆ ನಲುಗಿದ ಕರೀಂ ಮಗುವಿಗೆ ಗಂಭೀರ ಗಾಯಗಳಾಗಿದ್ದು, ತೀವ್ರ ರಕ್ತಸ್ರಾವದ ಜೊತೆಗೆ ಹೃದಯಾಘಾತದಿಂದ ಮಗು ಸಾವನ್ನಪ್ಪಿದೆ ಎಂದು ಹೇಳಲಾಗಿದೆ. ಮಗು ಹೃದಯಾಘಾತದಿಂದ ಸಾವನ್ನಪ್ಪಿದ್ದರೂ ಹೊಡೆದ ವ್ಯಕ್ತಿಯನ್ನು ಕೊಲೆ ಮಾಡಿದ ಆರೋಪದಲ್ಲಿ ಪೊಲೀಸರು ಬಂಧಿಸಿದ್ದಾರೆ.

# ಮಹಿಳಾ ಸೈನಿಕರಿಗೆ ಚಿತ್ರಹಿಂಸೆ!

**ಇಸ್ರೇಲ್:** ಐವರು ಮಹಿಳಾ ಇಸ್ರೇಲಿ ಸೈನಿಕರನ್ನು ಹಮಾಸ್ ಭಯೋತ್ಪಾದಕರು ಅಪಹರಿಸಿ ಚಿತ್ರಹಿಂಸೆ ಕೊಟ್ಟಿರುವ ವಿಡಿಯೋ ಸಾಮಾಜಿಕ ತಾಣದಲ್ಲಿ ವೈರಲ್ ಆಗಿದೆ. ಸಾಮಾಜಿಕ ಜಾಲತಾಣದಲ್ಲಿ ಬಿಡುಗಡೆಯಾಗಿರುವ ವಿಡಿಯೋದಲ್ಲಿ ಐದು ಮಹಿಳೆಯರು, ಇನ್ನೂ ಕೆಲವರು ತಮ್ಮ ಪೈಜಾಮಾದಲ್ಲಿ ಹಮಾಸ್ ಭಯೋತ್ಪಾದಕರು ಗೋಡೆಯ ವಿರುದ್ಧ ಸಾಲಾಗಿ ನಿಲ್ಲಿಸಿದ್ದಾರೆ. ಅವರ ಕೈಗಳನ್ನು ಹಗ್ಗದಿಂದ ಕಟ್ಟಿ ಹಾಕಲಾಗಿದ್ದು ಕೆಲವರ ಮುಖದ ಮೇಲೆ ಆಗಿರುವ ಗಾಯಗಳಿಂದ ರಕ್ತ ಹೊರಬರುತ್ತಿರುವ ದೃಶ್ಯ ಕಂಡುಬಂದಿದೆ. ಒಬ್ಬ ಭಯೋತ್ಪಾದಕನು ಮಹಿಳೆಯರನ್ನು ತೋರಿಸುತ್ತಾ 'ಇಲ್ಲಿ ಹುಡುಗಿಯರು, ಮಹಿಳೆಯರು, ಗರ್ಭಿಣಿಯಾಗಬಹುದು ಹಾಗೂ ಇವರೇ ಜಿಯೋನಿಸ್ಟ್ಗಳು ಎಂದು ಹೇಳಿದ್ದಾರೆ.

# ಮೋದಿಗೆ ಗೆಲುವು ಖಚಿತ : ಭವಿಷ್ಯ ನುಡಿದ ಇಯಾನ್ ಬ್ರೆಮ್ಮರ್

**ಅಮೇರಿಕಾ :** ದೇಶದಲ್ಲಿ ಈಗಾಗಲೇ ಐದು ಹಂತಗಳ ಲೋಕಸಭಾ ಚುನಾವಣೆಯ ಮತದಾನ ಮುಕ್ತಾಯಗೊಂಡಿದ್ದು ಕೇವಲ ಇನ್ನೆರೆಡು ಹಂತಗಳ ಚುನಾವಣೆ ಬಾಕಿ ಉಳಿದಿದೆ. ಒಂದೆಡೆ ರಾಹುಲ್ ಗಾಂಧಿ ನೇತೃತ್ವದ ಕಾಂಗ್ರೆಸ್ ಕೇಂದ್ರದಲ್ಲಿ ತನ್ನದೇ ಅಧಿಕಾರ ಎಂಬ ಭರವಸೆಯಲ್ಲಿದೆ.



ಇತ್ತ ಎನ್ಡಿಎ ಸರ್ಕಾರ ಈ ಬಾರಿ ಮತ್ತೊಮ್ಮೆ ಅಧಿಕಾರಕ್ಕೆ ಬರಲಿದೆ, ಮಗಹದೊಮ್ಮೆ ನರೇಂದ್ರ ಮೋದಿ ಅವರೇ ಪ್ರಧಾನಿಯಾಗಿ ಕೇಂದ್ರದಲ್ಲಿ ಸರ್ಕಾರ ಮುಂದುವರೆಸಲಿದ್ದಾರೆ ಎಂದು ಬಿಜೆಪಿ ಭರವಸೆ ವ್ಯಕ್ತಪಡಿಸಿದೆ. ಸದ್ಯ ಇದೆಲ್ಲದರ ನಡುವೆ ಅಮೇರಿಕಾ ರಾಜಕೀಯ ತಜ್ಞ ಇಯಾನ್ ಬ್ರೆಮ್ಮರ್, ಮೋದಿ ಗೆಲುವಿನ ಬಗ್ಗೆ ಭವಿಷ್ಯ ನುಡಿದಿದ್ದಾರೆ. ಭಾರತದಲ್ಲಿ ನಡೆಯುತ್ತಿರುವ ಲೋಕಸಭಾ ಚುನಾವಣೆಯಲ್ಲಿ 215 ರಿಂದ 315 ಸ್ಥಾನಗಳನ್ನು ಬಿಜೆಪಿ ಗೆಲ್ಲಲಿದೆ. ಮತ್ತೊಮ್ಮೆ ಮೋದಿ ಪ್ರಧಾನಿಯಾಗಿ ಮುಂದುವರೆಯಲಿದ್ದಾರೆ. ಯುರೇಷಿಯಾ ಗುಂಪಿನ ಚುನಾವಣೆಗಳ ಭವಿಷ್ಯ 305=0 ಆಗಿದೆ. ಇನ್ನು 2019ರಲ್ಲಿ ನಡೆದ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ 543 ಸ್ಥಾನಗಳಲ್ಲಿ 303 ಸ್ಥಾನಗಳನ್ನು ಗೆದ್ದಿತ್ತು. ಪ್ರಪಂಚದ ಇತರ ದೃಷ್ಟಿಕೋನದಿಂದ ನೋಡುವುದಾದರೆ, ಭಾರತವು ದೀರ್ಘಕಾಲದವರೆಗೆ ಕಳಪೆ ಪ್ರದರ್ಶನ ನೀಡಿದ ಆರ್ಥಿಕತೆಯಾಗಿದೆ, ಆದರೆ ಈಗ ಬಹಳಷ್ಟು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು.

# 16 ವರ್ಷದೊಳಗಿನ ಮಕ್ಕಳಿಗೆ ಸೋಷಿಯಲ್ ಮೀಡಿಯಾ ನಿಷೇಧಿಸಬೇಕು

**ಆಸ್ಟ್ರೇಲಿಯಾ:** ಚಿಕ್ಕ ವಯಸ್ಸಿನಲ್ಲೇ ಮಕ್ಕಳಿಗೆ ಸೋಷಿಯಲ್ ಮೀಡಿಯಾಗಳ ಬಳಕೆ ಮಕ್ಕಳ ಮಾನಸಿಕ ಆರೋಗ್ಯಕ್ಕೆ ಹಾನಿಕಾರವಾಗಿದೆ. ಹೀಗಾಗಿ 16 ವರ್ಷದೊಳಗಿನ ಮಕ್ಕಳಿಗೆ ಸಾಮಾಜಿಕ ಮಾಧ್ಯಮಗಳ ಖಾತೆಗಳ ನೋಂದಣಿಯನ್ನು ನಿಷೇಧಿಸಬೇಕು ಎಂದು ಆಸ್ಟ್ರೇಲಿಯಾ ಪ್ರಧಾನಿ ಆಂಥೋನಿ ಅಲ್ಬನೀಸ್ ಹೇಳಿದ್ದಾರೆ.

ಮಕ್ಕಳು ಆನ್ಲೈನ್ ಬಳಕೆಯಿಂದ ಸಾಮಾಜಿಕ ಒತ್ತಡಗಳಿಗೆ ಒಳಗಾಗುತ್ತಾರೆ. ಇದರಿಂದ ಮಕ್ಕಳನ್ನು ನಿಯಂತ್ರಿಸಿದರೆ ಬೆಳವಣಿಗೆಗೆ ಹೆಚ್ಚುವರಿ ಸಮಯವನ್ನು ನೀಡಿದಂತಾಗುತ್ತದೆ. ಸಾಮಾಜಿಕ ಮಾಧ್ಯಮಗಳ ಖಾತೆಗಳನ್ನು ತೆರೆಯಲು ಕನಿಷ್ಠ ವಯಸ್ಸನ್ನು 13 ರಿಂದ 16ಕ್ಕೆ ಹೆಚ್ಚಿಸುಬೇಕೆಂಬ ತಿಳಿಸಿದ್ದಾರೆ.

ನಮ್ಮ ಕಿರಿಯ ಆಸ್ಟ್ರೇಲಿಯನ್ನರು ಕ್ರೀಡೆಗೆ ಹೆಚ್ಚು ಸಮಯವನ್ನು ಮೀಸಲಿಡಬೇಕು. ಸಾಮಾನ್ಯ ರೀತಿಯಲ್ಲಿ ಪರಸ್ಪರ ಮಾತು,




ಚರ್ಚೆಯಲ್ಲಿ ತೊಡಬೇಕು ಹಾಗೂ ಆನ್ಲೈನ್ನಲ್ಲಿ ಕಡಿಮೆ ಸಮಯವನ್ನು ಕಳೆಯಬೇಕು. ಇದಕ್ಕಾಗಿ ಉತ್ತಮ ಮಾರ್ಗವೆಂದರೆ ಸಾಮಾಜಿಕ ಮಾಧ್ಯಮಗಳ ನಿರ್ಬಂಧ ಎಂದು ಎಫ್ಎಂ ರೇಡಿಯೊಗೆ ತಿಳಿಸಿದ್ದಾರೆ.

ಸೋಶಿಯಲ್ ಮೀಡಿಯಾದಲ್ಲಿ ಆಗಾಗ್ಗೆ ಕೆಟ್ಟ ಸಂದೇಶಗಳು, ಹೇಳಿಕೆಗಳು ವಯಸ್ಕರಿಗೆ ಹಾನಿ ಮಾಡುತ್ತದೆ. ಇದು ಮಕ್ಕಳ ಮೇಲೆ ಇನ್ನೂ ಕೆಟ್ಟ ಪರಿಣಾಮ ಬೀರುತ್ತದೆ. ಇದು ವಿನಾಶಕಾರಿಯಾಗಬಹುದು ಎಂದು ಹೇಳಿದ್ದಾರೆ. ನಾನು ನನ್ನ ಸಾಮಾಜಿಕ ಮಾಧ್ಯಮದಲ್ಲಿನ ಕಾಮೆಂಟ್ಗಳನ್ನು ನೋಡುವುದಿಲ್ಲ. ಏಕೆಂದರೆ ಹಾಗೆ ಮಾಡಿದರೆ ಬೆಳಿಗ್ಗೆ ಮನೆಯಿಂದ ಹೊರಬರಲು ನನಗೆ ಕಷ್ಟವಾಗುತ್ತದೆ. ಜನರು ಅನಾಮಧೇಯವಾಗಿ ಭಯಾನಕವಾದ ವಿಷಯಗಳನ್ನು ಹೇಳುತ್ತಾರೆ ಎಂದು ತಮ್ಮ ಸ್ವಂತ ಅನುಭವವನ್ನು ವಿವರಿಸಿದ್ದಾರೆ.

# ನೆಲಮಾಳಿಗೆಯಲ್ಲಿ 40 ಸಾವಿರ ವರ್ಷ ಹಳೆಯ ಮ್ಯಾಮತ್ ಮೂಳೆಗಳು ಪತ್ತೆ!

**ಆಸ್ಟ್ರಿಯಾ :** ವೈನ್ ಶೇಖರಿಸಿಡುವ ನೆಲಮಾಳಿಗೆಯ ನವೀಕರಣದ ಸಮಯದಲ್ಲಿ 40 ಸಾವಿರ ವರ್ಷಗಳ ಹಳೆಯದಾದ ಮ್ಯಾಮತ್ಗಳ ಮೂಳೆಗಳು ದೊರೆತಿದ್ದು ಪುರಾತತ್ವ ಶಾಸ್ತ್ರಜ್ಞರ ಹುಬ್ಬೇರುವಂತೆ ಮಾಡಿದೆ. ಆಸ್ಟ್ರಿಯಾದ ಗೋಬಲ್ಸ್ಬರ್ಗ್ನ ಕ್ರೆಮ್ಸ್ನಲ್ಲಿರುವ ಹಳೆಯದಾದ ವೈನ್ ಸೆಲ್ಲರ್ / ವೈನ್ ನೆಲಮಾಳಿಗೆ ನವೀಕರಣ ಸಂದರ್ಭದಲ್ಲಿ ವೈನ್ ತಯಾರಕ ಆಂಡ್ರೀಸ್ ಪರ್ನರ್ಸ್ಟೊರ್ಫರ್ ದೊಡ್ಡ ದೊಡ್ಡ ಮೂಳೆಗಳನ್ನು ಪತ್ತೆಹಚ್ಚಿದ್ದಾರೆ. ಈ ಬಗ್ಗೆ ಪುರಾತತ್ವ ಇಲಾಖೆಗೆ ಮಾಹಿತಿ ನೀಡಿದ್ದು , ವಿಜ್ಞಾನಿಗಳು ಈ ಮೂಳೆಗಳು ಮೂರು ಶಿಲಾಯುಗದ ಹಿಂದಿನ ಅಂದರೆ 30ರಿಂದ 40 ಸಾವಿರ ವರ್ಷಗಳ ಹಳೆಯದ್ದಾಗಿವೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಮೇ ತಿಂಗಳ ಮಧ್ಯ ವಾರದಿಂದ ಉತ್ಖನನ ಆರಭಿಸಿದ್ದು ಭಾರಿ ಪ್ರಮಾಣದಲ್ಲಿ ಮೂಳೆಗಳು ಪತ್ತೆಯಾಗಿವೆ, ಸುಮಾರು 150 ವರ್ಷಗಳ ಹಿಂದೆ ಕ್ರೆಮ್ಸ್ ನಲ್ಲಿ ಉತ್ಖನನ ನಡೆಸಲಾಗಿತ್ತು , ಈ ರೀತಿಯ ಉತ್ಖನನಗಳು ಶಿಲಾಯುಗದಲ್ಲಿ ಹೇಗೆ ಜನರು ಮ್ಯಾಮತ್ಗಳನ್ನು ಬೇಟೆಯಾಡುತ್ತಿದ್ದರು ಎಂಬುದನ್ನು ತಿಳಿದುಕೊಳ್ಳಲು ಸಹಕಾರಿ ಎಂದು ವಿಜ್ಞಾನಿಗಳು ಹೇಳಿದ್ದಾರೆ. ಸದ್ಯ ಮೂಳೆಗಳನ್ನು ನೋಡಿದರೆ ಮ್ಯಾಮತ್ಗಳನ್ನು ಕೂಡಿ ಹಾಕಿದ್ದು, ಇಲ್ಲೇ ಅವುಗಳು ಜೀವ ಬಿಟ್ಟಂತಿವೆ ಎಂದು ಹೇಳಲಾಗಿದೆ.



# ಪೋಷಕರು, ಸಹೋದರಿಯನ್ನು ಕೊಂದು ವಾರಗಳ ಕಾಲ ಮೃತ ದೇಹಗಳ ಜೊತೆಗಿದ್ದ ಬಾಲಕ

ಮೊಬೈಲ್ ಕಿತ್ತುಕೊಂಡರು ಎಂಬ ಕಾರಣಕ್ಕೆ ಕೋಪಗೊಂಡ ಬಾಲಕ ಪೋಷಕರು ಹಾಗೂ ಅಕ್ಕನನ್ನು ಗುಂಡಿಕ್ಕಿ ಹತ್ಯೆ ಮಾಡಿ ವಾರಗಳ ಕಾಲ ಮೃತದೇಹಗಳ ಜೊತೆ ಕಾಲ ಕಳೆದಿರುವ ಘಟನೆ ಸಾವೊ ಪಾಲೊದಲ್ಲಿ ನಡೆದಿದೆ.

ವಾರಗಳ ಬಳಿಕ ಪೊಲೀಸರಿಗೆ ಕರೆ ಮಾಡಿದ ಬಾಲಕ ತಪ್ಪೊಪ್ಪಿಕೊಂಡಿದ್ದಾನೆ.

ಮಕ್ಕಳಿಬ್ಬರು ಮೊಬೈಲ್ಗಾಗಿ ಜಗಳವಾಡುತ್ತಿದ್ದರು ಆಗ ಪೋಷಕರು ಮೊಬೈಲ್ನ್ನು ಕಿತ್ತುಕೊಂಡಿದ್ದಕ್ಕೆ ಕೋಪಗೊಂಡ ಬಾಲಕ ಪೋಷಕರು ಹಾಗೂ ಸಹೋದರಿಯನ್ನು ಹತ್ಯೆ ಮಾಡಿದ್ದಾನೆ.

ಮುನ್ಸಿಪಲ್ ಪೊಲೀಸ್ ಆಗಿದ್ದ ತಂದೆಯ ಸರ್ವೀಸ್ ಗನ್ ಹಿಡಿದು ಮನಬಂದಂತೆ ಗುಂಡು ಹಾರಿಸಿದ್ದಾಗಿ ಆತನೇ ತಿಳಿಸಿದ್ದಾನೆ. ಸಹೋದರಿಯ ಮುಖಕ್ಕೂ ಗುಂಡು ಹಾರಿಸಿದ್ದಾನೆ, ಹಲವು ಗಂಟೆಗಳ ಬಳಿಕ ತಾಯಿ ಮನೆಗೆ ಬಂದಾಗ ಅದೇ ರಿವಾಲ್ವರ್ನಿಂದ ಆಕೆಯನ್ನೂ ಕೊಂದಿದ್ದಾನೆ.

ಆತನಿಗೆ ಮಾನಸಿಕ ಸಮಸ್ಯೆ ಏನಾದರೂ ಇತ್ತೇ ಎಂಬುದನ್ನು ಕಂಡುಹಿಡಿಯಬೇಕಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಬಾಲಕ ಯಾರೊಂದಿಗಾದರೂ ಮಾತನಾಡಿದ್ದಾನೆಯೇ ಯಾರಾದರೂ ಈ ಹತ್ಯೆಯಲ್ಲಿ ಭಾಗಿಯಾಗಿದ್ದಾರೆಯೇ ಎಂಬುದನ್ನು ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಸದ್ಯ ಬಾಲಕನನ್ನು ಆತನನ್ನು ಬಾಲಾಪರಾಧಿ ಗೃಹಕ್ಕೆ ಕಳುಹಿಸಲಾಗಿದೆ.

# ಇಬ್ರಾಹಿಂ ರೈಸಿ ಅಂತ್ಯಕ್ರಿಯೆಯಲ್ಲಿ ಹಮಾಸ್, ಹೌತಿ, ತಾಲಿಬಾನ್ ನಾಯಕರು!

**ತೆಹ್ರಾನ್ :** ಹೆಲಿಕಾಪ್ಟರ್ ದುರಂತದಲ್ಲಿ ಸಾವಿಗೀಡಾಗಿರುವ ಇರಾನ್ ಅಧ್ಯಕ್ಷ ಇಬ್ರಾಹಿಂ ರೈಸಿ ಅಂತ್ಯಕ್ರಿಯೆ ನಿನ್ನೆ ನಡೆದಿದ್ದು , ಹಮಾಸ್, ಹೌತಿ, ತಾಲಿಬಾನ್ ಸೇರಿ ಅನೇಕ ನಾಯಕರು ಭಾಗಿಯಾಗಿದ್ದರು.

63 ವರ್ಷದ ರೈಸಿ ತನ್ನ ಸಚಿವರು ಹಾಗೂ ಅಧಿಕಾರಿಗಳೊಂದಿಗೆ ಇರಾನ್ ಗಡಿ ಭಾಗದ ಪ್ರದೇಶಕ್ಕೆ ಭೇಟಿ ನೀಡಿ ತಬ್ರೀಜ್ ನಗರಕ್ಕೆ ವಾಪಸ್ಸಾಗುವ ಸಂದರ್ಭದಲ್ಲಿ ಹೆಲಿಕಾಪ್ಟರ್ ಪತನದಿಂದ ಇರಾನ್ ಅಧ್ಯಕ್ಷ, ಸಚಿವ ಸೇರಿ ಅಧಿಕಾರಿಗಳು ಸಾವನ್ನಪ್ಪಿದ್ದರು.

ಮೇ.20 ರಂದು ಗುಡ್ಡಗಳ ತಪ್ಪಲಲ್ಲಿ ಮೃತದೇಹ ಪತ್ತೆಯಾಗಿತ್ತು.

ಇರಾನ್ ಅಧ್ಯಕ್ಷ ಸೇರಿ ಹೆಲಿಕಾಪ್ಟರ್ ದುರಂತದಲ್ಲಿ ಮಡಿದವರ ಅಂತ್ಯಕ್ರಿಯೆ ನಡೆದಿದ್ದು, ಸಾವಿರಾರು ಸಂಖ್ಯೆಯಲ್ಲಿ ಇರಾನ್ ಜನತೆ ತಮ್ಮ ನಾಯಕನಿಗೆ ಕಣ್ಣೀರಿನ ವಿದಾಯ ಹೇಳಿದ್ದಾರೆ. ಜೊತೆಗೆ ತಾಲಿಬಾನ್ ಉಪ ಪ್ರಧಾನಿ ಮುಲ್ಲಾ ಬರಾದರ, ಹಮಾಸ್ನ ರಾಜಕೀಯ ಮುಖಂಡ ಇಸ್ಮಾಯಿಲ್ ಹನಿಯೇಹ್, ಇರಾನ್ ಬೆಂಬಲಿತ ಹೌತಿ ಗುಂಪಿನ ನಾಯಕರು ಕೂಡ ಇಬ್ರಾಹಿಂ ರೈಸಿಗೆ ಅಂತಿಮ ವಿದಾಯ ಹೇಳಿದ್ದಾರೆ.

ಇನ್ನು ಉಪರಾಷ್ಟ್ರಪತಿ ಜಗದೀಪ್ ಧನಕರ್ ಕೂಡ ದುರಂತದಲ್ಲಿ ಮಡಿದ ಇರಾನ್ ಅಧ್ಯಕ್ಷ, ಸಚಿವರು ಹಾಗೂ ಅಧಿಕಾರಿಗಳಿಗೆ ಅಂತಿಮ ನಮನ ಸಲ್ಲಿಸಿದ್ದಾರೆ.

# ಬಿಜೆಪಿ ಈಗ ಆರ್‌ಎಸ್‌ಎಸ್ ಅವಲಂಬನೆ ಮೀರಿ ಬೆಳೆದಿದೆ: ಜೆಪಿ ನಡ್ಡಾ ಮಾತು

**ದೆಹಲಿ:** ಭಾರತೀಯ ಜನತಾ ಪಾರ್ಟಿ (ಬಿಜೆಪಿ) ರಾಷ್ಟ್ರೀಯ ಸ್ವಯಂ ಸೇವಾ ಸಂಘ (ಆರ್‌ಎಸ್‌ಎಸ್)ದ ಮೇಲಿನ ಅವಲಂಬನೆಯನ್ನು ಮೀರಿ ಬೆಳೆದಿದೆ. ಪಕ್ಷದ ರಚನೆ ಬಲಗೊಂಡಿದೆ. ಈಗ ಅದು ಸ್ವತಃ ಶಕ್ತಿಯ ಮೇಲೆ ನಡೆಯುತ್ತಿದೆ ಎಂದು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ ಹೇಳಿದ್ದಾರೆ.

ಇಂಡಿಯನ್ ಎಕ್ಸ್‌ಪ್ರೆಸ್‌ಗೆ ನೀಡಿರುವ ಸಂದರ್ಶನದಲ್ಲಿ ಜೆಪಿ ನಡ್ಡಾ, ಆರ್‌ಎಸ್‌ಎಸ್ ಬಿಜೆಪಿಯ ಸೈದ್ಧಾಂತಿಕ ರಂಗವಾಗಿದೆ ಎಂದಿದ್ದಾರೆ. ಅಟಲ್ ಬಿಹಾರಿ ವಾಜಪೇಯಿ ಅವರ ಕಾಲಕ್ಕೆ ಹೋಲಿಸಿದರೆ ಬಿಜೆಪಿಯೊಳಗೆ ಆರ್‌ಎಸ್‌ಎಸ್‌ನ ಉಪಸ್ಥಿತಿ ಹೇಗೆ ಬದಲಾಗಿದೆ ಎಂಬ ಪ್ರಶ್ನೆಗೆ ಉತ್ತರಿಸಿರುವ ಜೆ.ಪಿ.ನಡ್ಡಾ, ಬಿಜೆಪಿಯ ರಚನೆಯು ಬಲಗೊಂಡಿದೆ ಮತ್ತು ಈಗ ಅದು ತನ್ನಿಂದ ತಾನೇ ನಡೆಯುತ್ತಿದೆ. ವಾಜಪೇಯಿ ಅವರ ಕಾಲದಲ್ಲಿ ಬಿಜೆಪಿಗೆ ಆರ್‌ಎಸ್‌ಎಸ್ ಅಗತ್ಯವಾಗಿತ್ತು. ಏಕೆಂದರೆ ಅದು ಕಡಿಮೆ ಸಾಮರ್ಥ್ಯ ಮತ್ತು ಚಿಕ್ಕದಾಗಿತ್ತು ಎಂದು ಎಂದಿದ್ದಾರೆ.

ಶುರರು ಮೇ ಹಮ್ ಅಕ್ಷಂ ಹೊಂಗೆ, ಥೋರಾ ಕುಮ್ ಹೊಂಗೆ, ಆರ್‌ಎಸ್‌ಎಸ್ ಕಿ ಜರೂರತ್ ಪಡ್ತಿ ಥೀ? ಆಜ್ ಹಮ್ ಬಾದ್ ಗಯೇ ಹೈ, ಸಕ್ಷಮ್ ಹೈ? ಆರಂಭದಲ್ಲಿ ನಾವು ಕಡಿಮೆ ಸಾಮರ್ಥ್ಯ



ಹೊಂದಿದ್ದೇವೆ, ಪಕ್ಷ ಸಣ್ಣದಾಗಿತ್ತು. ಆರ್‌ಎಸ್‌ಎಸ್ ಅಗತ್ಯವಿತ್ತು. ಇಂದು, ನಾವು ಬೆಳೆದಿದ್ದೇವೆ. ಸಮರ್ಥರಾಗಿದ್ದೇವೆ. ಬಿಜೆಪಿ ತನ್ನಷ್ಟಕ್ಕೆ ತಾನೇ ಆಡಳಿತ ನಡೆಸುತ್ತದೆ. ವಾಜಪೇಯಿ ಅವರ ಕಾಲಕ್ಕೂ ಈಗಿನ ಪಕ್ಷಕ್ಕೂ ಇದೇ ವ್ಯತ್ಯಾಸ ಎಂದು ಹೇಳಿದ್ದಾರೆ.

ಬಿಜೆಪಿಗೆ ಆರ್‌ಎಸ್‌ಎಸ್‌ನ ಬೆಂಬಲ ಅಗತ್ಯವಿದೆಯೇ ಎಂಬ ಪ್ರಶ್ನೆಗೆ ಉತ್ತರಿಸಿರು ಜೆಪಿ ನಡ್ಡಾ ಅವರು, ಪಕ್ಷ ಬೆಳೆದಿದೆ ಮತ್ತು ಅದರ ನಾಯಕರು ತಮ್ಮದೇ ಆದ ಕರ್ತವ್ಯಗಳು ಮತ್ತು ಪಾತ್ರಗಳನ್ನು ನಿರ್ವಹಿಸುತ್ತಿದ್ದಾ?ರೆ. ಆರ್‌ಎಸ್‌ಎಸ್ ಸಾಂಸ್ಕೃತಿಕ ಮತ್ತು ಸಾಮಾಜಿಕ ಸಂಘಟನೆಯಾಗಿದೆ. ಬಿಜೆಪಿ ರಾಜಕೀಯ ಪಕ್ಷವಾಗಿದೆ. ಆರ್‌ಎಸ್‌ಎಸ್ ಸೈದ್ಧಾಂತಿಕವಾಗಿ ಕೆಲಸ ಮಾಡುತ್ತಿದೆ ಎಂದು ತಿಳಿಸಿದ್ದಾರೆ.

ಶುಕ್ರವಾರ
24.5.2024

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# 'ಡೆವಿಲ್' ಚಿತ್ರದ ರಿಲೀಸ್ ಡೇಟ್ ಅನೌನ್ಸ್






ಚಾಲೆಂಜಿಂಗ್ ಸ್ಟಾರ್ ದರ್ಶನ್ ಇದೀಗ ಅಭಿಮಾನಿಗಳಿಗೆ ಸಿಹಿಸುದ್ದಿ ನೀಡಿದ್ದಾರೆ. 'ಡೆವಿಲ್' ಆಗಿ ಅವತಾರ ತಾಳಿರುವ ದರ್ಶನ್ ಮುಂಬರುವ ಸಿನಿಮಾದ ರಿಲೀಸ್ ಬಗ್ಗೆ ಮಾಹಿತಿ ನೀಡಿದ್ದಾರೆ. 'ಡೆವಿಲ್' ಬಗ್ಗೆ ಬಿಗ್ ಅಪ್‌ಡೇಟ್ ಕೊಟ್ಟಿದ್ದಾರೆ.

ನಮ್ಮ ನಲ್ಮೆಯ ಸೆಲೆಬ್ರಿಟಿಸ್ ಹಾಗೂ ಕನ್ನಡಾಭಿಮಾನಿಗಳಿಗೆ ವಿಶೇಷ ಪ್ರಕಟಣೆ. 'ಡೆವಿಲ್' ಚಿತ್ರವು ಇದೇ ಕ್ರಿಸ್‌ಮಸ್ 2024 ಬೆಳ್ಳಿತೆರೆಯ ಮೇಲೆ ಬರಲಿದೆ. ನಿಮ್ಮ ಪ್ರೀತಿ ಮತ್ತು ಹಾರೈಕೆ ಸದಾ ಕನ್ನಡ ಚಿತ್ರಗಳ ಮೇಲಿರಲಿ ಎಂದು ಎಕ್ಸ್‌ನಲ್ಲಿ ದರ್ಶನ್ ಮಾಹಿತಿ ನೀಡಿದ್ದಾರೆ. ಈ ಮೂಲಕ ಫ್ಯಾನ್ಸ್‌ಗೆ ಬಿಗ್ ಸರ್ಪ್ರೈಸ್ ನೀಡಿದ್ದಾರೆ.

ಅಂದಹಾಗೆ, ದರ್ಶನ್ ನಟನೆಯ ಡೆವಿಲ್ ಸಿನಿಮಾಗೆ ನಾಯಕಿಯ ಆಯ್ಕೆಯಾಗಿದೆ. ವಾಮನ ಸೇರಿದಂತೆ ಕೆಲವು ಚಿತ್ರಗಳಲ್ಲಿ ನಟಿಸಿರುವ ತುಳುನಾಡ ಕುವರಿ ರಚನಾ ರೈ ಅವರು ಡೆವಿಲ್ ಚಿತ್ರಕ್ಕೆ ನಾಯಕಿಯಾಗಿ ಆಯ್ಕೆಯಾಗಿರುವ ವಿಚಾರವನ್ನು ಕಳೆದ ವಾರ ಚಿತ್ರತಂಡ ಅನೌನ್ಸ್ ಮಾಡಿದ್ದರು. ಈ ಹಿಂದೆ ಇವರು ಶಂಕರ್ ರಾಮನ್ ನಿರ್ದೇಶನದಲ್ಲಿ ಮೂಡಿ ಬಂದ 'ವಾಮನ' ಚಿತ್ರಕ್ಕೆ ನಾಯಕಿಯಾಗಿದ್ದರು. ಈ ಹಿಂದೆ ತುಳು ಸಿನಿಮಾವೊಂದರಲ್ಲಿ ನಟಿಸಿದ್ದ ರಚನಾಗೆ ವಾಮನ ಮೊದಲ ಕನ್ನಡ ಸಿನಿಮಾವಾಗಿತ್ತು.

ಬ್ಯಾಡ್ಮಿಂಟನ್ ಪ್ಲೇಯರ್ ಆಗಿರುವ ಈ ತುಳುನಾಡ ಚೆಲುವೆ, ಮಾಡೆಲ್, ಡ್ಯಾನ್ಸರ್ ಹಾಗೇ ಬರಹಗಾರ್ತಿ ಕೂಡ. ಓ ಮೈ ಡಾಗ್ ಎಂಬ ಪುಸ್ತಕ ಬರೆದಿರುವ ರಚನಾ ಸಕಲಕಲಾವಲ್ಲಭೆ. ಈಗ ಸ್ಟಾರ್ ನಟನ ಚಿತ್ರಕ್ಕೆ ನಾಯಕಿಯಾಗುವ ಮೂಲಕ ಅಚ್ಚರಿ ಮೂಡಿಸಿದ್ದಾರೆ. ದರ್ಶನ್ ಮತ್ತು ರಚನಾ ಮೊದಲ ಬಾರಿಗೆ ಜೋಡಿಯಾಗುತ್ತಿರೋದ್ರಿಂದ ಚಿತ್ರದ ಬಗ್ಗೆ ಭಾರೀ ನಿರೀಕ್ಷೆಯಿದೆ.

ಇತ್ತೀಚೆಗೆ 'ಡೆವಿಲ್' ಸಿನಿಮಾದ ಫಸ್ಟ್ ಲುಕ್ ರಿಲೀಸ್ ಆದ ಬೆನ್ನಲ್ಲೇ ಅದರ ತೆರೆಹಿಂದಿನ ಝಲಕ್ ಹೇಗಿತ್ತು ಎಂಬುದನ್ನು ಇದೀಗ ರಿವೀಲ್ ಮಾಡಿದ್ದಾರೆ. ಅಕ್ಷಯ ತೃತೀಯ ಹಿನ್ನೆಲೆಯಲ್ಲಿ ಮೇಕಿಂಗ್ ವಿಡಿಯೋವನ್ನು ಚಿತ್ರತಂಡ ರಿಲೀಸ್ ಮಾಡಿತ್ತು.

ಫೆಬ್ರವರಿಯಲ್ಲಿ ಚಿತ್ರದ ಫಸ್ಟ್ ಲುಕ್ ರಿವೀಲ್ ಆಗಿತ್ತು. ನಮ್ಮ ಮನೆಯಲ್ಲೊಂದು ಪುಟ್ಟ ಪಾಪು ಇರುವುದು. ಫೋಟೋ ತೆಗೆದರೆ ಅದಕ್ಕೆ ಬಲು ಕೋಪ ಬರುವುದು. ಫೋಟೋ ತೆಗೆದ ಪಾಪು ಕೈಯ ಮುರಿದು ಬಿಡುವುದು. ಸರ್ಸು ಪಾಪು ಹೆಸರು ಕೇಳಲ್ವಾ? ಎಂದು ದರ್ಶನ್ ಹೇಳಿರುವ ಡೈಲಾಗ್ 'ಡೆವಿಲ್' ಮೊದಲ ಟೀಸರ್‌ನಲ್ಲಿತ್ತು. ಈಗ ಇದರ ವಿಡಿಯೋ ಬಿಡಲಾಗಿದೆ. ಕಲರ್‌ಫುಲ್ ಲೋಕೇಷನ್‌ನಲ್ಲಿ ದರ್ಶನ್ ಸಖತ್ ಸ್ಟೈಲೀಶ್ ಆಗಿ ಕಾಣಿಸಿಕೊಂಡಿದ್ದಾರೆ.

# ಮೆಗಾಸ್ಟಾರ್ ಚಿರಂಜೀವಿ ಚಿತ್ರದಲ್ಲಿ ಚುಟು ಚುಟು ಬೆಡಗಿ ಆಶಿಕಾ ರಂಗನಾಥ್



ಕನ್ನಡತಿ ಆಶಿಕಾ ರಂಗನಾಥ್‌ಗೆ ಗೋಲ್ಡನ್ ಚಾನ್ಸ್ ಸಿಕ್ಕಿದೆ. ಚುಟು ಚುಟು ಬೆಡಗಿಗೆ ಟಾಲಿವುಡ್ ಅಂಗಳದಲ್ಲಿ ಬೇಡಿಕೆ ಹೆಚ್ಚಾಗಿದೆ. ಮೆಗಾಸ್ಟಾರ್ ಚಿರಂಜೀವಿ ಜೊತೆ ತೆರೆಹಂಚಿಕೊಳ್ಳುವ ಅವಕಾಶ ಗಿಟ್ಟಿಸಿಕೊಂಡಿದ್ದಾರೆ. ಈ ಮೂಲಕ ಫ್ಯಾನ್ಸ್‌ಗೆ ಸಿಹಿಸುದ್ದಿ ನೀಡಿದ್ದಾರೆ.

ಕನ್ನಡ ಸಿನಿಮಾಗಳಲ್ಲಿ ನಟಿಸಿ ಜನಪ್ರಿಯತೆ ಗಿಟ್ಟಿಸಿಕೊಂಡಿರುವ ಆಶಿಕಾ ರಂಗನಾಥ್ ಟಾಲಿವುಡ್‌ನಲ್ಲಿ ಭರವಸೆ ಮೂಡಿಸಿದ್ದಾರೆ. ಸದ್ಯ ತೆಲುಗಿನ ಮೆಗಾಸ್ಟಾರ್ ಚಿರಂಜೀವಿ ನಟನೆಯ 'ವಿಶ್ವಂಭರ' ಸಿನಿಮಾದಲ್ಲಿ ಆಶಿಕಾ ಬಹಳ ಮಹತ್ವದ ಪಾತ್ರವೇ ಸಿಕ್ಕಿದೆಯಂತೆ. ವಸಿಷ್ಠ ಈ ಚಿತ್ರವನ್ನು ನಿರ್ದೇಶನ ಮಾಡುತ್ತಿದ್ದಾರೆ.

ಈ ಚಿತ್ರದಲ್ಲಿ ತ್ರಿಷಾ, ಮೀನಾಕ್ಷಿ ಚೌಧರಿ, ಬಣ್ಣ ಹಚ್ಚಿದ್ದಾರೆ. ಇವರ ಜೊತೆಗೆ ಆಶಿಕಾ ಕೂಡ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಳ್ತಿದ್ದಾರೆ. ಈ ಸುದ್ದಿ ಕೇಳಿ ಫ್ಯಾನ್ಸ್ ಕೂಡ ಥ್ರಿಲ್ ಆಗಿದ್ದಾರೆ.

ಕಳೆದ ವರ್ಷ ನಂದಮೂರಿ ಕಲ್ಯಾಣ್ ನಟನೆಯ 'ಆಮಿಗೋಸ್' ಸಿನಿಮಾದಲ್ಲಿ ಹೀರೋಯಿನ್ ಆಗಿ ನಟಿಸಿದ್ದರು. ಆದರೆ ಈ ಚಿತ್ರವು ಗಲ್ಲಾಪೆಟ್ಟಿಗೆಯಲ್ಲಿ ಮಕಾಡೆ ಮಲಗಿತ್ತು. ನಂತರ ನಾಗಾರ್ಜುನ ಜೊತೆ 'ನಾ ಸಾಮಿ ರಂಗ' ಸಿನಿಮಾದಲ್ಲಿ ನಟಿಸಿದ್ದರು. ಈ ಚಿತ್ರ ಸೂಪರ್ ಹಿಟ್ ಆಯ್ತು. ಈ ಬೆನ್ನಲ್ಲೇ ಮೆಗಾಸ್ಟಾರ್ ನಟಿಸುವ ಬಂಪರ್ ಅವಕಾಶ ನಟಿಗೆ ಸಿಕ್ಕಿದೆ.

ಕನ್ನಡದ ನಟಿಯರಾದ ರಶ್ಮಿಕಾ ಮಂದಣ್ಣ, ಶ್ರೀಲೀಲಾ, ಪೂಜಾ ಹೆಗ್ಡೆ, ಅನುಷ್ಕಾ ಶೆಟ್ಟಿ ಅವರಂತೆಯೇ ಆಶಿಕಾ ರಂಗನಾಥ್ ಪೈಪೋಟಿ ಗೆಲ್ತಾರಾ? ಎಂದು ಕಾದುನೋಡಬೇಕಿದೆ.



# 'ಮಾರ್ಟಿನ್' ಸಿನಿಮಾದ ಬಗ್ಗೆ ಸಿಹಿಸುದ್ದಿ ಕೊಟ್ಟ ಧ್ರುವ ಸರ್ಜಾ



ಸ್ಯಾಂಡಲ್‌ವುಡ್ ನಟ ಧ್ರುವ ಸರ್ಜಾ ಅಭಿಮಾನಿಗಳಿಗೆ ಗುಡ್ ನ್ಯೂಸ್ ಕೊಟ್ಟಿದ್ದಾರೆ. ಧ್ರುವ ಸಿನಿಮಾಗಾಗಿ ಕಾದು ಕುಳಿತ ಅಭಿಮಾನಿಗಳಿಗೆ ಈಗ ಬಿಗ್ ಅಪ್‌ಡೇಟ್ ಸಿಕ್ಕಿದೆ. 'ಮಾರ್ಟಿನ್' ಚಿತ್ರದ ಬಗ್ಗೆ ಧ್ರುವ ಮಾಹಿತಿ ನೀಡಿದ್ದಾರೆ.

ಎ.ಪಿ ಅರ್ಜುನ್ ನಿರ್ದೇಶನದ ಮಾರ್ಟಿನ್ ಸಿನಿಮಾದ ಶೂಟಿಂಗ್ ಮುಗಿದಿದೆ. ಈ ಚಿತ್ರಕ್ಕಾಗಿ ಕಳೆದ ಎರಡು ವರ್ಷಗಳಿಂದ ಧ್ರುವ ಬೆವರು ಹರಿಸಿದ್ದಾರೆ. ಆದರೆ ಸಿನಿಮಾದ ಬಗ್ಗೆ ಏನು ಅಪ್‌ಡೇಟ್ ಸಿಗದೇ ಇದ್ದಿದ್ದಕ್ಕೆ ಫ್ಯಾನ್ಸ್ ನಿರಾಸೆ ವ್ಯಕ್ತಪಡಿಸಿದ್ದರು.

ಪ್ಯಾನ್ ಇಂಡಿಯಾ ಸಿನಿಮಾ 'ಮಾರ್ಟಿನ್' ಬಗ್ಗೆ ಮೇ 24ಕ್ಕೆ ಸಿಹಿಸುದ್ದಿ ಸಿಗಲಿದೆ ಎಂದು ಸ್ವತಃ ಧ್ರುವ ಸರ್ಜಾ ತಮ್ಮ ಇನ್ಸ್ಟಾಗ್ರಾಂ ಖಾತೆಯಲ್ಲಿ ಹೇಳಿದ್ದಾರೆ. ಚಿತ್ರದ ಟೀಸರ್ ಅಥವಾ ಟ್ರೈಲರ್ ರಿಲೀಸ್ ಮಾಡ್ತಾರಾ ಅಂದೇ ಸಮಯದಲ್ಲಿ ರಿಲೀಸ್ ಬಗ್ಗೆ ಮಾಹಿತಿ ಸಿಗುತ್ತಾ ಎಂದು ಕಾದುನೋಡಬೇಕಿದೆ.

'ಮಾರ್ಟಿನ್' ಹೀರೋ ಧ್ರುವಗೆ ವೈಭವಿ ಶಾಂಡಿಲ್ಯ ನಾಯಕಿಯಾಗಿ ನಟಿಸಿದ್ದಾರೆ. ಈ ಚಿತ್ರವನ್ನು ಉದಯ್ ಮೆಹ್ತಾ ನಿರ್ಮಾಣ ಮಾಡಿದ್ದಾರೆ.

# ಚೆನ್ನೈ ವಿರುದ್ಧ ಗೆದ್ದ ಬಳಿಕ ಆರ್‌ಸಿಬಿಯಿಂದ ಬೆಳಗಿನ ಜಾವ 5 ಗಂಟೆವರೆಗೆ ಪಾರ್ಟಿ!





ಫಾಫ್ ಡುಪ್ಲೆಸಿಸ್ ನಾಯಕತ್ವದ ರಾಯಲ್ ಚಾಲೆಂಜರ್ಸ್ ಬೆಂಗಳೂರು ಐಪಿಎಲ್ 2024 ರಲ್ಲಿ ಅದ್ಭುತ ಪ್ರದರ್ಶನ ನೀಡಿತು. ಲೀಗ್ ಹಂತದಲ್ಲೇ ಟೂರ್ನಿಯಿಂದ ಹೊರಬೀಳಲಿದೆ ಎನ್ನಲಾಗಿದ್ದ ತಂಡ ಪ್ಲೇ ಆಫ್ ತಲುಪಿ ಎಲ್ಲರನ್ನೂ ಅಚ್ಚರಿಗೊಳಿಸಿತು. ಆರಂಭದಲ್ಲಿ ಸತತ 6 ಪಂದ್ಯಗಳನ್ನು ಸೋತರೆ, ನಂತರ ಸತತ 6 ಪಂದ್ಯಗಳನ್ನು ಗೆಲ್ಲುವ ಮೂಲಕ ಪ್ಲೇ ಆಫ್ ತಲುಪಿತು. ಅದರಲ್ಲೂ ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧದ ಮಾಡು ಇಲ್ಲವೇ ಮಡಿ ಪಂದ್ಯದಲ್ಲಿ ಆರ್‌ಸಿಬಿ ಅದ್ಭುತವಾಗಿ ಆಡಿತು. ಬೌಲರ್ ಯಶ್ ದಯಾಳ್ ಕೊನೆಯ ಓವರ್‌ನಲ್ಲಿ ಬೌಲಿಂಗ್ ಮಾಡಿ ಆರ್‌ಸಿಬಿ ಗೆಲುವನ್ನು ಖಚಿತಪಡಿಸಿದರು. ಇದೀಗ ಯಶ್ ತಂದೆ ಚೆನ್ನೈ ವಿರುದ್ಧದ ಈ ದೊಡ್ಡ ಗೆಲುವಿನ ನಂತರ ಇಡೀ ತಂಡ ಬೆಳಗಿನ ಜಾವ 5 ಗಂಟೆಯವರೆಗೂ ಪಾರ್ಟಿ ಮಾಡಿದೆ ಎಂದು ಬಹಿರಂಗಪಡಿಸಿದ್ದಾರೆ.

ಚೆನ್ನೈ ತಂಡವನ್ನು ಸೋಲಿಸಿದ ನಂತರ ಇಡೀ ತಂಡವು ಮುಂಜಾನೆ 5 ಗಂಟೆಯವರೆಗೆ ಪಾರ್ಟಿ ಮಾಡಿದೆ ಎಂದು ಆರ್‌ಸಿಬಿ ವೇಗದ ಬೌಲರ್ ಯಶ್ ದಯಾಳ್ ತಂದೆ ಚಂದ್ರಪಾಲ್ ದಯಾಲ್ ಐಎಎನ್‌ಎಸ್‌ಗೆ ತಿಳಿಸಿದ್ದಾರೆ. ''ಚೆನ್ನೈ ತಂಡವನ್ನು ಸೋಲಿಸಿದ ಆರ್‌ಸಿಬಿ ತಂಡವು ಗೆಲುವಿನ ಸಂಭ್ರಮದಲ್ಲಿ ಮುಳುಗಿತ್ತು. ಇಡೀ ರಾತ್ರಿ ನಿದ್ದೆ ಮಾಡದೆ ಬೆಳಗಿನ ಜಾವ 5 ಗಂಟೆಯವರೆಗೂ ಪಾರ್ಟಿ ಮಾಡಿತ್ತು. ಆರ್‌ಸಿಬಿ ಪ್ಲೇಯರ್ಸ್ ತುಂಬಾ ಸಂತೋಷಪಟ್ಟರು,'' ಎಂದು ಹೇಳಿದ್ದಾರೆ.

ಈ ಪಂದ್ಯದ 20ನೇ ಓವರ್‌ನ ಯಶ್ ಬೌಲಿಂಗ್‌ನ ಮೊದಲ ಎಸೆತದಲ್ಲಿ ಧೋನಿ ಸಿಕ್ಸರ್ ಬಾರಿಸಿದಾಗ ಸೋಲುವ ಭೀತಿ ಎದುರಾಯಿತು. ನಂತರ ದಯಾಳ್ ತಮ್ಮ ಬೌಲಿಂಗ್‌ನತ್ತ ಗಮನ ಹರಿಸಿ ಕ್ರೀಸ್‌ನಲ್ಲಿ ಯಾರು ಇದ್ದಾರೆ ಎಂಬುದನ್ನು ಗಮನಿಸದೆ ಬೌಲಿಂಗ್ ಮಾಡಿದರು ಎಂದು ಅವರು ಹೇಳಿದ್ದಾರೆ.

ಚೆನ್ನೈ ಸೂಪರ್ ಕಿಂಗ್ಸ್ ಅನ್ನು ಸೋಲಿಸುವ ಮೂಲಕ ಆರ್‌ಸಿಬಿ ಪ್ಲೇಆಫ್‌ಗೆ ಅರ್ಹತೆ ಪಡೆದಿತ್ತು. ಮೇ 22ರ ರಾತ್ರಿ ಅಹ್ಮದಾಬಾದ್‌ನ ನರೇಂದ್ರ ಮೋದಿ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆದ ಎಲಿಮಿನೇಟರ್ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ತಂಡವನ್ನು ಎದುರಿಸಿತು. ಎಲಿಮಿನೇಟರ್ ಪಂದ್ಯವನ್ನು ಆರ್‌ಆರ್ 4 ವಿಕೆಟ್‌ಗಳಿಂದ ಗೆದ್ದುಕೊಂಡ ಪರಿಣಾಮ ಆರ್‌ಸಿಬಿ ಟೂರ್ನಿಯಿಂದ ಹೊರಬಿತ್ತು.

ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಆರ್‌ಸಿಬಿ 20 ಓವರ್‌ಗಳಲ್ಲಿ 8 ವಿಕೆಟ್‌ಗೆ 172 ರನ್ ಗಳಿಸಿತು. 173 ರನ್‌ಗಳ ಗುರಿಯನ್ನು ಬೆನ್ನಟ್ಟಿದ ರಾಜಸ್ಥಾನ್ ರಾಯಲ್ಸ್ ಪಂದ್ಯವನ್ನು 4 ವಿಕೆಟ್‌ಗಳಿಂದ ಗೆದ್ದುಕೊಂಡಿತು. ಇದೀಗ ಎರಡನೇ ಕ್ವಾಲಿಫೈಯರ್ ಪಂದ್ಯ ಸನ್ ರೈಸರ್ಸ್ ಹೈದರಾಬಾದ್ ಮತ್ತು ರಾಜಸ್ಥಾನ ರಾಯಲ್ಸ್ ನಡುವೆ ಮೇ 24 ರಂದು ಚೆನ್ನೈನಲ್ಲಿ ನಡೆಯಲಿದೆ.

# ಹೈದರಾಬಾದ್-ರಾಜಸ್ಥಾನ್ ನಡುವೆ 2ನೇ ಕ್ವಾಲಿಫೈಯರ್ ಪಂದ್ಯ




ಇಂಡಿಯನ್ ಪ್ರೀಮಿಯರ್ ಲೀಗ್ 2024 ರ ಎರಡನೇ ಕ್ವಾಲಿಫೈಯರ್ ಪಂದ್ಯವು ಸನ್‌ರೈಸರ್ಸ್ ಹೈದರಾಬಾದ್ ಮತ್ತು ರಾಜಸ್ಥಾನ್ ರಾಯಲ್ಸ್ ನಡುವೆ ಇಂದು ಚೆನ್ನೈನ ಎಂಎ ಚಿದಂಬರಂ ಕ್ರೀಡಾಂಗಣದಲ್ಲಿ ನಡೆಯಲಿದೆ. ಎಲಿಮಿನೇಟರ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು ಸೋಲಿಸುವ ಮೂಲಕ ರಾಜಸ್ಥಾನ ಎರಡನೇ ಕ್ವಾಲಿಫೈಯರ್‌ಗೆ ಲಗ್ಗೆ ಇಟ್ಟಿತು. ಎರಡನೇ ಕ್ವಾಲಿಫೈಯರ್‌ನಲ್ಲಿ ಗೆದ್ದ ತಂಡ ಮೇ 26 ರಂದು ಚೆನ್ನೈನಲ್ಲಿಯೇ ಕೋಲ್ಕತ್ತಾ ನೈಟ್ ರೈಡರ್ಸ್ ಜೊತೆ ಫೈನಲ್ ಆಡಲಿದೆ. ಮೊದಲ ಕ್ವಾಲಿಫೈಯರ್ ಪಂದ್ಯದಲ್ಲಿ ಹೈದರಾಬಾದ್ ತಂಡವನ್ನು 8 ವಿಕೆಟ್‌ಗಳಿಂದ ಕೆಕೆಆರ್ ಸೋಲಿಸಿ ಫೈನಲ್ ಪ್ರವೇಶಿಸಿತ್ತು.

ಲೀಗ್ ಹಂತದಲ್ಲಿ ಬ್ಯಾಟ್ ಬೀಸಿ ಸಂಚಲನ ಮೂಡಿಸಿದ್ದ ಸನ್‌ರೈಸರ್ಸ್ ಹೈದರಾಬಾದ್ ತಂಡ ಕ್ವಾಲಿಫೈಯರ್-1ರಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್ ಎದುರು ಸೋಲು ಅನುಭವಿಸಬೇಕಾಯಿತು. ಆ ಪಂದ್ಯದಲ್ಲಿ ಅವರ ಪ್ರಮುಖ ಬ್ಯಾಟ್ಸ್‌ಮನ್‌ಗಳಾದ ಟ್ರಾವಿಸ್ ಹೆಡ್ ಮತ್ತು ಅಭಿಷೇಕ್ ಶರ್ಮಾ ತಂಡಕ್ಕೆ ಉತ್ತಮ ಆರಂಭವನ್ನು ನೀಡಲು ಸಾಧ್ಯವಾಗಲಿಲ್ಲ. ಇಂತಹ ಪರಿಸ್ಥಿತಿಯಲ್ಲಿ ಇಂದು ಈ ಇಬ್ಬರೂ ಬ್ಯಾಟ್ಸ್‌ಮನ್‌ಗಳ ಮೇಲೆ ಒತ್ತಡ ಹೆಚ್ಚಲಿದೆ. ಚೆನ್ನೈನ ಪಿಚ್ ಬ್ಯಾಟ್ಸ್‌ಮನ್‌ಗಳಿಗೆ ಸುಲಭವಲ್ಲ, ಆಗಾಗ್ಗೆ ಚೆಂಡು ನಿಂತು ಬ್ಯಾಟ್‌ಗೆ ಬರುತ್ತದೆ, ಆದ್ದರಿಂದ ಇಂದಿನ ಪಂದ್ಯ ಹೈದರಾಬಾದ್‌ಗೆ ಸವಾಲಾಗಲಿದೆ.

ರಾಜಸ್ಥಾನ್ ರಾಯಲ್ಸ್ ಬಗ್ಗೆ ಮಾತನಾಡುತ್ತಾ, ಸಂಜು ಸ್ಯಾಮ್ಸನ್ ನೇತೃತ್ವದ ಈ ತಂಡವು ಎಲಿಮಿನೇಟರ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು ಸೋಲಿಸಿ ಇಲ್ಲಿಗೆ ತಲುಪಿದೆ. ಆರ್‌ಸಿಬಿ ಆರು ಗೆಲುವುಗಳನ್ನು ಗಳಿಸುವ ಮೂಲಕ ಪ್ಲೇಆಫ್‌ಗೆ ಅರ್ಹತೆ ಪಡೆದಿತ್ತು, ಆದರೆ ನಾಕೌಟ್ ಪಂದ್ಯದಲ್ಲಿ ಸೋಲು ಕಂಡಿತು. ಈ ಪಂದ್ಯದಲ್ಲಿ ಆರ್‌ಆರ್‌ನ ಬೌಲರ್‌ಗಳು, ಬ್ಯಾಟ್ಸ್‌ಮನ್‌ಗಳು ತಮ್ಮ ಶಕ್ತಿ ಪ್ರದರ್ಶಿಸಿ ತಂಡವನ್ನು ಗೆಲುವಿನತ್ತ ಮುನ್ನಡೆಸಿದರು. ಆದಾಗ್ಯೂ, ಸಂಜು ಸ್ಯಾಮ್ಸನ್ ಅವರ ಫಾರ್ಮ್ ತಂಡಕ್ಕೆ ಚಿಂತೆಯ ವಿಷಯವಾಗಿದೆ. ಯಶಸ್ವಿ ಜೈಸ್ವಾಲ್ ಲಯಕಂಡುಕೊಂಡಿರುವುದು ಖುಷಿಯ ವಿಚಾರ.

# ಎಲ್ಲೇ ಇದ್ದರೂ ಕೂಡಲೇ ಸ್ವದೇಶಕ್ಕೆ ಬಾ, ನನ್ನ ತಾಳ್ಮೆ ಪರೀಕ್ಷಿಸಬೇಡ

**ಬೆಂಗಳೂರು:** ಪ್ರಜ್ವಲ್ ನೀನು ಎಲ್ಲಿಯೇ ಇದ್ದರೂ ಪೊಲೀಸರ ಮುಂದೆ ಶರಣಾಗಿ, ವಿಚಾರಣೆಯನ್ನು ಎದುರಿಸಬೇಕು ಎಂದು ಮಾಜಿ ಪ್ರಧಾನಿ ಹೆಚ್ಡಿ ದೇವೇಗೌಡ ಸೂಚನೆ ನೀಡಿದ್ದಾರೆ.

ಈ ಸಂಬಂಧ ಸಾಮಾಜಿಕ ಜಾಲತಾಣದಲ್ಲಿ ಎಚ್ಚರಿಕೆ ಪತ್ರವನ್ನು ಹಂಚಿಕೊಂಡಿರುವ ಅವರು, ಈ ಎಚ್ಚರಿಕೆಗೆ ತಲೆಬಾಗದಿದ್ದಲ್ಲಿ, ಅವನು ಮನೆಯವರ ಕಣ್ಣಲ್ಲಿ ಏಕಾಂಗಿಯಾಗುವುದರಲ್ಲಿ ಸಂದೇಹವಿಲ್ಲ. ನನ್ನ ಬಗ್ಗೆ ಅವನಿಗೆ ಏನಾದರೂ ಗೌರವವಿದ್ದಲ್ಲಿ ಕೂಡಲೇ ಹಿಂದಿರುಗಿ ಬರಬೇಕು ಎಂದು ಹೇಳಿದ್ದಾರೆ.

**ಪತ್ರದಲ್ಲಿ ಏನಿದೆ?:** ನಾನು ಮೇ 18ನೇ ತಾರೀಖಿನಂದು ದೇವಸ್ಥಾನಕ್ಕೆ ಹೊರಟಿದ್ದ ಸಂದರ್ಭದಲ್ಲಿ ಪ್ರಜ್ವಲ್ ರೇವಣ್ಣನ ಕುರಿತಾಗಿ ಮಾತನಾಡಿದ್ದೆ. ಆತ ನನಗೆ ನನ್ನ ಕುಟುಂಬಕ್ಕೆ, ನನ್ನ ಸಹೋದ್ಯೋಗಿಗಳಿಗೆ, ಸ್ನೇಹಿತರಿಗೆ ಮತ್ತು ನನ್ನ ಪಕ್ಷದ ಕಾರ್ಯಕರ್ತರಿಗೆ ತಂದೊಡ್ಡಿರುವ ಆಘಾತ ಮತ್ತು ನೋವಿನಿಂದ ಹೊರಬಂದು ಮಾತನಾಡಲು ಕೊಂಚ ಸಮಯ ಹಿಡಿಯಿತು.

ನಾನು ಈಗಾಗಲೇ ಸ್ಪಷ್ಟಪಡಿಸಿರುವ ಹಾಗೆ ಕಾನೂನಿನ ಪ್ರಕಾರ ಅವನು ತಪ್ಪಿತಸ್ಥನಾದರೆ ಅವನಿಗೆ ಅತ್ಯಂತ ಕಠಿಣ ಶಿಕ್ಷೆ ವಿಧಿಸಬೇಕು. ನನ್ನ ಈ ನಿಲುವನ್ನು ನನ್ನ ಮಗ ಮತ್ತು ಕರ್ನಾಟಕದ ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿಯವರು ಹಗರಣ ಹೊರಬಿದ್ದ ಮೊದಲ ದಿನದಿಂದಲೇ ಪ್ರತಿಪಾದಿಸಿದ್ದಾರೆ.



ನಾನು ಈಚಿನ ದಿನಗಳಲ್ಲಿ ನಡೆದಿರುವ ರಾಜಕೀಯ ಪಿತೂರಿಗಳು, ಚಿತಾವಣೆಗಳು, ಉತ್ಪ್ರೇಕ್ಷೆಗಳು ಮತ್ತು ಮಿಥ್ಯಾರೋಪಗಳ ಬಗ್ಗೆ ಈಗ ವಿಶ್ಲೇಷಣೆ ಮಾಡಲು ಹೋಗುವುದಿಲ್ಲ. ಅವುಗಳನ್ನು ಮಾಡಿದವರು ದೇವರಿಗೆ ಉತ್ತರಿಸಬೇಕಾಗುತ್ತದೆ ಮತ್ತು ತಾವು ಎಸಗಿದ ಕೃತ್ಯಗಳಿಗೆ ಸೂಕ್ತ ಬೆಲೆ ತೆರಬೇಕಾಗುತ್ತದೆ ಎಂದು ನಂಬಿದ್ದೇನೆ. ನನ್ನ ಸತ್ಯ ಮತ್ತು ನೋವಿನ ಹೊರೆಯನ್ನು ಭಗವಂತನ ಪದತಳದಲ್ಲಿ ಇರಿಸಿದ್ದೇನೆ.

ಈ ಸಂದರ್ಭದಲ್ಲಿ ನಾನು ಈಗ ಒಂದು ಕೆಲಸವನ್ನಷ್ಟೇ ಮಾಡಬಲ್ಲೆ. ಅದೇನೆಂದರೆ, ಪ್ರಜ್ವಲ್ ಎಲ್ಲಿದ್ದರೂ ಬಂದು ಪೊಲೀಸರ ಮುಂದೆ ಶರಣಾಗಿ, ವಿಚಾರಣೆಯನ್ನು ಎದುರಿಸಬೇಕು. ಇದನ್ನು ನಾನು ಯಾವುದೇ ಮುಲಾಜು, ಮರ್ಜಿಯಿಲ್ಲದೆ ಹೇಳುತ್ತಿದ್ದೇನೆ. ಇದು ನಾನು ಅವನಿಗೆ ಕೊಡುತ್ತಿರುವ ಎಚ್ಚರಿಕೆ ಎಂದು ಕೂಡ ತಿಳಿಯಬೇಕು. ಅವನು ಈ ಎಚ್ಚರಿಕೆಗೆ ಮನ್ನಣೆ ಕೊಡದಿದ್ದಲ್ಲಿ ಅವನು ನನ್ನ ಮತ್ತು ಕುಟುಂಬದವರೆಲ್ಲರ ಕೋಪವನ್ನೂ ಎದುರಿಸಬೇಕಾಗುತ್ತದೆ. ಅವನು ಎಸಗಿದ್ದಾನೆ ಎನ್ನಲಾದ ತಪ್ಪುಗಳನ್ನು ತೀರ್ಮಾನಿಸಲು ಕಾನೂನು ಇದೆ. ಆದರೆ ಈ ಎಚ್ಚರಿಕೆಗೆ ಅವನು ತಲೆಬಾಗದಿದ್ದಲ್ಲಿ, ಅವನು ಮನೆಯವರ ಕಣ್ಣಲ್ಲಿ ಏಕಾಂಗಿಯಾಗುವುದರಲ್ಲಿ ಸಂದೇಹವಿಲ್ಲ. ನನ್ನ ಬಗ್ಗೆ ಅವನಿಗೆ ಏನಾದರೂ ಗೌರವವಿದ್ದಲ್ಲಿ ಅವನು ಕೂಡಲೇ ಹಿಂದಿರುಗಿ ಬರಬೇಕು.

ನಾನಾಗಲಿ, ನನ್ನ ಕುಟುಂಬದವರಾಗಲಿ ಈ ವಿಚಾರಣೆಯಲ್ಲಿ ಹಸ್ತಕ್ಷೇಪ ಮಾಡುವುದಿಲ್ಲ ಎಂದು ಭರವಸೆ ಕೊಡುತ್ತೇನೆ. ಇದರಲ್ಲಿ ಯಾವುದೇ ಭಾವನೆಗೆ ಸಿಲುಕದೆ, ಅವನು ಎಸಗಿದ್ದಾನೆ ಎನ್ನಲಾದ ಕೃತ್ಯಗಳು ಮತ್ತು ತಪ್ಪುಗಳಿಂದ ನೊಂದಿರುವ, ಅನ್ಯಾಯಕ್ಕೆ ಒಳಗಾಗಿರುವ ಎಲ್ಲರಿಗೂ ನ್ಯಾಯ ಸಿಗುವುದಷ್ಟೇ ನನಗೆ ಮುಖ್ಯ. ಜನರ ವಿಶ್ವಾಸವನ್ನು ಮರಳಿ ಪಡೆಯುವುದಷ್ಟೇ ನನ್ನ ಗುರಿ. ಜನರು ಆರು ದಶಕಗಳ ಕಾಲದ ನನ್ನ ರಾಜಕೀಯ ಜೀವನದುದ್ದಕ್ಕೂ ನನ್ನ ಜೊತೆಗೆ ನಿಂತಿದ್ದಾರೆ. ಅವರಿಗೆ ನಾನು ಸದಾ ಋಣಿ ಮತ್ತು ನಾನು ಬದುಕಿರುವವರೆಗೂ ಅವರ ಹಿತದ ವಿರುದ್ಧ ನಡೆದುಕೊಳ್ಳುವುದಿಲ್ಲ.

# ರಘುಪತಿ ಭಟ್‌ಗೆ ಸುನಿಲ್ ಕುಮಾರ್ ಎಚ್ಚರಿಕೆ

**ಉಡುಪಿ:** 24 ಗಂಟೆಯೊಳಗಾಗಿ ರಘುಪತಿ ಭಟ್ ಅವರು ವಿಧಾನಪರಿಷತ್ ಚುನಾವಣಾ ಕಣದಿಂದ ನಿವೃತ್ತರಾಗದಿದ್ದರೆ ಪಕ್ಷದಿಂದ ಶಿಸ್ತುಕ್ರಮ ಅನಿವಾರ್ಯ ಎಂದು ಬಿಜೆಪಿ ಪ್ರಧಾನ ಕಾರ್ಯದರ್ಶಿ ಸುನಿಲ್ ಕುಮಾರ್ ಎಚ್ಚರಿಕೆ ನೀಡಿದ್ದಾರೆ.



ಉಡುಪಿಯಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ರಘುಪತಿ ಭಟ್ ಅವರು ಪಕ್ಷದ ಅಧಿಕೃತ ಅಭ್ಯರ್ಥಿಯ ವಿರುದ್ಧ ಚುನಾವಣಾ ಕಣಕ್ಕೆ ಇಳಿದಿದ್ದಾರೆ. ಅವರ ಜೊತೆ ನಾನು ಮಾತನಾಡಿದ್ದೇನೆ. ಪಕ್ಷದ ಅಧಿಕೃತ ಅಭ್ಯರ್ಥಿಯ ಗೆಲುವಿಗೆ ಏನು ಬೇಕೋ ಅದನ್ನೆಲ್ಲ ನಾವು ಪಕ್ಷದ ವತಿಯಿಂದ ಮಾಡುತ್ತೇವೆ. ರಘುಪತಿ ಭಟ್ ಆಗಲಿ ಯಾರೇ ಆಗಲಿ, ಪಕ್ಷಕ್ಕೆ ಮುಜುಗರ ತರುವ ಕೆಲಸವನ್ನು ಯಾರೇ ಮಾಡಿದರೂ ಪಕ್ಷ ಶಿಸ್ತುಕ್ರಮ ತೆಗೆದುಕೊಳ್ಳುತ್ತದೆ. ಅವರಿಗೆ ಇನ್ನೂ ಕಾಲಾವಕಾಶ ಇದೆ, ಅವರು ಕಣದಿಂದ ನಿವೃತ್ತಿ ಆಗಬೇಕು ಎಂದು ಒತ್ತಾಯಿಸಿದ್ದಾರೆ.

ಬೆಳ್ತಂಗಡಿ ಶಾಸಕ ಹರೀಶ್ ಪೂಂಜ ವಿರುದ್ಧ ಕ್ರಮದ ವಿಚಾರವಾಗಿ, ರಾಜಕೀಯ ದುರುದ್ದೇಶದ ಬಂಧನದ ಹುನ್ನಾರ ನಡೆಸಲಾಗಿದೆ. ರಾಜ್ಯ ಸರ್ಕಾರದ ಈ ಕ್ರಮ ಸರಿಯಲ್ಲ. ಜನರಿಗೆ ರಕ್ಷಣೆ ಕೊಡುವುದು ವಿಶ್ವಾಸ ನಿರ್ಮಾಣ ಮಾಡುವುದು ಪೊಲೀಸರ ಜವಾಬ್ದಾರಿ. ಪೊಲೀಸರೇ ಗೂಂಡಾ ರೀತಿ ವರ್ತನೆ ಮಾಡಿದರೆ ವ್ಯವಸ್ಥೆಗೆ ಮಾರಕ. ಬೆಳ್ತಂಗಡಿಯಲ್ಲಿ ಕಾನೂನು ಉಲ್ಲಂಘಿಸುವ ಯಾವುದೇ ಘಟನೆ ನಡೆದಿರಲಿಲ್ಲ. ವಿನಾಕಾರಣ ರಾಜಕೀಯ ದ್ವೇಷದಿಂದ ಬಂಧನಕ್ಕೆ ಮುಂದಾಗಿದ್ದಾರೆ ಎಂದು ಅವರು ಆರೋಪಿಸಿದ್ದಾರೆ.

ಈ ವಿಚಾರವನ್ನು ತಾರ್ಕಿಕ ಅಂತ್ಯಕ್ಕೆ ತೆಗೆದುಕೊಂಡು ಹೋಗುತ್ತೇವೆ. ಈ ವಿಚಾರವಾಗಿ ಮುಂದಿನ ವಾರ ಗೃಹ ಸಚಿವರನ್ನು ಭೇಟಿ ಮಾಡುತ್ತೇವೆ. ಜಿಲ್ಲೆಯ ಶಾಂತಿಯನ್ನು ಕದಡುವ ಪ್ರಯತ್ನ ಪೊಲೀಸರಿಂದ ನಡೆಯುತ್ತಿದೆ. ಈ ಬಗ್ಗೆ ಗೃಹ ಸಚಿವರಿಂದ ಸ್ಪಷ್ಟನೆ ಕೇಳುತ್ತೇವೆ. ಅಧಿವೇಶನದಲ್ಲಿ ನಿಶ್ಚಿತವಾಗಿ ವಿಚಾರವನ್ನು ಪ್ರಸ್ತಾಪ ಮಾಡುತ್ತೇವೆ. ಒಬ್ಬ ಶಾಸಕನನ್ನು ಬೆದರಿಸುವ ಮೂಲಕ ಬಿಜೆಪಿ ಕಾರ್ಯಕರ್ತರನ್ನು ಮಟ್ಟ ಹಾಕುವ ಹುನ್ನಾರ ಇದು. ಕಾರ್ಯಕರ್ತರು ಯಾವುದೇ ರೀತಿಯಲ್ಲಿ ಹೆದರುವ ಅಗತ್ಯ ಇಲ್ಲ. ಕಾರ್ಯಕರ್ತರ ರಕ್ಷಣೆಗೆ ಪಕ್ಷ ಸಿದ್ಧವಿದೆ. ಸಿದ್ದರಾಮಯ್ಯ ಸರ್ಕಾರ ಜನಪ್ರಿಯತೆ ಕಳೆದುಕೊಂಡಿದೆ. ಪೊಲೀಸರ ಮುಖಾಂತರ ದಬ್ಬಾಳಿಕೆ ಮಾಡುತ್ತಿದ್ದಾರೆ. ಯಾರಿಗೂ ಕೂಡ ಅಧಿಕಾರ ಶಾಶ್ವತ ಅಲ್ಲ ಎಂದು ಅವರು ಹೇಳಿದ್ದಾರೆ.

ಪ್ರಜ್ವಲ್ ಪಾಸ್‌ಪೋರ್ಟ್ ಸೀಸ್ ಮಾಡಲು ಕೇಂದ್ರ ಸರ್ಕಾರ ನಿರಾಸಕ್ತಿ ಎಂಬ ಗೃಹ ಸಚಿವರ ಆರೋಪಕ್ಕೆ ಪ್ರತಿಕ್ರಿಯಿಸಿದ ಅವರು, ಸುನೀಲ್ ಕುಮಾರ್, ಇಷ್ಟೆಲ್ಲಾ ಘಟನೆಗಳಾಗುವಾಗ ರಾಜ್ಯ ಗುಪ್ತಚರ ಇಲಾಖೆ ಏನು ಮಾಡುತ್ತಿತ್ತು? ಈ ಬಗ್ಗೆ ರಾಜ್ಯ ಗುಪ್ತಚರ ಇಲಾಖೆ ಏನೂ ಮಾಡಿಲ್ಲ. ವಿದೇಶಕ್ಕೆ ಪರಾರಿಯಾಗುವಾಗ ಕೈಕಟ್ಟಿ ಕುಳಿತಿದ್ದು ಯಾಕೆ ಎಂದು ಅವರು ಪ್ರಶ್ನಿಸಿದ್ದಾರೆ.

ಪ್ರಜ್ವಲ್ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ಬಿಜೆಪಿಯ ಸಹಮತ ಇದ್ದೇ ಇದೆ. ತಪ್ಪು ಮಾಡಿದವರಿಗೆ ಶಿಕ್ಷೆ ಆಗಲೇಬೇಕು. ಹೆಣ್ಣು ಮಕ್ಕಳಿಗೆ ಯಾರೂ ಅಗೌರವ ತೋರಿಸಬಾರದು ಎಂದು ಅವರು ಹೇಳಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com